ಸಂಪುಟ: 04 ಸಂಚಿಕೆ:101 ಪುಟಗಳು: 08 ಸೋಮವಾರ 24 ಜೂನ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಕಷ್ಟನಷ್ಟಗಳಿಗೆ ಕಲ್ಲಾಗು, ಚುಚ್ಚು ಮಾತುಗಳಿಗೆ ಮುಳ್ಳಾಗು, ಏನಾದರೂ ಮುಖದ ಮೇಲಿರಲಿ ನಗು, ನೀ ಧೈರ್ಯದಿ ಮುಂದೆ ಸಾಗು...

## ತನ್ನ ತಪ್ಪಿಗೆ 49 ವರ್ಷಗಳಾದರೂ ಕ್ಷಮೆ ಕೇಳಿಲ್ಲ



• ಉದಯವಾಹಿನಿ, ಬೆಂಗಳೂರು

ದೇಶಕ್ಕೆ ತುರ್ತು ಪರಿಸ್ಥಿತಿ ಹೇರಿದ್ದ ಕಾಂಗ್ರೆಸ್ ಪಕ್ಷವು ತಾನು ಮಾಡಿದ ತಪ್ಪಿಗೆ 49 ವರ್ಷಗಳಾದರೂ ಕ್ಷಮೆ ಕೇಳಿಲ್ಲ ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಟೀಕಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಭಾನುವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ದೇಶಕ್ಕೆ ತುರ್ತು ಪರಿಸ್ಥಿತಿ ಹೇರುವ ಇಂಥ ಪರಿಸ್ಥಿತಿ ಯಾವತ್ತೂ ಬರಬಾರದು ಎಂದಿದ್ದರೆ, ಆ ಕರಾಳ ಅಧ್ಯಾಯದ ನೆನಪು ಮಾಡಿಕೊಳ್ಳುವ ಅವಶ್ಯಕತೆ ಇದೆ. ಕಾಂಗ್ರೆಸ್ಸಿಗೆ ತಾವು ಮಾಡಿದ್ದು ತಪ್ಪು ಎಂದು ಅನಿಸಿದರೆ, ಸಾರ್ವಜನಿಕ ಕ್ಷಮೆ ಯಾಚನೆ ಮಾಡಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್ ಪಕ್ಷದ ಡಿಎನ್‌ಎಯಲ್ಲೇ ವ್ಯಕ್ತಿಗತ ಸ್ವಾರ್ಥಕ್ಕಾಗಿ ಏನನ್ನು ಬೇಕಾದರೂ ಮಾಡುವ ಮನಸ್ಥಿತಿ ಇದೆ. ಈ ಮನಸ್ಥಿತಿ ಪ್ರಜಾಪ್ರಭುತ್ವಕ್ಕೂ ಅಪಾಯಕಾರಿ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಕಾಂಗ್ರೆಸ್ ಪಕ್ಷವು ಶ್ರೀಮತಿ ಇಂದಿರಾ ಗಾಂಧಿಯವರ ನೇತೃತ್ವದಲ್ಲಿ ತುರ್ತು ಪರಿಸ್ಥಿತಿ ಹೇರುವ ಮೂಲಕ ಪ್ರಜಾಪ್ರಭುತ್ವದ ಕತ್ತು ಹಿಸುಕುವ ಕೆಲಸ ಮಾಡಿತ್ತು. ಅದೊಂದು ಕರಾಳ ದಿನ ಎಂದು ತಿಳಿಸಿದರು.

ಅವತ್ತು ಮಾನ್ಯ ಸಿದ್ದರಾಮಯ್ಯನವರು ಕಾಂಗ್ರೆಸ್ ಜೊತೆಗಿದ್ದರೋ ಇಲ್ಲವೋ ಗೊತ್ತಿಲ್ಲ. ಆದರೆ, ಮಲ್ಲಿಕಾರ್ಜುನ ಖರ್ಗೆಯವರು ಕಾಂಗ್ರೆಸ್ಸಿನ ಜೊತೆಗಿದ್ದರು. ಶ್ರೀಮತಿ ಇಂದಿರಾ ಗಾಂಧಿಯವರು ಡಾ. ಬಿ.ಆರ್.ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನವನ್ನು ದಮನ ಮಾಡಿದ್ದರು ಎಂಬುದು ಖರ್ಗೆಯವರಿಗೆ ಅರ್ಥ ಆಗಬೇಕಿತ್ತು ಎಂದು ತಿಳಿಸಿದರು. ತನ್ನ ಸ್ವಾರ್ಥಕ್ಕಾಗಿ, ಅಧಿಕಾರದಲ್ಲಿ ಉಳಿಯಬೇಕೆಂಬ ಏಕೈಕ ದುರುದ್ದೇಶದಿಂದ ಅಲಹಾಬಾದ್ ಕೋರ್ಟ್ ತೀರ್ಪಿನ ವಿರುದ್ಧ ಸಂವಿಧಾನವನ್ನೇ ಬುಡಮೇಲು ಮಾಡಿದ್ದರು. ವಿಪಕ್ಷ ನಾಯಕರನ್ನೆಲ್ಲ ಜೈಲಿಗೆ ಅಟ್ಟಿದ್ದಲ್ಲದೆ, ಪತ್ರಿಕಾ ಸ್ವಾತಂತ್ರ್ಯ ಹರಣ ಮಾಡಿದ್ದರು. ಮೂಲಭೂತ ಹಕ್ಕುಗಳ ದಮನ ಮಾಡಿದ್ದರು ಎಂದು ವಿವರಿಸಿದರು.

## ತಾಳಮೇಳವಿಲ್ಲದ ತಗಡು ಸರ್ಕಾರ: ವಿಪಕ್ಷ ನಾಯಕ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಶಾಲೆಗಳಿಗೆ ಕತ್ತಲೆ ಭಾಗ್ಯ' ವಿಶೇಷ ವರದಿಯನ್ನು ಉಲ್ಲೇಖಿಸಿ ಮಾತನಾಡಿದ ವಿಪಕ್ಷ ನಾಯಕ ಆರ್. ಅಶೋಕ, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. 'ಅಸಮರ್ಥ ಸಿಎಂ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಎಲ್ಲವೂ ಅಯೋಮಯವಾಗಿದ್ದು, ಮುಖ್ಯಮಂತ್ರಿಗಳ ಆದೇಶಕ್ಕೂ ಕವಡೆ ಕಾಸಿನ ಕಿಮ್ಮತ್ತಿಲ್ಲದಂತಾಗಿದೆ. ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳಲ್ಲಿ ಉಚಿತ ವಿದ್ಯುತ್ ಪೂರೈಕೆ ಮಾಡುವಂತೆ ಸ್ಪಷ್ಟ ಆದೇಶವಿದ್ದರೂ ಸಹ ಅದನ್ನು ಉಲ್ಲಂಘನೆ ಮಾಡಿರುವ ಇಂಧನ ಇಲಾಖೆ ವಿದ್ಯುತ್ ಬಿಲ್ ಪಾವತಿಸುವಂತೆ ಒತ್ತಡ ಹೇರುವ ಜೊತೆಗೆ ಹಲವು ಶಾಲೆಗಳಲ್ಲಿ ವಿದ್ಯುತ್ ಸ್ಥಗಿತಗೊಳಿಸಿದೆ' ಎಂದರು.

'ಈ ತಗಡು ಕಾಂಗ್ರೆಸ್ ಸರ್ಕಾರದಲ್ಲಿ ಇಲಾಖೆಗಳ ಮಧ್ಯೆ ತಾಳಮೇಳವೂ ಇಲ್ಲ, ಅಧಿಕಾರಿಗಳ ನಡುವೆ ಸಮನ್ವಯತೆಯೂ ಇಲ್ಲ' ಎಂದು ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

## ನನ್ನ ಅಭಿಪ್ರಾಯ ಕೇಳಿ ಡಿಸಿಎಂ ಮಾಡುವುದಿಲ್ಲ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆ ಬಳಿಕ ಡಿಸಿಎಂ ವಿಚಾರ ಮತ್ತೆ ಮುನ್ನೆಲೆಗೆ ಬಂದಿದೆ. ಚುನಾವಣೆಗೆ ಮುನ್ನ ರಾಜಕೀಯ ಸಂಚಲನ ಮೂಡಿಸಿದ್ದ ಡಿಸಿಎಂ ವಿಚಾರವನ್ನು ಸಚಿವರಾಜದ ಕೆ.ಎನ್.ರಾಜಣ್ಣ, ಜಮೀರ್ ಅಹ್ಮದ್ ಮತ್ತೆ ಚರ್ಚಾ ವಸ್ತುವಾಗಿಸಿದ್ದಾರೆ. ಈ ಕುರಿತು ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ, ಹೆಚ್ಚುವರಿ ಡಿಸಿಎಂ ಮಾಡಿದರೆ ತಪ್ಪಿಲ್ಲ ಎಂದು ಅವರು ತಮ್ಮ ಅಭಿಪ್ರಾಯ ಹೇಳಿದ್ದಾರೆ. ನನ್ನ ಅಭಿಪ್ರಾಯ ಏನೂ ಕೇಳಿ ಡಿಸಿಎಂ ಮಾಡುಸವುದಿಲ್ಲ ಎಂದು ಹೆಚ್ಚುವರಿ ಡಿಸಿಎಂ ನೇಮಕದ ವಿಚಾರದಲ್ಲಿ ಡಾ.ಪರಮೇಶ್ವರ್ ಅಂತರ ಕಾಯ್ದುಕೊಂಡಿದ್ದಾರೆ. ಸೂರಜ್ ರೇವಣ್ಣ ವಿರುದ್ಧ ಸಲಿಂಗ ಲೈಂಗಿಕ ದೌರ್ಜನ್ಯ ಪ್ರಕರಣ ದಾಖಲಾಗಿದೆ. ಈ ರೀತಿಯ ಪ್ರಕರಣಗಳನ್ನು ಸಿಐಡಿಗೆ ಕೊಡಬೇಕಾಗುತ್ತದೆ. ಇದರಲ್ಲಿ ರಾಜಕೀಯ ಏನೂ ಇಲ್ಲ. ರಾಜಕೀಯ ಪ್ರೇರಿತ ಎನ್ನುವುದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ಡಾ.ಪರಮೇಶ್ವರ ಪ್ರತಿಕ್ರಿಯಿಸಿದ್ದಾರೆ.

## ರಾಜಕೀಯ ನಿವೃತ್ತಿ? ಬಗ್ಗೆ ಸಚಿವ ಮಹತ್ವದ ಹೇಳಿಕೆ

• ಉದಯವಾಹಿನಿ, ಬಾಗಲಕೋಟೆ

ರಾಜಕೀಯ ನಿವೃತ್ತಿ ಬಗ್ಗೆ ಸಚಿವ ಕೆ.ಎನ್. ರಾಜಣ್ಣ ಮಹತ್ವದ ಹೇಳಿಕೆ ನೀಡಿದ್ದು, ಇನ್ಮುಂದೆ ನಾನು ಯಾವ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಉಪಮುಖ್ಯಮಂತ್ರಿ ಹುದ್ದೆ ಯ ಆಕಾಂಕ್ಷಿಯಲ್ಲ. ನಾನು ಮುಂದಿನ ದಿನಗಳಲ್ಲಿ ಯಾವ ಚುನಾವಣೆಯಲ್ಲೂ ಸ್ಪರ್ಧಿಸುವುದಿಲ್ಲ ಎನ್ನುವ ಮೂಲಕ ರಾಜಕೀಯ ನಿವೃತ್ತಿ ಬಗ್ಗೆ ಸುಳಿವು ನೀಡಿದ್ದಾರೆ. ರಾಜ್ಯದಲ್ಲಿ ಉಪಮುಖ್ಯಮಂತ್ರಿ ಹುದ್ದೆ ವಿಚಾರ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ ತಾವು ಡಿಸಿಎಂ ಹುದ್ದೆಯ ಆಕಾಂಕ್ಷಿಯಲ್ಲ ಎನ್ನುವ ಮೂಲಕ ಡಿಸಿಎಂ ಹುದ್ದೆ ಕುರಿತು ಸ್ಪಷ್ಟನೆ ನೀಡಿದ್ದಾರೆ.

## ನನ್ನ ಕುಟುಂಬದ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ: ರೇವಣ್ಣ

• ಉದಯವಾಹಿನಿ, ಬೆಂಗಳೂರು

ಜೆಡಿಎಸ್ ಎಂಎಲ್ ಸಿ ಸೂರಜ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಪ್ರತಿಕ್ರಿಯೆ ನೀಡಿದ್ದು, ನನ್ನ ಕುಟುಂಬದ ವಿರುದ್ಧ ವ್ಯವಸ್ಥಿತವಗಿ ಷಡ್ಯಂತ್ರ ನಡೆಯುತ್ತಿದೆ ಎಂದು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ಕುಟುಂಬದ ವಿರುದ್ಧ ವ್ಯವಸ್ಥಿತವಾಗಿ ಷಡ್ಯಂತ್ರ ಮಾಡಲಾಗಿದೆ. ನಾನು ಈ ರೀತಿಯ ಷಡ್ಯಂತ್ರಕ್ಕೆ ಹೆದರುವುದಿಲ್ಲ. ನಾನು, ದೇವರು, ನ್ಯಾಯಾಂಗದ ಮೇಲೆ ನಂಬಿಕೆ ಇಟ್ಟುಕೊಂಡಿದ್ದೇನೆ ಎಂದು ಹೇಳಿದ್ದಾರೆ. ಇನ್ನು ಸೂರಜ್ ರೇವಣ್ಣ ಅವರನ್ನು ಇಂದು ಬೆಳಗ್ಗೆ ಹಾಸನದ ಸೆನ್ ಪೊಲೀಸ್ ಠಾಣೆಯ ಪೊಲೀಸರು ಬಂಧಿಸಿದ್ದು, ಹಾಸನದ ಹಿಮ್ಸ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಕರೆದುಕೊಂಡು ಹೋಗಿದ್ದು, ಸೂರಜ್ ರೇವಣ್ಣ ವಿರುದ್ಧದ ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣವನ್ನು ಸಿಐಡಿ ತನಿಖೆಗೆ ನೀಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

## ದೇವದಾರಿ ಮೈನಿಂಗ್‌ಗೆ ತಡೆ ನೀಡಿ ರಾಜ್ಯ ಸರ್ಕಾರ ಆದೇಶ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಹಿ ಹಾಕಿದ್ದ ಇಮೊ ದಲ ಕಡತಕ್ಕೆ ವಿಘ್ನ ಉಂಟಾಗಿದ್ದು, ಮೈನಿಂಗ್‌ಗೆ ರಾಜ್ಯ ಸರ್ಕಾರ ಬ್ರೇಕ್ ಹಾಕಿದೆ. ಕೇಂದ್ರ ಬೃಹತ್ ಕೈಗಾರಿಕೆ, ಉಕ್ಕು ಖಾತೆ ಸಚಿವರಾಗಿ ಜವಾಬ್ದಾರಿ ವಹಿಸಿಕೊಂಡ ಬಳಿಕ ಮೊದಲಿಗೆ ಸಹಿ ಹಾಕಿದ್ದ ರಾಜ್ಯಕ್ಕೆ ಸಂಬಂಧಿಸಿದ ಕುದುರೆಮುಖ ಕಬ್ಬಿಣ ಅದಿರು ಸಂಸ್ಥೆಯ ಗಣಿಗಾರಿಕೆಗೆ ಸಂಬಂಧಿಸಿದ ಯೋಜನೆಗೆ ರಾಜ್ಯ ಸರ್ಕಾರ ತಡೆ ನೀಡಿದೆ.

# ಇಸ್ರೋ ಮ್ಯಾಜಿಕ್ ಅಪರೂಪದ ಹ್ಯಾಟ್ರಿಕ್

1 ಇಸ್ರೋ ಹಿರಿಮೆ ಗರಿಮೆಗೆ ಮತ್ತೊಂದು ಕಳಶ ಮೂಡಿದೆ.

2 ಮರುಬಳಕೆ ರಾಕೆಟ್‌ಗಳ ಉಡಾವಣೆಯಿಂದ ಹೆಚ್ಚಿನ ಹಣ ಉಳಿತಾಯ.

3 ೪.೫ ಕಿಲೋಮೀಟರ್ ಎತ್ತರದಲ್ಲಿ ಹಾರಾಟ ನಡೆಸಿದ ರಾಕೆಟ್, ಲ್ಯಾಂಡ್

4 ಇಸ್ರೋ ತಂಡಕ್ಕೆ ಅಧ್ಯಕ್ಷ ಎಸ್. ಸೋಮನಾಥ್ ಅಭಿನಂದನೆ






• ಮತ್ತೊಂದು ಮೈಲಿಗಲ್ಲು ಸಾಧಿಸಿದ ಇಸ್ರೋ
• ಪುಷ್ಪಕ್ ಸೇಫ್, ಪುಷ್ಪಕ್ ಉಡಾವಣಾ ವಾಹನ ಪರೀಕ್ಷೆ ಯಶಸ್ವಿ

**ಸಾಧನೆಗೆ ಹರ್ಷ**
ಪುಷ್ಪಕ್ ಖ್ಯಾತಿಯ ಮರುಬಳಕೆ ಮಾಡಬಹುದಾದ ಉಡಾವಣಾ ವಾಹನದ ಪ್ರಯೋಗವನ್ನು ಇಸ್ರೋ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ತಂಡದ ಸಾಧನೆಗೆ ಇಸ್ರೋ ತಂಡಕ್ಕೆ ಅಧ್ಯಕ್ಷ ಎಸ್. ಸೋಮನಾಥ್ ಅಭಿನಂದನೆ ಸಲ್ಲಿಸಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಾಧನೆ ಮಾಡಲು ಸ್ಫೂರ್ತಿಯಾಗಲಿ ಎಂದು ಹಾರೈಸಿದ್ದಾರೆ.

**ರಾಕೆಟ್ ವೈಶಿಷ್ಟ್ಯವೇನು?**
ಪುಷ್ಪಕ್ ಗಗನನೌಕೆಯು ಮರುಬಳಕೆ ಮಾಡುವ ಬಾಹ್ಯಾಕಾಶ ವಾಹನವಾಗಿದ್ದು, ಇದನ್ನು ರಾಕೆಟ್ ರೀತಿ ಉಡಾವಣೆ ಮಾಡಲಾಗುತ್ತದೆ. ಉಡಾವಣೆ ಬಳಿಕ ಇದು ಮತ್ತೆ ಲ್ಯಾಂಡ್ ಆಗುತ್ತದೆ ಎಂಬುದು ವಿಶೇಷವಾಗಿದೆ. ಇದು ಪುನಾ ಲ್ಯಾಂಡ್ ಆಗಲು ಇಸ್ರೋ ರೋಬೊಟಿಕ್ ತಂತ್ರಜ್ಞಾನ ಅಳವಡಿಸಿಕೊಂಡಿದೆ. ದೇಶೀಯವಾಗಿಯೇ ಇದನ್ನು ಅಭಿವೃದ್ಧಿಪಡಿಸಲಾಗಿದ್ದು, ರಾಮಾಯಣದಿಂದ ಸ್ಫೂರ್ತಿಗೊಂಡು ಇದಕ್ಕೆ ಪುಷ್ಪಕ್ ಎಂದು ಹೆಸರಿಡಲಾಗಿದೆ. ಬಾಹ್ಯಾಕಾಶ ಅವಶೇಷಗಳ ಪ್ರಮಾಣ ತಪ್ಪಿಸಲು, ಕಕ್ಷೆಯಲ್ಲಿರುವ ಉಪಗ್ರಹಗಳಿಗೆ ಇಂಧನ ಪೂರೈಸಲು ಮರುಬಳಕೆ ರಾಕೆಟ್‌ಗಳು ಮಹತ್ವದ ಪಾತ್ರ ನಿರ್ವಹಿಸಲಿವೆ.

• ಉದಯವಾಹಿನಿ, ನವದೆಹಲಿ

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಈ ಶತಮಾನದ ಪ್ರಯೋಗದ ಸಮಯದಲ್ಲಿ ಸಿಬ್ಬಂದಿಗಳಿಲ್ಲದ, ಮರುಬಳಕೆ ಮಾಡಬಹುದಾದ ಪುಷ್ಪಕ್ ಉಡಾವಣಾ ವಾಹನವನ್ನು ಸುರಕ್ಷಿತ ಲ್ಯಾಂಡಿಂಗ್ ಮಾಡುವ ಮೂಲಕ ಅಪರೂಪದ ಹ್ಯಾಟ್ರಿಕ್ ಸಾಧಿಸಿದೆ. ಮರುಬಳಕೆ ಮಾಡಬಹುದಾದ ಉಡಾವಣಾ ವಾಹನ (ಆರ್‌ಎಲ್‌ವಿ) ಲ್ಯಾಂಡಿಂಗ್ ಪ್ರಯೋಗದಲ್ಲಿ ಸತತ ಮೂರನೇ ಯಶಸ್ಸನ್ನು ಹೆಮ್ಮೆಯಿಂದ ಸಾಧಿಸಿದೆ ಎಂದು ಇಸ್ರೋ ಹೇಳಿಕೆಯಲ್ಲಿ ತಿಳಿಸಿದೆ. ಎಲ್‌ಇಎಕ್ಸ್ (03) ಸರಣಿಯ ಮೂರನೇ ಮತ್ತು ಅಂತಿಮ ಪರೀಕ್ಷೆಯನ್ನು 07:10 ಕ್ಕೆ ಕರ್ನಾಟಕದ ಚಿತ್ರದುರ್ಗದಲ್ಲಿರುವ ಏರೋನಾಟಿಕಲ್ ಟೆಸ್ಟ್ ರೇಂಜ್‌ನಲ್ಲಿ ನಡೆಸಲಾಯಿತು ಎಂದು ಅದು ಹೇಳಿದೆ. ಇಸ್ರೋ ಅಧ್ಯಕ್ಷ ಎಸ್ ಸೋಮನಾಥ್ ಅವರು, ಪುಷ್ಪಕ್ ಅಥವಾ ಮರುಬಳಕೆ ಮಾಡಬಹುದಾದ ಉಡಾವಣಾ ವಾಹನದಿಂದ ಇಸ್ರೋ ಹ್ಯಾಟ್ರಿಕ್ ಲ್ಯಾಂಡಿಂಗ್ ಅನ್ನು ಸಾಧಿಸಿದೆ, ಈಗ ಇದು ಪುಷ್ಪಕ್‌ನ ಕಕ್ಷೆಯ ಪರೀಕ್ಷೆಗೆ ವೇದಿಕೆಯನ್ನು ಸಿದ್ಧಪಡಿಸಿದೆ. ಇದನ್ನು ರಾಕೆಟ್‌ನಲ್ಲಿ ಬಾಹ್ಯಾಕಾಶಕ್ಕೆ ಉಡಾಯಿಸಲಾಗುತ್ತದೆ, ಮತ್ತು ನಂತರ ಅದು 21ನೇ ಶತಮಾನದಲ್ಲಿ ಸ್ವದೇಶಿ ರೀತಿಯಲ್ಲಿ ಮರುಬಳಕೆ ಮಾಡಬಹುದಾದ ರಾಕೆಟ್‌ಗಳನ್ನು ಬಳಸಿಕೊಳ್ಳಲು ಇಸ್ರೋ ಒಂದು ಅನನ್ಯವಾದ ಆತನಿರ್ಭರ್ ಪ್ರಯತ್ನವನ್ನು ಭೂಮಿಯ ಮೇಲೆ ಸುರಕ್ಷಿತವಾಗಿ ಇಳಿಸಬಹುದು. ವಿದ್ಯುನ್ಮಾನವನ್ನು ಹೊಂದಿರುವ ರಾಕೆಟ್‌ನ ಅತ್ಯಂತ ದುಬಾರಿ ಭಾಗವನ್ನು ತರುವುದು ಪುಷ್ಪಕ್ ಅನ್ನು ಭಾರತಕ್ಕೆ ಭವಿಷ್ಯದ ರಾಕೆಟ್ ತಂತ್ರಜ್ಞಾನವನ್ನಾಗಿ ಮಾಡುತ್ತದೆ.

**ಭಾರತದ ಹ್ಯಾಟ್ರಿಕ್ ಸಾಧನೆ**

ಇಸ್ರೋ ತಂತ್ರಜ್ಞಾನವನ್ನು ಕರಗತ ಮಾಡಿಕೊಳ್ಳಲು ಶ್ರಮಿಸುತ್ತಿದೆ ಎಂದು ಅವರು ಹೇಳಿದರು. ಭಾರತವು ಕಕ್ಷೆಯ ಪರೀಕ್ಷೆಗೆ ಹೋದಾಗ ನಿಜವಾದ ದೊಡ್ಡ ಪರೀಕ್ಷೆ ಬರುತ್ತದೆ ಎಂದು ಸೋಮನಾಥ್ ಹೇಳುತ್ತಾರೆ. ಆರ್ಬಿಟಲ್ ರೀ-ಎಂಟ್ರಿ ವೆಹಿಕಲ್ ಅದರ ಹೊರ ಮೇಲ್ಮೈಯಲ್ಲಿ ಹೆಚ್ಚಿನ ತಾಪಮಾನದ ರಕ್ಷಣೆಯ ಅಂಚುಗಳನ್ನು ಹೊಂದಿರುತ್ತದೆ. ಲಿಕ್ವಿಡ್ ರಾಕೆಟ್ ಎಂಜಿನ್‌ಗಳು ಮತ್ತು ಹಿಂತೆಗೆದುಕೊಳ್ಳುವ ಲ್ಯಾಂಡಿಂಗ್ ಗೇರ್ ಇದು ಬಾಗಿಲಿನ ಮೂಲಕ ನಿಯೋಜಿಸಬಹುದಾದ ಪೇಲೋಡ್‌ಗೆ ಸ್ಥಳಾವಕಾಶವನ್ನು ಹೊಂದಿರುತ್ತದೆ. ಭಾರತದ ಸ್ವಂತ ಡೆಲ್ಟಾ ರೆಕ್ಕೆಯ ಬಾಹ್ಯಾಕಾಶ ನೌಕೆಯ ತಯಾರಿಕೆಯು ಸಿಬ್ಬಂದಿಗಳಿಲ್ಲದಿದ್ದರೂ, ಇತರ ಏಜೆನ್ಸಿಗಳು ಕಳೆದುಹೋದ ಟೊಳ್ಳಾದ ರಾಕೆಟ್ ಹಂತಗಳನ್ನು ಮರಳಿ ತರಲು ಪ್ರಯತ್ನಿಸುತ್ತಿರುವ ಹಂತದಲ್ಲಿ ಇದು ನಿಜಕ್ಕೂ ನಂಬಿಕೆಯ ದೊಡ್ಡ ಅಧಿಕವಾಗಿದೆ. ಇಂದಿನ ಪರೀಕ್ಷೆಯ ಯಶಸ್ಸಿನ ಆಧಾರದ ಮೇಲೆ ಕಕ್ಷೆಯ ಪರೀಕ್ಷೆಗಾಗಿ ಗಾತ್ರದಲ್ಲಿ ಹೆಚ್ಚು ದೊಡ್ಡದಾದ ಹೊಸ ವಾಹನವನ್ನು ತಯಾರಿಸಲಾಗುವುದು ಮತ್ತು ಅದನ್ನು ಬಾಹ್ಯಾಕಾಶಕ್ಕೆ ಹಾರಿಸುವ ಮೊದಲು ಲ್ಯಾಂಡಿಂಗ್ ಪ್ರಯೋಗದಲ್ಲಿ ಪರೀಕ್ಷಿಸಲಾಗುತ್ತದೆ ಮತ್ತು ಬಾಹ್ಯಾಕಾಶ ವಿಮಾನದಂತೆ ಭೂಮಿಗೆ ತರಲಾಗುತ್ತದೆ. ಮರುಬಳಕೆ ಮಾಡಬಹುದಾದ ಲ್ಯಾಂಡಿಂಗ್ ವೆಹಿಕಲ್ ಎಲ್‌ಇಎಕ್ಸ್-01 ಮತ್ತು 2 ಕಾರ್ಯಾಚರಣೆಗಳ ಯಶಸ್ಸಿನ ನಂತರ, ಎಲ್‌ಇಎಕ್ಸ್ ಹೆಚ್ಚು ಸವಾಲಿನ ಬಿಡುಗಡೆಯ ಪರಿಸ್ಥಿತಿಗಳಲ್ಲಿ ಸ್ವಾಯತ್ತ ಲ್ಯಾಂಡಿಂಗ್ ಸಾಮರ್ಥ್ಯವನ್ನು ಮರು-ಪ್ರದರ್ಶಿಸಿದಂತಾಗಿದೆ.

**ಸೇವೆಗೆ ಸನ್ನದ್ಧವಾದ ಸ್ವದೇಶಿ ಗಗನ ನೌಕೆ 'ಪುಷ್ಪಕ್'**

ಬಾಹ್ಯಾಕಾಶ ರಂಗದಲ್ಲಿ ತನ್ನದೇ ಆದ ಮಹತ್ವದ ಮೈಲಿಗಲ್ಲು ಸ್ಥಾಪಿಸುತ್ತಿರುವ ಇಸ್ರೊ, ಭಾನುವಾರ ಮತ್ತೊಂದು ಸಾಧನೆಗೆ ಸಾಕ್ಷಿಯಾಯಿತು. ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಕುಂದಾಪುರ ಬಳಿ ಇರುವ ಡಿಆರ್‌ಡಿಒ ಟೆಸ್ಟ್ ರೇಂಜ್-2 ಆವರಣದಲ್ಲಿ ಮಹತ್ವದ ಪ್ರಯೋಗ ನಡೆಸಿತು. 'ಮರು ಬಳಕೆ ಬಾಹ್ಯಾಕಾಶ ವಾಹನ'( ಆರ್ ಎಲ್ ವಿ)ದ ಲ್ಯಾಂಡಿಂಗ್ ಪ್ರಯೋಗವನ್ನು ಯಶಸ್ವಿಯಾಗಿ ನಡೆಸಿತು. ಬೆಳಿಗ್ಗೆ 7 ಗಂಟೆಗೆ 'ಪುಷ್ಪಕ್ ಗಗನ ನೌಕೆ' ಆಗಸಕ್ಕೆ ಚಿಮ್ಮಿತು. ಎಸ್‌ಯುವಿ ಕಾರ್‌ನಷ್ಟು ದೊಡ್ಡ ಗಾತ್ರದ ರೆಕ್ಕೆ ಇರುವ ರಾಕೆಟ್ ಇದಾಗಿದ್ದು ಯಶಸ್ವಿಯಾಗಿ ಉಡಾವಣೆಗೊಂಡಿತು. ಲ್ಯಾಂಡ್ ಆಗಬೇಕಿದ್ದ ಪ್ರಯೋಗದಲ್ಲಿ ಮೂರನೇ ಮತ್ತು ಅಂತಿಮ ಬಾರಿಗೆ ಯಶಸ್ವಿಯಾಯಿತು. ಇಸ್ರೋದ ಈ ಪ್ರಯೋಗವನ್ನು ಭಾರತದ ಆತ್ಮ ನಿರ್ಭರತೆ ಕಡೆಗಿನ ದಿಟ್ಟತನದ ಹೆಜ್ಜೆ ಎಂದೇ ಬಣ್ಣಿಸಲಾಗಿದೆ. ಪುಷ್ಪಕ್ ಗಗನ ನೌಕೆಯು ಮರು ಬಳಕೆ ಮಾಡಬಹುದಾದ ಬಾಹ್ಯಾಕಾಶ ವಾಹನವಾಗಿದೆ. ರಾಕೆಟ್ ರೀತಿ ಬಾಹ್ಯಾಕಾಶಕ್ಕೆ ಉಡಾವಣೆಗೊಳ್ಳುವ ಈ ವಾಹನ, ಮರಳಿ ಭೂಮಿಗೆ ಬಂದು ಲ್ಯಾಂಡ್ ಆಗುತ್ತದೆ. ಈ ವಾಹನವನ್ನು ಸ್ವದೇಶಿ ಗಗನ ನೌಕೆ ಎಂದೇ ಬಣ್ಣಿಸಲಾಗಿದೆ. ಮರು ಬಳಕೆ ರಾಕೆಟ್ ವಿಭಾಗದಲ್ಲಿ ಈ ವಾಹನ ಮಹತ್ವದ ಸ್ಥಾನ ಪಡೆದಿದೆ ಎಂದು ಅಧಿಕಾರಿಗಳು ತಿಳಿಸಿದರು.

## ರಾಜ್ಯದ ಶಾಲೆಗಳಲ್ಲಿ ಯೋಗ ಕಡ್ಡಾಯ

• ಉದಯವಾಹಿನಿ, ಮೈಸೂರು

ರಾಜ್ಯದ ಶಾಲೆಗಳಲ್ಲಿ ಮಕ್ಕಳಿಗೆ ಯೋಗವನ್ನು ರೂಢಿ ಗೊಳಿಸಬೇಕೆನ್ನುವ ಉದ್ದೇಶದಿಂದ ರಾಜ್ಯ ಸರ್ಕಾರ ಮತ್ತೆ ಶಾಲೆಗಳಲ್ಲಿ ಯೋಗವನ್ನು ಕಡ್ಡಾಯ ಮಾಡಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಸಚಿವರು, ಶಾಲೆಗಳಲ್ಲಿ ಯೋಗವನ್ನು ಕಡ್ಡಾಯ ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಯೋಗ ಶಿಕ್ಷಕರನ್ನು ನೇಮಕ ಮಾಡಲಾಗುತ್ತದೆ, ಬಹಳ ವರ್ಷಗಳಿಂದಲೂ ಶಾಲೆಗಳಲ್ಲಿ ಯೋಗ ಮತ್ತು ದೈಹಿಕ ಶಿಕ್ಷಣವನ್ನು ಮಕ್ಕಳಿಗೆ ಹೇಳಿಕೊಡಲಾಗುತ್ತಿತ್ತು. ಆದರೆ ಹಿಂದಿನ ಬಿಜೆಪಿ ಸರ್ಕಾರ ಈ ಪದ್ಧತಿಯನ್ನು ನಿಲ್ಲಿಸಿತ್ತು. ಈಗ ನಮ್ಮ ಸರ್ಕಾರ ಮತ್ತೆ ಆರಂಭಿಸಿದೆ ಎಂದರು. ಯೋಗಕ್ಕೆ ಯಾವುದೇ ಧರ್ಮ ಇಲ್ಲ, ಯೋಗ ವನ್ನು ಇಂತಿಷ್ಟೆ ವಯಸ್ಸಿನವರೇ ಮಾಡಬೇಕು ಎನ್ನುವ ನಿಯಮವೂ ಇಲ್ಲ. ಕಿರಿಯರಿಂದ ಹಿಡಿದು ವೃದ್ಧರವರೆಗೂ ವಯೋಮಾನಕ್ಕೆ ತಕ್ಕಂತೆ ಯೋಗಾಭ್ಯಾಸ ಮಾಡಬಹುದು.

ಜನಸಂಖ್ಯೆಯೇ ದೊಡ್ಡ ಆಸ್ತಿಯಾಗಿರುವ ಭಾರತದಲ್ಲಿ ಎಲ್ಲರೂ ಯೋಗಾಭ್ಯಾಸವನ್ನು ರೂಢಿಸಿ ಕೊಂಡು ಆರೋಗ್ಯವಂತರಾಗಬೇಕು. ಆಧ್ಯಾತ್ಮಿಕವಾದ ಅಭ್ಯಾಸಕ್ಕೆ ವೈಜ್ಞಾನಿಕ ಪದ್ಧತಿಯನ್ನು ಅಳವಡಿಸಿರುವುದೇ ಯೋಗ. ಆದ್ದರಿಂದ ನಿರಂತರವಾಗಿ ಯೋಗಾಭ್ಯಾಸದಲ್ಲಿ ತೊಡಗಿದರೇ ಮನುಷ್ಯನ ವ್ಯಕ್ತಿತ್ವ ಪರಿಪೂರ್ಣವಾಗಿ ಹೊರಹೊಮ್ಮುತ್ತದೆ. ಇಚ್ಛಾಶಕ್ತಿಯನ್ನು ಬೆಳೆಸಿ ಕೊಂಡು ಶಿಸ್ತಿನಿಂದ ಯೋಗಾಭ್ಯಾಸ ಮಾಡಿದರೇ ಉತ್ತಮ ಆರೋಗ್ಯಕರ ಸಮಾಜ ನಿರ್ಮಿಸಬಹುದು ಎಂದು ಹೇಳಿದ್ದಾರೆ.

## ಕೈ ಸರ್ಕಾರ ಯಾವಾಗ ಬೀಳುತ್ತದೆ ಎಂದು ಎಚ್‌ಡಿಕೆಗೆ ಗೊತ್ತಿದೆ

• ಉದಯವಾಹಿನಿ, ಬೆಂಗಳೂರು



ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಹೆಚ್ಚು ದಿನ ಉಳಿಯುವುದಿಲ್ಲ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ನಿಖರವಾಗಿ ತಿಳಿದಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಭವಿಷ್ಯ ನುಡಿದಿದ್ದಾರೆ. ನಗರದ ಅರಮನೆ ಮೈದಾನದಲ್ಲಿ ರಾಜ್ಯ ಬಿಜೆಪಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕುಮಾರಸ್ವಾಮಿ ಹಾಗೂ ಇತರ ಬಿಜೆಪಿ ಮತ್ತು ಜೆಡಿಎಸ್ ಸಂಸದರನ್ನು ಸನ್ಮಾನಿಸಿ ಅವರು ಮಾತನಾಡಿದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಸರಿಸಮಾನವಾಗಿ ವೀರಶೈವ-ಲಿಂಗಾಯತ ನಾಯಕರಾಗಿ ಬೆಳೆಸಲು ಬಿಜೆಪಿ ವರಿಷ್ಠರು ಪ್ರಯತ್ನಿಸಿದ ಸೋಮಣ್ಣ ಮತ್ತು ಒಕ್ಕಲಿಗ ಪ್ರಬಲ ವ್ಯಕ್ತಿ ಕುಮಾರಸ್ವಾಮಿ ಇಬ್ಬರೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಉತ್ತಮ ಸಂಬಂಧ ಹೊಂದಿದ್ದಾರೆ. ಈ ಸರ್ಕಾರ ಆರು ತಿಂಗಳು ಇರುತ್ತದೆಯೋ ಇಲ್ಲವೋ ನನಗೆ ಗೊತ್ತಿಲ್ಲ, ಆದರೆ ಮೂರು ತಿಂಗಳು, ಆರು ತಿಂಗಳು ಅಥವಾ ಒಂದು ವರ್ಷದ ನಂತರ ಸರ್ಕಾರ ಬೀಳುತ್ತದೆಯೇ ಎಂದು ಕುಮಾರಸ್ವಾಮಿ ಹೇಳಬಲ್ಲರು ಎಂದು ಸೋಮಣ್ಣ ಹೇಳಿದರು. ಪಕ್ಷವು 130-140 ಸ್ಥಾನಗಳನ್ನು ಗೆಲ್ಲಲು ಐದು ಮಂತ್ರಿಗಳು ಸೇರಿದಂತೆ ರಾಜ್ಯದ ಬಿಜೆಪಿ ಸಂಸದರು ಮುಂದಿನ ವಿಧಾನಸಭಾ ಚುನಾವಣೆಗೆ ಈಗಿನಿಂದಲೇ ಅಡಿಪಾಯವನ್ನು ಪ್ರಾರಂಭಿಸಬೇಕು ಎಂದು ಯಡಿಯೂರಪ್ಪ ಒತ್ತಾಯಿಸಿದರು. ಅವರು ರಾಜ್ಯದ ಧ್ವನಿಯಾಗಿ ಕೆಲಸ ಮಾಡಬೇಕು ಮತ್ತು ಬಾಕಿ ಇರುವ ಯೋಜನೆಗಳಿಗೆ ಅನುಮತಿ ಪಡೆಯಬೇಕು ಎಂದು ಅವರು ಸಲಹೆ ನೀಡಿದರು. ಸೋಮಣ್ಣ ಅವರು ರಾಷ್ಟ್ರ ರಾಜಧಾನಿಯಲ್ಲಿ ಪಕ್ಷವನ್ನು ಭೇಟಿಯಾಗಲು ಒಂದೆರಡು ವಾರಗಳನ್ನು ಕಳೆದ ಹಿನ್ನೆಲೆಯಲ್ಲಿ ಅವರ ಹೇಳಿಕೆ ಬಂದಿದೆ.

# ಕೇಂದ್ರ, ಬೇರೆ ರಾಜ್ಯ ಸರ್ಕಾರಗಳ ಮಾದರಿಯಲ್ಲಿ ಸಲಹೆ ಕೇಳಿದರೆ ತಪ್ಪೇನಿದೆ

### ಚನ್ನಪಟ್ಟದಲ್ಲಿ ನೀವೆ ಸ್ಪರ್ಧೆ ಮಾಡುವಂತೆ ಜನ ನಿರೀಕ್ಷೆ ಮಾಡುತ್ತಿದ್ದಾರೆ ಎಂದು ಕೇಳಿದಾಗ, ಅಲ್ಲಿ ಯಾರೇ ನಿಂತರೂ ನಾನೇ ಅಭ್ಯರ್ಥಿ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ಹಾಗೂ ಬೇರೆ ರಾಜ್ಯ ಸರ್ಕಾರಗಳಂತೆ ನಾವು ಕೂಡ ಆದಾಯದ ಮೂಲಗಳ ಬಗ್ಗೆ ಖಾಸಗಿ ಕಂಪನಿಗಳ ಸಲಹೆ ಕೇಳಿದ್ದೇವೆ. ಇದರಲ್ಲಿ ತಪ್ಪೇನಿದೆ' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಂಪನ್ಮೂಲ ಕ್ರೂಢೀಕರಣಗಳತ್ತ ಹೆಚ್ಚು ಗಮನಹರಿಸುತ್ತಿದ್ದು, ಬೇರೆಯವರಂತೆ ನಾವು ಕೂಡ ಅನೇಕರ ಸಲಹೆ ಕೇಳಿದ್ದೇವೆ. ನಾವು ಬಿಜೆಪಿಯವರಂತೆ ಹಣಕಾಸಿಗಾಗಿ ಸರ್ಕಾರಿ ಆಸ್ತಿಗಳನ್ನು ಅಡಮಾನ ಇಡುತ್ತಿಲ್ಲ. ಸರ್ಕಾರದ, ರಾಜ್ಯದ ಹಿತವನ್ನು ಗಮನದಲ್ಲಿಟ್ಟುಕೊಂಡು ಏನು ಕ್ರಮ ಕೈಗೊಳ್ಳಬೇಕೋ ಅದನ್ನು ಮಾಡುತ್ತೇವೆ ಎಂದು ತಿಳಿಸಿದರು. ಚನ್ನಪಟ್ಟದಲ್ಲಿ ನೀವೆ ಸ್ಪರ್ಧೆ ಮಾಡುವಂತೆ ಜನ ನಿರೀಕ್ಷೆ ಮಾಡುತ್ತಿದ್ದಾರೆ ಎಂದು ಕೇಳಿದಾಗ, ಚನ್ನಪಟ್ಟಣ ನನ್ನ ಊರು. ಅಲ್ಲಿಯಾರೇ ನಿಂತರೂ ನಾನೇ ಅಭ್ಯರ್ಥಿ ಎಂದು ತಿಳಿಸಿದರು. ಚನ್ನಪಟ್ಟಣ ಉಪಚುನಾವಣೆಯಲ್ಲಿ ನಿಮ್ಮ ಸ್ಪರ್ಧೆ ಬಗ್ಗೆ ಬೇರೆ ಬೇರೆ ಅಭಿಪ್ರಾಯ ವ್ಯಕ್ತವಾಗುತ್ತಿದೆ ಎಂದು ಕೇಳಿದಾಗ, 'ಯಾರು ಏನೇ ಅಭಿಪ್ರಾಯ ಹೇಳಲಿ. ಜನರ ಜತೆ ಚರ್ಚೆ ಮಾಡಿದ ಬಳಿಕ ನನ್ನ ಅಭಿಪ್ರಾಯ ತೀರ್ಮಾನಿಸುತ್ತೇನೆ' ಎಂದರು.



**ಚನ್ನಪಟ್ಟಣ ನನ್ನ ಊರು**

ಬೆಲೆ ಏರಿಕೆಗೆ ಗ್ಯಾರಂಟಿ ಯೋಜನೆಗಳೇ ಕಾರಣ ಎಂಬ ಎನ್ ಡಿಎ ಸಂಸದರ ಆರೋಪದ ಬಗ್ಗೆ ಕೇಳಿದಾಗ, 'ಯಾರು ಏನಾದರೂ ಆರೋಪ ಮಾಡಲಿ. ಗ್ಯಾರಂಟಿ ಯೋಜನೆಗೂ ಬೆಲೆ ಏರಿಕೆಗೂ ಸಂಬಂಧವಿಲ್ಲ. ಕಾಲಕಾಲಕ್ಕೆ ಆಗಬೇಕಿರುವ ಬೆಲೆ ಏರಿಕೆ ನಾವು ಮಾಡಿದ್ದೇವೆ ಎಂದು ಸಮಜಾಯಿಷಿ ನೀಡಿದರು.

ನಾವು ಬಿಜೆಪಿಯವರಂತೆ ಎಲ್ಲಾ ವಸ್ತುಗಳ ಬೆಲೆ ಏರಿಕೆ ಮಾಡಿಲ್ಲ. ಬಿಜೆಪಿ ಕಚ್ಚಾತೈಲ ಬೆಲೆ ಕುಸಿದಾಗಲೂ ಬೆಲೆ ಏರಿಕೆ ಮಾಡಿದ್ದಾರೆ.

ನಾವು ಬಹಳ ಕಡಿಮೆ ಪ್ರಮಾಣದಲ್ಲಿ ನೆರೆ ರಾಜ್ಯಗಳ ಬೆಲೆ ಪ್ರಮಾಣವನ್ನು ಗಮನದಲ್ಲಿಟ್ಟುಕೊಂಡು ಇಂಧನ ತೈಲ ಬೆಲೆ ಏರಿಕೆ ಮಾಡಿದ್ದೇವೆ.

ನಮ್ಮ ಗ್ಯಾರಂಟಿಗಳು ಮುಂದುವರಿಯಲಿದೆ. ರಾಜ್ಯದ ಅಭಿವೃದ್ಧಿಗೆ ಏನು ಮಾಡಬೇಕೋ ಆ ಕೆಲಸ ಮಾಡುತ್ತೇವೆ ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು.

> ಬಿಬಿಎಂಪಿ ಚುನಾವಣೆ ಮಾಡುತ್ತೀರಾ ಎಂದು ಕೇಳಿದಾಗ, 'ಖಂಡಿತವಾಗಿ ಅದನ್ನು ಮಾಡಲೇಬೇಕು. ಅದನ್ನು ನಿರ್ಲಕ್ಷ್ಯ ಮಾಡಲು ಸಾಧ್ಯವಿಲ್ಲ'
> -ಡಿ.ಕೆ.ಶಿವಕುಮಾರ್, ಡಿಸಿಎಂ

**ಸಮಿತಿ ಅಧ್ಯಯನ ಮಾಡಿ ವರದಿ**

ಮಾಜಿ ಮೇಯರ್‌ಗಳ ಮಟ್ಟದಲ್ಲಿ ಸಮಿತಿ ರಚಿಸಲಾಗಿದ್ದು, ಎ ಖಾತೆ, ಬಿ ಖಾತೆ ಸೇರಿದಂತೆ ಅನೇಕ ಸಾರ್ವಜನಿಕ ಸಮಸ್ಯೆಗಳು, ಆಡಳಿತಕ್ಕೆ ಸಂಬಂಧ ಪಟ್ಟ ಸಮಸ್ಯೆಗಳ ಬಗ್ಗೆ ಈ ಸಮಿತಿ ಅಧ್ಯಯನ ಮಾಡಿ ವರದಿ ನೀಡಲಿದೆ. ಮುಂದಿನ ಎಂಟು ಹತ್ತು ದಿನಗಳಲ್ಲಿ ಮತ್ತೊಮ್ಮೆ ಸಭೆ ಮಾಡುತ್ತೇವೆ. ಸಮಿತಿ ವರದಿ ಮೇಲೆ ಮುಖ್ಯಮಂತ್ರಿಗಳು ಹಾಗೂ ಶಾಸಕರ ಜತೆ ಚರ್ಚೆ ಮಾಡುತ್ತೇವೆ. ನಂತರ ನಮ್ಮ ಕಾರ್ಯಯೋಜನೆ ರೂಪಿಸುತ್ತೇವೆ.

ಸೂರಜ್ ರೇವಣ್ಣ ಅವರ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪದ ಬಗ್ಗೆ ಕೇಳಿದಾಗ, 'ಅವರ ಕುಟುಂಬದಲ್ಲಿ ದೊಡ್ಡವರಿದ್ದಾರೆ. ಅವರು ಉತ್ತರ ನೀಡುತ್ತಾರೆ. ನಮಗೆ ಆ ವಿಚಾರ ಬೇಡ' ಎಂದರು.

ಕಾಂಗ್ರೆಸ್ ಕಚೇರಿಯ ಇಂದಿರಾ ಗಾಂಧಿ ಭವನದಲ್ಲಿ ಕಾಂಗ್ರೆಸ್ ಪಕ್ಷದ ಬೆಂಗಳೂರು ಮಾಜಿ ಮೇಯರ್ ಹಾಗೂ ಉಪಮೇಯರ್‌ಗಳ ಜತೆ ಸಭೆ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಶಿವಕುಮಾರ್ ಅವರು, 'ಇಂದು ಮಾಜಿ ಮೇಯರ್ ಹಾಗೂ ಉಪಮೇಯರ್‌ಗಳ ಜತೆ ಸಭೆ ಮಾಡಿ ಬೆಂಗಳೂರಿನ ಆಚಾರ ವಿಚಾರಗಳ ಬಗ್ಗೆ ಚರ್ಚೆ ಮಾಡಲಾಗಿದೆ. ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ನಮ್ಮ ನಾಯಕರ ಅಭಿಪ್ರಾಯ ಕೇಳಿದ್ದೇವೆ. ಚುನಾವಣೆ ತಯಾರಿ ಬಗ್ಗೆ ಅನೇಕ ಸಲಹೆ ನೀಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 102.92 ₹/L | ಡೀಸೆಲ್ : 89.00 ₹/L | ಬಂಗಾರ: ₹7,238 /Gram(24ct) ₹6,635 /Gram(22ct) | ಬೆಳ್ಳಿ: ₹91.25 /Gram

ಅಂತರಾಳದಿಂದ... EDITORIAL

# ಬಿಜೆಪಿ ಸಿದ್ಧಾಂತಕ್ಕೆ ಅನುಗುಣವಾಗಿ

## ಎನ್‌ಸಿಇಆರ್‌ಟಿ ಪಠ್ಯ ಪರಿಷ್ಕರಣೆ ಸರಿಯಲ್ಲ

ರಾಷ್ಟ್ರೀಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಮಂಡಳಿಯು (ಎನ್ ಸಿಇಆರ್‌ಟಿ) ಪಠ್ಯಪುಸ್ತಕಗಳಲ್ಲಿ ಮತ್ತಷ್ಟು ಬದಲಾವಣೆಗಳನ್ನು ತಂದಿದೆ: ಹಲವು ಮಿಥೆಗಳನ್ನು ಸೇರಿಸಲಾಗಿದೆ. ಕೆಲವು ವಿಚಾರಗಳನ್ನು ತಪ್ಪಾಗಿ ಬಿಂಬಿಸಲಾಗಿದೆ ಮತ್ತು ಕೆಲವು ವಿಚಾರಗಳನ್ನು ಕೈಬಿಡಲಾಗಿದೆ.

ಬಿಜೆಪಿಯು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಬಳಿಕ, ಇತಿಹಾಸವನ್ನು ತಿದ್ದಿಬರೆಯುವ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ ಮತ್ತು ಚಾರಿತ್ರಿಕ ವ್ಯಕ್ತಿಗಳಿಗೆ ಹೊಸ ರೂಪ ಕೊಡುವ ಪ್ರಯತ್ನ ನಡೆಸಲಾಗಿದೆ.


ಉದಯವಾಹಿನಿ ಚಿತ್ರ

ಸಮಾಜವನ್ನು ಮರುವ್ಯಾಖ್ಯಾನಿಸುವ ಕೆಲಸವೂ ನಡೆದಿದೆ. ಈ ಬಾರಿಯ ಪರಿಷ್ಕರಣೆಯಲ್ಲಿ ಸಮತೋಲನವಿಲ್ಲ ಎಂಬುದು ಎದ್ದು ಕಾಣುವ ಅಂಶ, 12ನೇ ತರಗತಿಯ ರಾಜಕೀಯಶಾಸ್ತ್ರ ಪಠ್ಯಪುಸ್ತಕದಲ್ಲಿ ಗುಜರಾತ್ ಗಲಭೆಗಳು ಮತ್ತು ಬಾಬರಿ ಮಸೀದಿ ಧ್ವಂಸದ ನಂತರ ನಡೆದ ಹಿಂಸಾಚಾರದ ಉಲ್ಲೇಖವೇ ಇಲ್ಲ. .

ಹಾಗಿದ್ದರೆ, ವಿದ್ಯಾರ್ಥಿಗಳನ್ನು ಸಕಾರಾತ್ಮಕ ಮನಃಸ್ಥಿತಿಯ ಪೌರರನ್ನಾಗಿ ರೂಪಿಸಲು ದೇಶ ವಿಭಜನೆಯ ಸಂದರ್ಭದ ಗಲಭೆಯೂ ಸೇರಿ ಇತಿಹಾಸದ ಎಲ್ಲಾ ಸಂಘರ್ಷಗಳನ್ನು ಪಠ್ಯಪುಸ್ತಕದಿಂದ ಹೊರಗೆ ಇರಿಸಲಾಗುವುದೇಭಾರತ ಮತ್ತು ಜಗತ್ತಿನ ಭೂತಕಾಲವು ಹೇಗಿತ್ತೋ ಅದನ್ನು ತೋರಿಸುವ ಬದಲಿಗೆ ಅದು ಹೇಗಿರಬೇಕು ಎಂದು ಬಿಜೆಪಿ ಬಯಸುತ್ತದೆಯೋ ಆ ರೀತಿಯಲ್ಲಿ ಚಿತ್ರಿಸುವುದು ಉದ್ದೇಶವಾಗಿದೆ.

> 'ಆಯ್ದ ಕೆಲವು ಗಲಭೆಗಳನ್ನು ಉಲ್ಲೇಖಿಸುವುದು ಸರಿಯಲ್ಲ' ಎಂದು ಪರಿಣತರ ಸಮಿತಿ ಹೇಳಿರುವುದು ಈ ಪರಿಷ್ಕರಣೆಗೆ ಕಾರಣ ಎಂದು ಹೇಳಲಾಗಿದೆ. 'ನಾವು ರೂಪಿಸಬೇಕಿರುವುದು ಸಕಾರಾತ್ಮಕ ಮನಃಸ್ಥಿತಿಯ ಪೌರರನ್ನೇ ವಿನಾ ಹಿಂಸಾತ್ಮಕ ಮತ್ತು ನಿರುತ್ಸಾಹಿ ಮನಃಸ್ಥಿತಿಯ ಪೌರರನ್ನಲ್ಲ', ಅದುದರಿಂದ ಗಲಭೆಗಳ ಕುರಿತು ವಿದ್ಯಾರ್ಥಿಗಳಿಗೆ ಕಲಿಸುವ ಅಗತ್ಯ ಇಲ್ಲ ಎಂದು ಎನ್‌ಸಿಆರ್‌ಟಿ ಅಧ್ಯಕ್ಷ ದಿನೇಶ್ ಸಕ್ಲಾನಿ ಹೇಳಿದ್ದಾರೆ

ಅದಕ್ಕಾಗಿ ಇತಿಹಾಸಕ್ಕೆ ಬಿಜೆಪಿಗೆ ಬೇಕಾದ ಬಣ್ಣ ಬಳಿಯಲಾಗುತ್ತಿದೆ. ಬಾಬರಿ ಮಸೀದಿಯನ್ನು ಅದರ ಹೆಸರಿನಿಂದ ಉಲ್ಲೇಖಿಸಲಾಗಿಲ್ಲ, ಬದಲಿಗೆ 'ಮೂರು ಗುಮ್ಮಟಗಳಿರುವ ಕಟ್ಟಡ ಎಂದು ಕರೆಯಲಾಗಿದೆ. ಬಾಬರಿ ಮಸೀದಿ ಧ್ವಂಸದಲ್ಲಿ ಕರಸೇವಕರ ಪಾತ್ರ ಮತ್ತು ಅದರ ನಂತರದ ಕೋಮು ಹಿಂಸಾಚಾರದ ಉಲ್ಲೇಖವೇ ಇಲ್ಲ. ಮಸೀದಿ ನಾಶಗೊಳಿಸಿದ ನಂತರ ಬಿಜೆಪಿ ನೇತೃತ್ವದ ಸರ್ಕಾರದ ವಜಾ ಹಾಗೂ ಅಯೋಧ್ಯೆಯಲ್ಲಿ ನಡೆದುದಕ್ಕೆ ಬಿಜೆಪಿ ವ್ಯಕ್ತಪಡಿಸಿದ್ದ ವಿಷಾದವನ್ನು ಪಠ್ಯದಿಂದ ಕೈಬಿಡಲಾಗಿದೆ. ಈ ಹಿಂದೆಯೂ ಹಲವು ಬಾರಿ ವಿವಿಧ ರೀತಿಗಳಲ್ಲಿ ಪಠ್ಯಪುಸ್ತಕಗಳ ಪರಿಷ್ಕರಣೆ ನಡೆದಿದೆ.

ಆರ್ಯನ್ನರ ವಲಸೆ, ಮೊಘಲ್ ಯುಗವೂ ಸೇರಿದಂತೆ ಭಾರತದಲ್ಲಿ ಮುಸ್ಲಿಂ ರಾಜರ ಆಳ್ವಿಕೆ, ಗಾಂಧೀಜಿ ಹತ್ಯೆಯಂತಹ ಚಾರಿತ್ರಿಕ ವಿಚಾರಗಳನ್ನು ಬಿಜೆಪಿಯ ಸಂಕಥನಕ್ಕೆ ಹೊಂದುವ ರೀತಿಯಲ್ಲಿ ಪ್ರಸ್ತುತಪಡಿಸಲಾಗಿದೆ. ಎಲ್ಲಾಮೊಘಲ್ ದೊರೆಗಳೂ ಶೋಷಕರು ಮತ್ತು ಹಿಂದೂ ರಾಜರೆಲ್ಲರೂ ಒಳ್ಳೆಯವರು ಎಂದು ಚಿತ್ರಿಸಲಾಗಿದೆ. ಪ್ರಾಚೀನ ಭಾರತವು ಸುವರ್ಣ ಯುಗವಾಗಿದ್ದು ಜಗತ್ತನ್ನು ಎಲ್ಲಾಕ್ಷೇತ್ರಗಳಲ್ಲಿಯೂ ಮುನ್ನಡೆಸಿದೆ ಎಂದು ಹೇಳಲಾಗಿದೆ. ಮಕ್ಕಳ ಮುಂದೆ ಅವಾಸ್ತವಿಕ ಮತ್ತು ತಿರುಚಿದ ಭಾರತದ ಚಿತ್ರಣವನ್ನು ಇರಿಸಲಾಗಿದೆ.

ಶಿಕ್ಷಣವನ್ನು ಒಂದು ಸಾಧನವಾಗಿ ಬಳಸಿಕೊಂಡು ಯುವ ಮನಸ್ಸುಗಳ ಮೇಲೆ ಒಂದು ಸಿದ್ಧಾಂತವನ್ನು ಹೇರುವ ಪ್ರಯತ್ನ ನಡೆಸಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ ವಿಮರ್ಶಾತ್ಮಕ ಚಿಂತನೆ ಹೆಚ್ಚಳ ಮಾಡುವುದು ಹೊಸ ಶಿಕ್ಷಣ ನೀತಿಯ ಗುರಿಯಾಗಿದೆ. ಎನ್‌ಸಿಆರ್‌ಟಿ ಒಂದು ಸ್ವಾಯತ್ತ ಸಂಸ್ಥೆಯೇ ವಿನಾ ಬಿಜೆಪಿಯ ಅಂಗಸಂಸ್ಥೆ ಅಲ್ಲ. ಒಂದು ದೇಶವು ಆ ದೇಶದ ಭೂತಕಾಲ ಮತ್ತು ವರ್ತಮಾನದ ಇತಿಹಾಸದಿಂದ ರೂಪುಗೊಳ್ಳುತ್ತದೆ. ಭೂತಕಾಲದಲ್ಲಿ ಮಾರ್ಗದರ್ಶಕವಾಗಿದ್ದ ಮೌಲ್ಯಗಳು ಭವಿಷ್ಯಕ್ಕೂ ಊರುಗೋಲಾಗುತ್ತವೆ. ದೇಶದ ಕುರಿತು ಹುಸಿಯಾದ ಚಿತ್ರಣವನ್ನು ವಿದ್ಯಾರ್ಥಿಗಳ ಮನದಲ್ಲಿ ಸೃಷ್ಟಿಸಿದರೆ, ಅದಕ್ಕೆ ಅನುಗುಣವಾದ ಚಿತ್ರಣವನ್ನು ಅವರು ರೂಪಿಸಿಕೊಳ್ಳುತ್ತಾರೆ. ಹುಸಿ ಮತ್ತು ಅವಾಸ್ತವಿಕವಾದ ಜಗತ್ತನ್ನು ಕಟ್ಟಿಕೊಳ್ಳುತ್ತಾರೆ. ಶಿಕ್ಷಣವು ವಿದ್ಯಾರ್ಥಿಗಳಲ್ಲಿ ಪ್ರಶ್ನಿಸುವ ಮತ್ತು ಸಂವಾದ ನಡೆಸುವ ಮನಃಸ್ಥಿತಿಯನ್ನು ಉತ್ತೇಜಿಸಬೇಕು. ಶಿಕ್ಷಣವು ಏನನ್ನೂ ಅಡಗಿಸಿಡಬಾರದು. ತಿರುಚಬಾರದು ಮತ್ತು ಹುಸಿ ಚಿತ್ರಣವನ್ನು ಸೃಷ್ಟಿಸಬಾರದು. ವಿದ್ಯಾರ್ಥಿಗಳ ಮೇಲೆ ಉತ್ತರಗಳು ಮತ್ತು ನಿರ್ಧಾರಗಳನ್ನು ಹೇರಬಾರದು.



# ಮಹಾಭಾರತ

## ಶಲ್ಯ ಪರ್ವ

• ಹಿಂದಿನ ಸಂಚಿಕೆಯಿಂದ

ಅದಕ್ಕಾಗಿ ಅವನು ಹಾಗೆ ಮಾಡಿರುವುದು. ಪ್ರಿಯ ಸೋದರ, ನಿನ್ನ ಪ್ರೀತಿಯ ದುರ್ಯೋಧನನಿಗಾದ ಈ ಅನ್ಯಾಯವನ್ನು ನಿನ್ನಿಂದ ಸಹಿಸಿಕೊಳ್ಳಲಾಗುತ್ತಿಲ್ಲ. ನೇಗಿಲಿನಿಂದ ಪಾಂಡವರನ್ನು ಕೊಲ್ಲುವುದಕ್ಕೆ ಹೊರಟಿರುವೆ. ಆದರೆ ನಾನು ಎಷ್ಟೋ ವರ್ಷಗಳಿಂದ ಪಾಂಡವರ ಮೇಲೆ ಒಂದಾದ ಮೇಲೆ ಒಂದು ಅನ್ಯಾಯ ನಡೆಯುತ್ತಲೇ ಇರುವುದನ್ನು ನೋಡಿದರೂ ಸಹಿಸಿಕೊಂಡಿದ್ದೇನೆ. ನಾನು ಇಚ್ಛಿಸಿದ್ದರೆ ಇವನನ್ನು ಎಂದೋ ಕೊಂದಿರುತಿದ್ದೆ. ಈ ಸಜ್ಜನರ ಯಾತನೆಗಳ ಹಾಗೂ ದ್ರೌಪದಿಯ ಕಣ್ಣೀರಿನ ಸಾಲವನ್ನು ಎಂದೋ ತೀರಿಸಿರುತಿದ್ದೆ. ಆದರೆ ಯುದ್ಧಘೋಷಣೆ ಆಗುವವರೆಗೆ ನಾನು ಸುಮ್ಮನಿದ್ದೆ. ಯುದ್ಧವನ್ನು ತಪ್ಪಿಸುವುದಕ್ಕೂ ನಾನು ನನ್ನಿಂದಾದಷ್ಟು ಶ್ರಮಿಸಿದೆ. ಅಲ್ಲದೆ, ಈ ಯುದ್ಧದಲ್ಲಿ ನಾನೆಂದೂ ಭಾಗವಹಿಸಲೇ ಇಲ್ಲ. ನಾನು ಉದಾಸೀನನಾಗಿರಬೇಕೆನ್ನುವಿಯಲ್ಲವೆ ಒಬ್ಬನು ಎಷ್ಟುಕಾಲ ತನ್ನೆದುರು ನಡೆಯುತ್ತಿರುವ ಅನ್ಯಾಯಗಳನ್ನು ಸಹಿಸಿಕೊಂಡಿರಬಹುದು ಕೌರವ ನಾಶವನ್ನು ನೋಡಲು ಇಷ್ಟವಿಲ್ಲದೆ ಯುದ್ಧಕ್ಕೆ ಬೆನ್ನು ತಿರುಗಿಸಿ ಹೋದ. ನೀನು, ಈಗ ಉದ್ವಿಗ್ನನಾಗಿಬಿಟ್ಟೆಯಲ್ಲವೆ ಈ ಪಾಪಿಯನ್ನು ಕೊಂದುದಕ್ಕೆ ನೀನು ಸೇಡು ತೀರಿಸಲು ಹೊರಡಬೇಡ. ಪಾಂಡವರನ್ನೂ ಅವರವರ ವಿಧಿಗೆ ಬಿಟ್ಟುಬಿಡು. ಪಾಂಡವರೂ ನಮ್ಮ ಬಂಧುಗಳೇ; ಇಷ್ಟು ವರ್ಷಗಳ ಯಾತನೆಯ ನಂತರ ಈಗ ಸುಖವಾಗಿ ಬದುಕಬಹುದೇ ಎಂದು ಎದುರುನೋಡುತಿದ್ದಾರೆ. ಅವರ ಮೇಲೆ ಕೋಪಿಸಬೇಡಎಂದನು. ಬಲರಾಮನಿಗೆ ಸ್ವಲ್ಪ ಕೋಪ ಶಮನವಾಯಿತಾದರೂ, ಮನವರಿಕೆಯಾಗಲಿಲ್ಲ. ಕೃಷ್ಣನು, ''ಅಣ್ಣ ಕಲಿಯುಗ ಈಗಾಗಲೇ ಕಾಲಿರಿಸಿದೆ ಎಂಬುದಾಗಿ ಮರೆಯಬೇಡ. ಇಲ್ಲಿಂದ ಮುಂದೆ ಶುದ್ಧ ಧರ್ಮವನ್ನು ನಾನು ಕಾಣಲಾರೆವು. ಯುದ್ಧದಲ್ಲಿಯೂ, ಮೊದಲ ಒಂಬತ್ತು ದಿನಗಳು ಯಾವುದೇ ಅನ್ಯಾಯ ನಡೆಯಲಿಲ್ಲ. ಹತ್ತನೆಯ ದಿನದಿಂದ ಯುದ್ಧದ ಬಣ್ಣವೇ ಬದಲಾಯಿತು. ಅಲ್ಪಸ್ವಲ್ಪ ಅಧರ್ಮದ ಕಲ್ಮಶ ಸೇರಿಕೊಂಡು, ದಿನೇ ದಿನೇ ಬೆಳೆಯುತ್ತ ಹೋಯಿತು. ಇದು ಕಾಲಧರ್ಮ. ವಿಧಿಯನ್ನು ನಾವು ಬದಲಿಸಲು ಹೋಗಬಾರದು. ವಿಧಿ ಕೆಲವೊಮ್ಮೆ ಅಧರ್ಮ ಮಾರ್ಗದಿಂದಲೂ ಸಹ ತನ್ನ ಉದ್ದೇಶವನ್ನು ನೆರವೇರಿಸಿಕೊಳ್ಳುತ್ತದೆ. ಕೊನೆಯಲ್ಲಿ ಒಳಿತಾಗುವುದಾದರೆ, ಅನುಸರಿಸುವ ವಿಧಾನಗಳೆಲ್ಲ ಸರಿ ಎನ್ನುವವನು ನಾನು ಎನ್ನಲು, ಬಲರಾಮನು, ನಿನ್ನ ಜೇನು ಸವರಿದ ನುಡಿಗಳು ನನ್ನ ಮನಸ್ಸಿಗೆ ನಂಬಿಕೆಯಾಗುತ್ತಿಲ್ಲ, ಕೃಷ್ಣ. ಭೀಮನು ಇಂದು ದುರ್ಯೋಧನನನ್ನು ಅಧರ್ಮದಿಂದ ಕೊಂದಿದ್ದಾನೆ. ಲೋಕವು ಅವನನ್ನು ಯುದ್ಧನಿಯಮಗಳನ್ನು ಮೀರಿದ ಅಧರ್ಮಿ ಎಂದೇ ಕರೆಯುತ್ತದೆ. ದುರ್ಯೋಧನನ ಬಗ್ಗೆ ನಾನು ಹೆಮ್ಮೆಪಡುತ್ತೇನೆ. ಅವನು ಚಿರಕಾಲ ಸ್ವರ್ಗವಾಸಿಯಾಗಿರುತ್ತಾನೆ. ಈ ಗದಾಯುದ್ಧದಲ್ಲಿ ದುರ್ಯೋಧನನ ವೈಭವವನ್ನೂ ಲೋಕವು ನೆನಪಿನಲ್ಲಿ ಇಟ್ಟುಕೊಂಡಿರುತ್ತದೆ ಎಂದು ಹೇಳಿ, ದುರ್ಯೋಧನನನ್ನು ಬೀಳ್ಕೊಳ್ಳುವುದಕ್ಕೆ ಅವನ ಬಳಿಗೆ ಹೋದನು.

ಮುಂದುವರಿಯುವುದು...

# ಸಹಕಾರ ಬ್ಯಾಂಕ್‌ಗಳು ಕೊಡುಗೆ ನೀಡಲಿ: ರಾಜ್ಯಪಾಲ

## • ಶ್ರೀ ಸುಬ್ರಮಣ್ಯೇಶ್ವರ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್ ಸುವರ್ಣ ಸಂಭ್ರಮಕ್ಕೆ ಚಾಲನೆ

• ಉದಯವಾಹಿನಿ ಬೆಂಗಳೂರು

ಭಾರತ ಜಗತ್ತಿನ ಮೂರನೇ ಆರ್ಥಿಕ ಸಾಮರ್ಥ್ಯದ ಹಾಗೂ ಐದು ಟ್ರಿಲಿಯನ್ ಡಾಲರ್ ಅರ್ಥವ್ಯವಸ್ಥೆಯನ್ನು ಹೊಂದಲು, ಅಭಿವೃದ್ಧಿ ಹೊಂದಿದ ಭಾರತ ನಿರ್ಮಿಸಲು ಪಟ್ಟಣ ಸಹಕಾರ ಬ್ಯಾಂಕ್ ಗಳು ಕೊಡುಗೆ ನೀಡಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.

ನಗರದ ಅರಮನೆ ಮೈದಾನದಲ್ಲಿ ಶ್ರೀ ಸುಬ್ರಮಣ್ಯೇಶ್ವರ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್‌ನ ಸುವರ್ಣ ಮಹೋತ್ಸವ ಉದ್ಘಾಟಿಸಿ, ಬ್ಯಾಂಕಿನ ''ಸೇವೆಯೇ ನಮ್ಮ ಸಂಪ್ರದಾಯ ಎಂಬ ಲಾಂಛನ ಬಿಡುಗಡೆ ಮಾಡಿ ಮಾತನಾಡಿದ ಅವರು, ಕರ್ನಾಟಕ ಅಭಿವೃದ್ಧಿ ಹೊಂದಿದ ರಾಜ್ಯವಾಗಿದ್ದು, ದೇಶದಲ್ಲಿ ಕರ್ನಾಟಕ ಮಂಚೂಣಿಯಲ್ಲಿದೆ. ಕೇಂದ್ರದಲ್ಲಿ ಬಲರಾಂ ಜಾಖಡ್ ಅವರು ಸಚಿವರಾಗಿದ್ದಾಗ ತಾವು ಸಹ ಸಹಕಾರಿ ವಲಯಕ್ಕೆ ಪಾದಾರ್ಪಣೆ ಮಾಡಿದ್ದನ್ನು ಸ್ಮರಿಸಿಕೊಂಡ ಅವರು, ಕರ್ನಾಟಕ ಮತ್ತು ಮಹಾರಾಷ್ಟ್ರ ತಮಗೆ ಸಹಕಾರಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಪ್ರೇರಣೆಯಾಗಿತ್ತು. ಈ ಕ್ಷೇತ್ರದಲ್ಲಿ ಕೆಲಸ ಮಾಡುವುದು ತಮಗೆ ಆನಂದದ ಅನುಭೂತಿಯಾಗಿತ್ತು. ಈ ವಲಯ ಜನ ಸಾಮಾನ್ಯರು, ಸಣ್ಣಪುಟ್ಟ ವ್ಯಾಪಾರಿಗಳು ಒಳಗೊಂಡಂತೆ ಒಟ್ಟಾರೆ ಸಾಮಾಜಿಕ, ಆರ್ಥಿಕ ಬೆಳವಣಿಗೆಗೆ ಪೂರಕವಾಗಿದೆ ಎಂದರು.

**ಸೇವೆಯೇ ನಮ್ಮ ಸಂಪ್ರದಾಯ ಲಾಂಛನ ಬಿಡುಗಡೆ**

ಸಹಕಾರಿ ವಲಯದಲ್ಲಿ ಪ್ರಾರಂಭದಿಂದಲೂ ನಿರಂತರ ಲಾಭದಲ್ಲಿರುವ ಶ್ರೀ ಸುಬ್ರಮಣ್ಯೇಶ್ವರ ಕೋ-ಆಪರೇಟಿವ್ ಬ್ಯಾಂಕ್ ಸಾಧನೆ ಅನನ್ಯ. ಕರ್ನಾಟಕ, ಮತ್ತು ಮಹಾರಾಷ್ಟ್ರ ಕೇಂದ್ರ, ಸರ್ಕಾರಕ್ಕೆ ಆದಾಯ ತೆರಿಗೆ ಸೇರಿದಂತೆ ಸಂಪನ್ಮೂಲ ಕ್ರೋಢೀಕರಣಕ್ಕೆ ಹೆಚ್ಚಿನ ಕೊಡುಗೆ ನೀಡುತ್ತಿದೆ. ಈ ಬ್ಯಾಂಕ್ ಇನ್ನಷ್ಟು ಸಾಧನೆ ಮಾಡಲಿ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹಾರೈಸಿದರು.


ಉದಯವಾಹಿನಿ ಚಿತ್ರ

ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಮಾತನಾಡಿ, ಪಟ್ಟಣ ಸಹಕಾರ ಬ್ಯಾಂಕ್ ಗಳು ತೊಂದರೆಗೆ ಸಿಲುಕಿದರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೆರವಿಗೆ ಧಾವಿಸುವುದಿಲ್ಲ. ಆದರೆ ರಾಷ್ಟ್ರೀಕೃತ ಮತ್ತು ಶೆಡ್ಯೂಲ್ ಬ್ಯಾಂಕ್‌ಗಳಲ್ಲಿ ಎನ್.ಪಿ.ಎ ಹೆಸರಿನಲ್ಲಿ ಸಾಲ ಮನ್ನಾ ಮಾಡಲು ಅವಕಾಶವಿದೆ. ಇತ್ತೀಚಿನ ವರ್ಷಗಳಲ್ಲಿ ಬ್ಯಾಂಕ್ ಗಳಿಂದ ಪಡೆದಿದ್ದ ಹತ್ತು ಲಕ್ಷ ಕೋಟಿ ರೂಪಾಯಿ ಸಾಲ ಮನ್ನಾ ಮಾಡಲಾಗಿತ್ತು. ಇಂತಹ ಅಧಿಕಾರವನ್ನು ಕೇಂದ್ರ ಸರ್ಕಾರ ಮೇಲ್ಮಟ್ಟದ ಬ್ಯಾಂಕ್ ಗಳಿಗೆ ನೀಡಿದೆ. ಆದರೆ ಪಟ್ಟಣ ಸಹಕಾರ ಬ್ಯಾಂಕ್‌ಗಳಿಗೆ ಹೆಚ್ಚಿನ ನೆರವು, ಪ್ರೋತ್ಸಾಹ ನೀಡಿ ಬಲ ತುಂಬಬೇಕಾಗಿದೆ. ಸಮಸ್ಯೆ ಆದಾಗ ಆರ್.ಬಿ.ಐ ಮತ್ತು ಕೇಂದ್ರ ಸರ್ಕಾರ ಧಾವಿಸಬೇಕು ಎಂದು ಹೇಳಿದರು.

ಚಿಕ್ಕಪೇಟೆ ಶಾಸಕರಾದ ಉದಯ್ ಬಿ.ಗರುಡಾಚಾರ್, ಬ್ಯಾಂಕ್‌ನ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಡಾ: ಕೆ.ಎಂ.ರಂಗಧಾಮ ಶೆಟ್ಟಿ, ಉಪಾಧ್ಯಕ್ಷರಾದ ಡಿ.ಆರ್.ವಿಜಯಸಾರಥಿ, ಬ್ಯಾಂಕಿನ ನಿರ್ದೇಶಕರು, ಸದಸ್ಯರು, ಸಿಬ್ಬಂದಿ ವರ್ಗ ಪಾಲ್ಗೊಂಡಿತ್ತು.

> ಜನ ಸಾಮಾನ್ಯರ ಸಾಮಾಜಿಕ, ಆರ್ಥಿಕ ಪ್ರಗತಿಗಾಗಿ ಪಟ್ಟಣ ಸಹಕಾರಿ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿವೆ. ಉದ್ಯೋಗ ಸೃಜನೆಗೆ ಒತ್ತು ನೀಡುತ್ತಿವೆ. ರಾಜ್ಯದಲ್ಲಿ 253 ಪಟ್ಟಣ ಸಹಕಾರಿ ಬ್ಯಾಂಕ್‌ಗಳಿದ್ದು, 1050 ಶಾಖೆಗಳನ್ನು ಒಳಗೊಂಡಿದೆ. 47,258 ಕೋಟಿ ರೂಪಾಯಿ ಠೇವಣಿ ಹೊಂದಿದ್ದು, 426 ಕೋಟಿ ರೂಪಾಯಿ ಲಾಭದಲ್ಲಿವೆ. ಈ ಎಲ್ಲಾ ಬ್ಯಾಂಕ್ ಗಳಿಗೆ ಶ್ರೀ ಸುಬ್ರಮಣ್ಯೇಶ್ವರ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್ ಮಾದರಿಯಾಗಿದೆ. ಐದು ದಶಕಗಳಿಗೂ ಅಧಿಕ ಸಮಯದಿಂದ ಬ್ಯಾಂಕ್ ಅನ್ನು ಮುನ್ನಡೆಸುತ್ತಿರುವ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಡಾ: ಕೆ.ಎಂ.ರಂಗಧಾಮ ಶೆಟ್ಟಿ ಹಾಗೂ ನಾಲ್ಕೂವರೆ ವರ್ಷಗಳಿಂದ ಉಪಾಧ್ಯಕ್ಷರಾಗಿರುವ ಡಿ.ಆರ್.ವಿಜಯಸಾರಥಿ ಅವರು ಬದ್ಧತೆ ಮತ್ತು ಪರಿಶ್ರಮದಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಬ್ಯಾಂಕ್‌ನ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಡಾ: ಕೆ.ಎಂ.ರಂಗಧಾಮ ಶೆಟ್ಟಿ, ಉಪಾಧ್ಯಕ್ಷರಾದ ಡಿ.ಆರ್.ವಿಜಯಸಾರಥಿ, ಬ್ಯಾಂಕಿನ ನಿರ್ದೇಶಕರು, ಸದಸ್ಯರು, ಸಿಬ್ಬಂದಿ ವರ್ಗ ಪಾಲ್ಗೊಂಡಿತ್ತು. ಆಡಳಿತ ಮಂಡಲಿಯ ಸದಸ್ಯರಗಳಾದ ಪಾಲನೇತ್ರಪ್ಪ ಎಂ.ಸಿ, ನಂಜೇಗೌಡ, ರವೀಂದ್ರ ಪಿ.ಕೆ, ಸುರೇಶ್‌ಕುಮಾರ್, ವೆಂಕಟಚಲಪತಿ, ಮಾರುತಿ ಹೆಚ್. ಸತ್ಯಮೂರ್ತಿ, ರುದ್ರಮೂರ್ತಿ, ರವಿ.ಕೆ, ನಾಗಭೂಷಣ್, ಮಹಾಲಕ್ಷ್ಮಿ, ಜಯಲಕ್ಷ್ಮಿ, ಅನಪೂರ್ಣರವರು ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರು ಎಸ್.ಎನ್. ಕೃಷ್ಣಯ್ಯ ಶೆಟ್ಟಿ ಸಲಹೆಗಾರರಾದ ನಾಗರಾಜುರವರು ಉಪಸ್ಥಿತರಿದ್ದರು

# ಸುಪ್ರೀಂ ಕೋರ್ಟ್ ವಿಶ್ರಾಂತ ನ್ಯಾಯಮೂರ್ತಿ

## ಸಂತೋಷ್ ಹೆಗಡೆಯವರ ಜೊತೆ ಯುವ ಸಂವಾದ


ಉದಯವಾಹಿನಿ ಚಿತ್ರ

• ಉದಯವಾಹಿನಿ ಶಿವಮೊಗ್ಗ

ಯುವ ಸ್ಫೂರ್ತಿ ಅಕಾಡೆಮಿ ಚಿಕ್ಕಮಗಳೂರು, ವಿಸ್ತಾರ ನ್ಯೂಸ್ ಹಾಗೂ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜು, ಗಾಜನೂರು ಇವರ ಸಹಯೋಗದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಭಾಂಗಣದಲ್ಲಿ ಯುವ ಸ್ಫೂರ್ತಿ ಅಕಾಡೆಮಿಯ ಉದ್ಘಾಟನೆ ಹಾಗೂ ವಿದ್ಯಾರ್ಥಿಗಳೊಂದಿಗೆ ಯುವ ಸಂವಾದ ಕಾರ್ಯಕ್ರಮವು ಜರುಗಿತು.

**ಯಶಸ್ವಿಗೊಂಡ ಯುವ ಸ್ಫೂರ್ತಿ ಅಕಾಡೆಮಿ ಉದ್ಘಾಟನೆ**

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಸುಪ್ರೀಂ ಕೋರ್ಟ್‌ನ ವಿಶ್ರಾಂತ ನ್ಯಾಯಮೂರ್ತಿಗಳಾದ ಹಾಗೂ ಕರ್ನಾಟಕ ಲೋಕಾಯುಕ್ತದ ವಿಶ್ರಾಂತ ನ್ಯಾಯಮೂರ್ತಿಗಳಾದ ಶ್ರೀ ಎನ್.ಸಂತೋಷ್ ಹೆಗಡೆಯವರು ಆಗಮಿಸಿ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳೊಂದಿಗೆ ಯುವ ಸಂವಾದ ಕಾರ್ಯಕ್ರಮವನ್ನು ನಡೆಸಿದರು. ಅವರ ಜೀವನದ ನೈಜ ಘಟನೆಗಳನ್ನು ಸ್ಮರಿಸುತ್ತಾ ಪ್ರಾಮಾಣಿಕತೆ ಭ್ರಷ್ಟಾಚಾರ ಮುಕ್ತ ಸಮಾಜವನ್ನು ನಿರ್ಮಿಸಬೇಕಾದರೆ ವಿದ್ಯಾರ್ಥಿಗಳ ಪಾತ್ರ ಎಷ್ಟು ಮುಖ್ಯವಾಗುತ್ತದೆ ಎಂಬುದರ ಬಗ್ಗೆ ಸಂದೇಶವನ್ನು ನೀಡಿದರು. ಹಾಗೂ ವಿದ್ಯಾ ಸಂಸ್ಥೆಯ ಮಕ್ಕಳ ಶಿಸ್ತಿನ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಮತ್ತೋರ್ವ ಅತಿಥಿಗಳಾದ ಸುಪ್ರೀಂಕೋರ್ಟ್ ಹಾಗೂ ಹೈಕೋರ್ಟ್‌ನ ಖ್ಯಾತ ನ್ಯಾಯವಾದಿಗಳಾದ ಶ್ರೀ ವಿಕ್ರಂ ಪಡ್ಕೆರವರು ನಿವೃತ್ತ ನ್ಯಾಯಮೂರ್ತಿಗಳ ಬಗ್ಗೆ ಕಿರುಪರಿಚಯವನ್ನು ಮಾಡುತ್ತಾ ಕಾನೂನಿನ ಅರಿವು ಮತ್ತು ಜಾಗೃತಿಯನ್ನು ಮೂಡಿಸುವ ಮಾತುಗಳನ್ನಾಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶಿವಮೊಗ್ಗದ ದೊಡ್ಡಮ್ಮ ದೇವಿ ಉಪಾಸಕರಾದ ಪೂಜ್ಯ ಶ್ರೀ ಸಿದ್ದಪ್ಪಾಜಿಯವರು ವಹಿಸಿದ್ದರು. ಚಿಕ್ಕಮಗಳೂರಿನ ಯುವಸ್ಫೂರ್ತಿ ಅಕಾಡೆಮಿಯ ಮುಖ್ಯಸ್ಥರಾದ ಶ್ರೀ ಸುಂದರೇಶ್.ಸಿ.ಬಿ.ರವರು ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ವಿಶೇಷವಾದ ಯೋಗ ಪ್ರದರ್ಶನವನ್ನು ಸಾಗರದ ಕುಮಾರಿ ಪ್ರಜ್ಞಾರವರು ನಡೆಸಿಕೊಟ್ಟರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಯುವ ಸ್ಫೂರ್ತಿ ಸೇವಾ ಪ್ರಶಸ್ತಿಯನ್ನು ಪ್ರಧಾನ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗಾಜನೂರಿನ ಮೊರಾರ್ಜಿ ದೇಸಾಯಿ ವಿಜ್ಞಾನ ವಸತಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಲೋಕಪ್ಪ.ವಿ.ದಳವಾಯಿಯವರು ವಹಿಸಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಕೆರಿಯರ್ ಪ್ಲಾನಿಂಗ್ ಪಠ್ಯಕ್ರಮದ ತರಬೇತುದಾರರಾದ ಮುರಳಿ.ಎಸ್. ಡಿಯವರು ನಡೆಸಿಕೊಟ್ಟರೆ, ಸ್ವಾಗತವನ್ನು ಶಿಕ್ಷಕರಾದ ಶ್ರೀಮತಿ ಶ್ವೇತರವರು ಹಾಗೂ ವಂದನಾರ್ಪಣೆಯನ್ನು ಗಣಕವಿಜ್ಞಾನ ಶಿಕ್ಷಕಿಯಾದ ಪಂಕಜಾ.ಹೆಚ್.ಎಸ್ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಕರ್ನಾಟಕದ ಹಲವು ವಸತಿ ಶಾಲೆಗಳ ಪ್ರಾಂಶುಪಾಲರುಗಳು ಹಾಗೂ ಶಿಕ್ಷಕರುಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬ್ಯಾಂಕ್‌ಗಳಲ್ಲಿ ಸೈಬರ್ ಭದ್ರತೆ, ದತ್ತಾಂಶ ಸುರಕ್ಷತೆಗೆ ನಿರ್ಧಾರ

• ಉದಯವಾಹಿನಿ ಬೆಂಗಳೂರು

ಶತಮಾನಕ್ಕೂ ಮೀರಿದ ಇತಿಹಾಸ ಹೊಂದಿರುವ ಪ್ರಮುಖ ಸಹಕಾರಿ ಬ್ಯಾಂಕುಗಳಲ್ಲಿ ಒಂದಾದ ಭಾವಸಾರ ಕ್ಷತ್ರಿಯ ಸಹಕಾರಿ ಬ್ಯಾಂಕ್ ನಿಂದ ಮಾಹಿತಿ, ಭದ್ರತೆ ಮತ್ತು ತಂತ್ರಜ್ಞಾನ ಕುರಿತ ಪಟ್ಟಣ ಸಹಕಾರಿ ಬ್ಯಾಂಕುಗಳ ಸಮಾವೇಶ ನಗರದಲ್ಲಿಂದು ಜರುಗಿತು.

ಡಾ. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾದ ಸಮಾವೇಶದಲ್ಲಿ 150 ಪಟ್ಟಣ ಸಹಕಾರಿ ಬ್ಯಾಂಕ್‌ಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮಾಹಿತಿ ತಂತ್ರಜ್ಞಾನ ತಂಡದ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ದೇಶಾದ್ಯಂತ ಐ.ಟಿ. ವಲಯದ ಸಂಸ್ಥೆಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದವು. ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಮಹಾಮಂಡಳದ ಹಿರಿಯ ನಿರ್ದೇಶಕ ರುದ್ದೇಗೌಡ ಮಾತನಾಡಿ, ಪಟ್ಟಣ ಬ್ಯಾಂಕ್‌ಗಳಲ್ಲಿ ಸುರಕ್ಷತೆ ಅತ್ಯಂತ ಅಗತ್ಯವಾಗಿದೆ. ದತ್ತಾಂಶ ರಕ್ಷಣೆ, ಸೈಬರ್ ರಕ್ಷಣೆಗೆ ಬ್ಯಾಂಕ್ ಗಳ ಆಡಳಿತ ಮಂಡಳಿಗಳು ಸೂಕ್ತ ಪ್ರತಿಬಂಧಕ ಕ್ರಮಗಳನ್ನು ಕೈಗೊಳ್ಳಬೇಕು.


ಉದಯವಾಹಿನಿ ಚಿತ್ರ

> ದತ್ತಾಂಶ ಮತ್ತು ಸೈಬರ್ ಭದ್ರತೆಗೆ ಕೇಂದ್ರ ಸರ್ಕಾರ 2014 ರಲ್ಲಿ ಜಾರಿಗೆ ತಂದ ನಿಯಮಗಳನ್ನು ನಾವು ಅಳವಡಿಸಿಕೊಂಡಿದ್ದೇವೆ. ಮತ್ತಷ್ಟು ಸುಧಾರಿತ ತಂತ್ರಜ್ಞಾನ ಮತ್ತು ನಿಯಮಗಳ ಅಳವಡಿಕೆ ಅಗತ್ಯ. 108 ವರ್ಷಗಳಿಗೂ ಹೆಚ್ಚು ಕಾಲ ಅಸ್ತಿತ್ವದಲ್ಲಿರುವ ನಮ್ಮ ಬ್ಯಾಂಕ್‌ನಲ್ಲಿ ಸುಧಾರಣೆಗೆ ಒತ್ತು ನೀಡಲಾಗಿದೆ ಎಂದರು.
>
> ಅಧ್ಯಕ್ಷ ಕೆ.ಜಿ. ಅನಂತ್ ಕುಮಾರ್

ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ವಿಶೇಷ ಗಮನಹರಿಸಬೇಕು. ಮೈ ಎಲ್ಲಾ ಕಣ್ಣಾಗಿ ಕಾರ್ಯನಿರ್ವಹಿಸಬೇಕು ಎಂದರು.

ಸಹಕಾರ ಸಂಘಗಳ ಜಂಟಿ ನಿಬಂಧಕ ಪಿ. ಮಹೇಶ್, ಬ್ಯಾಂಕಿನ ಸಿಇಒ ಜೆ. ಪ್ರಕಾಶ, ಐ.ಟಿ ಮುಖ್ಯಸ್ಥ ಬಿ.ಕೆ. ಗೋಪಿನಾಥ್, ಶ್ರೀ ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾದ ಸಹಕಾರ ರತ್ನ ಡಾ. ಎಂ.ಆರ್. ವೆಂಕಟೇಶ್ ಸಂವಾದದಲ್ಲಿ ಭಾಗವಹಿಸಿದ್ದರು. ರಾಘವ್ ಗುಪ್ತಾ, ನಿರ್ದೇಶಕರು, ಮೈಂಡ್ ಮಿಲ್ ಸಾಫ್ಟ್‌ವೇರ್ ಲಿಮಿಟೆಡ್, ನೋಯ್ಡಾ, ಪಿಯುಷ್ ಸೋಮಾನಿ, ಸಿಎಂಒ, ಸಿಇಒ, ಇಎಸ್ ಡಿಸ್ ಸಾಫ್ಟ್‌ವೇರ್, ನಾಸಿಕ್, ರಾಮಕುಮಾರ್ ಶೇಖರ್, ಸಿಇಒ, ಯಲಮನ್ಚಲಿ ಡಿಜಿಟಲ್ ಸಲ್ಯೂಷನ್, ಚೆನ್ನೈ ಮತ್ತು ಭಾಸ್ಕರ್ ಪರಶುರಾಮ್, ನಿರ್ದೇಶಕರು, ಐ.ಟಿ. ಸೆಕ್ಯುರಿಟೀಸ್, ಪ್ರೋಟೆಕ್ ಮೈಕ್ರೋಸಿಸ್ಟಮ್, ಬೆಂಗಳೂರು: ಚರ್ಚೆಗಳಲ್ಲಿ ಪ್ರಮುಖವಾಗಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ: ವಿಶ್ವಾಸ ಡಿ. ಗೌಡ

• ಉದಯವಾಹಿನಿ ಬೆಂಗಳೂರು

ಇಲ್ಲಿಯ ಗುರುವೇ ಗೌಡ ಕಲ್ಯಾಣ ಮಂಟಪದಲ್ಲಿ ಅಚೀವರ್ಸ್ ಪ್ರಜ್ಞಾ ಪದವಿ ಪೂರ್ವ ಕಾಲೇಜು ವತಿಯಿಂದ

ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಉದ್ಘಾಟನೆಯನ್ನು ಲೇಖಕರು, ಉದ್ದಿಮೆದಾರರು ಮತ್ತು ರಾಜ್ಯ ಬರಹಗಾರರ ಸಂಘ, ತಾಲ್ಲೂಕು ಘಟಕದ ಅಧ್ಯಕ್ಷರಾದ ಶ್ರೀ ವಿಶ್ವಾಸ್.ಡಿ.ಗೌಡ ರವರು ಕಾರ್ಯಕ್ರಮದ ಕುರಿತು ಹಾಗೂ ವಿದ್ಯಾರ್ಥಿಗಳನ್ನು ಕುರಿತು ಭವ್ಯ ಭಾರತದ ಭಾವಿ ಪ್ರಜೆಗಳ ಭವಿಷ್ಯ ಉಜ್ವಲವಾಗಲಿ ಹಾಗೂ ವಿದ್ಯಾರ್ಥಿಗಳ ಒಡನಾಟ ಸದಾ ಸಂತೋಷವಾಗಿರಲಿ ಎಂದು ಹಾರೈಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಚೀವರ್ಸ್ ಎಜುಕೇಶನ್


ಉದಯವಾಹಿನಿ ಚಿತ್ರ

ಟ್ರಸ್ಟ್ ಅಧ್ಯಕ್ಷರಾದ ಶ್ರೀ ಸಂತೋಷ್ ಬಿ. ಎನ್ ನೆರವೇರಿಸಿದರು. ಪ್ರಾರ್ಥನಾ ನೃತ್ಯವನ್ನು ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯಾದ ಸ್ನೇಹ ರವರು ನೆರವೇರಿಸಿದರು. ಇಂಗ್ಲೀಷ್ ಉಪನ್ಯಾಸಕರಾದ ಶ್ರೀಮತಿ ಅಶ್ವಿನಿ ಎಸ್ ಆರ್ ರವರು ಗಣ್ಯರಿಗೆ ಸ್ವಾಗತವನ್ನು ಕೋರಿದರು. ಕಳೆದ ಸಾಲಿನ ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಅವರ ಪೋಷಕರೊಂದಿಗೆ ಸನ್ಮಾನಿಸಲಾಯಿತು, ಹಲವು ಬಗ್ಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಾಡಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳನ್ನು ಸ್ವಾಗತಿಸಲಾಯಿತು. ಕಾರ್ಯಕ್ರಮದಲ್ಲಿ ಅಚೀವರ್ಸ್ ಪ್ರಜ್ಞಾ ಪದವಿಪೂರ್ವ ಕಾಲೇಜು ಆಡಳಿತ ಅಧಿಕಾರಿಗಳಾದ ಸಂದೇಶ್ ಜಿ.ಜೆ, ಅಚೀವರ್ಸ್ ಎಜುಕೇಶನ್ ಟ್ರಸ್ಟ್‌ನ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ್ ಸ್ವಾಮಿ, ಅಚೀವರ್ಸ್ ಎಜುಕೇಶನ್ ಟ್ರಸ್ಟ್‌ನ ಸಂಯೋಜಕರಾದ ಶ್ರೀ ಪದ್ಮನಾಭ .ಕೆ. ಗೌಡ ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಅಚೀವರ್ಸ್ ಪ್ರಜ್ಞಾ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಝುಲ್ಫಿಕರ್ ಅಹಮದ್ ರವರು ನೆರವೇರಿಸಿದರು.

ಕಾರ್ಯಕ್ರಮದ ವಂದನಾರ್ಪಣೆಯನ್ನು ಕಾಲೇಜಿನ ಜೀವಶಾಸ್ತ್ರ ಉಪನ್ಯಾಸಕರಾದ ಶ್ರೀಮತಿ ಮಮತಾರವರು ನೆರವೇರಿಸಿ ಕೊಟ್ಟರು. ಒಟ್ಟರೆ ಕಾರ್ಯಕ್ರಮವು ತುಂಬಾ ಅಚ್ಚುಕಟ್ಟಾಗಿ ನೆರವೇರುವಂತೆ ವಿದ್ಯಾರ್ಥಿಗಳ ಸಹಭಾಗಿತ್ವದೊಂದಿಗೆ ಪ್ರಾಂಶುಪಾಲರು ಹಾಗೂ ಉಪನ್ಯಾಸಕ ವರ್ಗದವರು ಪಾಲ್ಗೊಂಡಿದ್ದರು.

# ವೈಶ್ವಿಕ ಹಿಂದೂ ರಾಷ್ಟ್ರ ಮಹೋತ್ಸವದ

## ಪ್ರಯುಕ್ತ ವಿಶೇಷ ಲೇಖನ ಮಾಲಿಕೆ

• ಉದಯವಾಹಿನಿ ಬೆಂಗಳೂರು

ದೇಶಾದ್ಯಂತದ 350 ಕ್ಕಿಂತಲೂ ಹೆಚ್ಚಿನ ಸಂಘಟನೆಗಳು ಸಂಘಟಿತವಾಗಿ ರಾಷ್ಟ್ರ-ಧರ್ಮಕ್ಕಾಗಿ ಕಾರ್ಯ ಮಾಡುತ್ತಿವೆ. ಆ. ಅಧಿವೇಶನದಲ್ಲಿ ಸ್ಥಾಪನೆಯಾದ 'ರಾಷ್ಟ್ರೀಯ ಹಿಂದೂ ಆಂದೋಲನಗಳ ಮೂಲಕ ದೇಶಾದ್ಯಂತದ ವಿವಿಧ ಸಂಘಟನೆಗಳು ಒಟ್ಟಾಗಿ 1776 ಕ್ಕೂ ಹೆಚ್ಚು ರಾಷ್ಟ್ರ-ಧರ್ಮಗಳ ಮೇಲಿನ ಆಘಾತಗಳ ವಿರುದ್ಧ ಯಶಸ್ವಿ ಆಂದೋಲನಗಳನ್ನು ನಡೆಸಿವೆ.

ಇ. ಶ್ರೀ ತುಳಜಾಪುರ ಮಂದಿರ ಸಂಸ್ಥಾನ, ಕೊಲ್ಹಾಪುರದ ಶ್ರೀ ಮಹಾಲಕ್ಷ್ಮೀ ಮಂದಿರ, ಪಂಢರಪುರದ ಶ್ರೀ ವಿಠಲ ಮಂದಿರ, ಶಿರ್ಡಿಯ ಶ್ರೀ ಸಾಯಿಬಾಬಾ ಸಂಸ್ಥಾನ ಇಂತಹ ಅನೇಕ ದೇವಸ್ಥಾನಗಳಲ್ಲಾಗುತ್ತಿದ್ದ ಭ್ರಷ್ಟಾಚಾರವನ್ನು ಬಯಲಿಗೆಳೆಯಲಾಯಿತು. ಈ ಅಧಿವೇಶನದಿಂದ ಮಂದಿರಗಳ ಸಂಘಟನೆಗಾಗಿ ಮತ್ತು ಮಂದಿರಗಳನ್ನು ಸರಕಾರೀಕರಣದಿಂದ ಮುಕ್ತಗೊಳಿಸಲು ಮಂದಿರ ಮಹಾಸಂಘದ ಕಾರ್ಯವು ಇಂದು ಮಹಾರಾಷ್ಟ್ರ, ಗೋವಾ ಮತ್ತು ಕರ್ನಾಟಕ ರಾಜ್ಯಗಳಲ್ಲಿ ನಡೆಯುತ್ತಿದೆ. ಅಂದಾಜು 14 ಸಾವಿರ ದೇವಸ್ಥಾನಗಳು ಇಂದು ಈ ದೃಷ್ಟಿಯಿಂದ ಸಂಘಟಿತವಾಗಲು ಸಂಪರ್ಕದಲ್ಲಿವೆ. ಇದು ಬಹುದೊಡ್ಡ ಕಾರ್ಯವಾಗಿದೆ. ಇದೇ ಮಾಧ್ಯಮದಿಂದ ಮಹಾರಾಷ್ಟ್ರ ಮತ್ತು ಕರ್ನಾಟಕದ 597 ದೇವಸ್ಥಾನಗಳಲ್ಲಿ ವಸ್ತ್ರಸಂಹಿತೆ ಜ್ಯಾರಿಯಾಗಿದೆ.




ಈ. ಕೋಟೆಗಳ ಮೇಲಿನ ಅತಿಕ್ರಮಣದ ವಿರುದ್ಧ ಮಹಾರಾಷ್ಟ್ರ ರಾಜ್ಯವ್ಯಾಪಿ ಆಂದೋಲನ ನಡೆಸಲಾಗಿದೆ. ಅಲ್ಲಿ ಸರಕಾರವು ಅದರತ್ತ ಗಮನ ಹರಿಸಿ ಮಾಹಿಮ, ಲೊಹಗಡ ಮುಂತಾದ ಕೋಟೆಗಳ ಮೇಲಿನ ಅತಿ ಕ್ರಮಣವನ್ನು ತೆರವು ಮಾಡಲು ಆರಂಭಿಸಿದೆ. ಇಂತಹ ಅನೇಕ ಕೆಲಸಗಳನ್ನು ಹೇಳಬಹುದು ಹಿಂದೂ ರಾಷ್ಟ್ರದಲ್ಲಿಯೇ ನಿಜವಾದ ಅರ್ಥದಿಂದ ಸುರಕ್ಷಿತ ಹಾಗೂ ಸಮೃದ್ಧಿಯ 'ಗ್ಯಾರಂಟಿ' ! ಇವೆಲ್ಲವುಗಳಿಂದ ನಿಮಗೆ, 'ಅಬ್ ಕಿ ಬಾರ, ಹಿಂದೂ ರಾಷ್ಟ್ರ ಕಿ ಪುಕಾರ ಎಷ್ಟು ಅವಶ್ಯಕವಿದೆ ಎಂದು ಗಮನಕ್ಕೆ ಬಂದಿರಬಹುದು. ಅದಕ್ಕಾಗಿ 'ನಾನು ಮತ್ತು ನನ್ನದು ಎಂಬ ಸಂಕುಚಿತ ವಿಚಾರವನ್ನು ಬದಿಗಿರಿಸಿ ವಿಶ್ವದ ಕಲ್ಯಾಣದ ವಿಚಾರ ಮಾಡುವ ಹಿಂದೂ ರಾಷ್ಟ್ರದ ಸಾಕ್ಷೀದಾರರು ಮಾತ್ರವಲ್ಲ ಪಾಲುದಾರರಾಗಿರಿ, ಹಿಂದೂ ರಾಷ್ಟ್ರದಲ್ಲಿಯೇ ನಾಗರಿಕರಿಗೆ ನಿಜವಾದ ಅರ್ಥದಿಂದ ಸುರಕ್ಷಿತ ಮತ್ತು ಸಮೃದ್ಧಿಯ 'ಗ್ಯಾರಂಟಿ' ಸಿಗಲಿದೆ , ಈ ಸಲ 'ಅಖಿಲ ಭಾರತೀಯ ಹಿಂದೂ ರಾಷ್ಟ್ರ ಅಧಿವೇಶನ'ದ ಅಂದರೆ 'ವೈಶ್ವಿಕ ಹಿಂದೂ ರಾಷ್ಟ್ರ ಮಹೋತ್ಸವ'ದ 12 ನೇಯ ವರ್ಷವಾಗಿದೆ. ಈ ಅಧಿವೇಶನವು 24 ರಿಂದ 30 ಜೂನ್ 2024 ಈ ಕಾಲಾವಧಿಯಲ್ಲಿ ಫೊಂಡಾ, ಗೋವಾದಲ್ಲಿರುವ ಶ್ರೀ ರಾಮನಾಥ ದೇವಸ್ಥಾನದ ಶ್ರೀ ವಿದ್ಯಾಧಿರಾಜ ಸಭಾಗೃಹದಲ್ಲಿ ಜರುಗಲಿದೆ.

ಈ ಅಧಿವೇಶನದಲ್ಲಿ ದೇಶ-ವಿದೇಶಗಳ 350 ಹಿಂದುತ್ವನಿಷ್ಠ ಸಂಘಟನೆಗಳ ಒಂದು ಸಾವಿರಕ್ಕಿಂತಲೂ ಹೆಚ್ಚಿನ ಪ್ರತಿನಿಧಿಗಳು, ಸಂತರು, ಧರ್ಮಾಚಾರ್ಯರು, ಹಿಂದುತ್ವನಿಷ್ಠ ನೇತಾರರು, ವಿಚಾರವಂತರು, ಲೇಖಕರು, ಮಾಜಿ ನ್ಯಾಯಮೂರ್ತಿಗಳು, ಹಿರಿಯ ವಕೀಲರು, ಮಾಜಿ ಆಡಳಿತ ಅಧಿಕಾರಿಗಳು, ಪತ್ರಕರ್ತರು ಉಪಸ್ಥಿತರಿರುವರು.

ಈ ಅಧಿವೇಶನದಲ್ಲಿ ಹಿಂದೂಗಳ ರಕ್ಷಣೋಪಾಯ, ಹಿಂದೂ ರಾಷ್ಟ್ರಕ್ಕಾಗಿ ಸಾಂವಿಧಾನಿಕ ಪ್ರಯತ್ನ, ಮಂದಿರ ಸಂಸ್ಕೃತಿಯ ರಕ್ಷಣೆಯ ಉಪಾಯ, ಜಾಗತಿಕ ಸ್ತರದಲ್ಲಿ ಹಿಂದುತ್ವದ ರಕ್ಷಣೆ, ದೇಶದ ರಕ್ಷಣೆಗೆ ಸವಾಲನ್ನೊಡ್ಡುವ ಹಲಾಲ್ ಅರ್ಥವ್ಯವಸ್ಥೆಯ ಮೇಲಿನ ಉಪಾಯ, ಮುಂತಾದ ವಿಷಯಗಳ ಬಗ್ಗೆ ಸವಿಸ್ತಾರವಾಗಿ ಚರ್ಚಿಸಿ ಸರ್ವಾನುಮತದಿಂದ ಕೃತಿಯ ದಿಶೆಯನ್ನು ನಿಶ್ಚಯಿಸಲಾಗುವುದು ಮತ್ತು ವರ್ಷವಿಡೀ ಹಿಂದುತ್ವನಿಷ್ಠ ಸಂಘಟನೆಗಳ ಕಾರ್ಯಕರ್ತರು ಆ ದಿಶೆಯಲ್ಲಿ ಪ್ರಯತ್ನಿಸುವರು. ಈ ಅಧಿವೇಶನವನ್ನು ಹಿಂದೂ ಜನಜಾಗೃತಿ ಸಮಿತಿಯ ಯು-ಟ್ಯೂಬ್, ಫೇಸ್‌ಬುಕ್ ಮತ್ತು ಎಕ್ಸ್ ಅಕೌಂಟನಲ್ಲಿ ಹಾಗೂ www. HinduJagruti.org ಈ ಜಾಲತಾಣದಲ್ಲಿ ನೇರ (ಲೈವ್) ಪ್ರಸಾರ ಮಾಡಲಾಗುವುದು.

# ಚುಡಾ ರತ್ನಮ್ಮನವರಿಗೆ ಸ್ತ್ರೀರತ್ನ ಪ್ರಶಸ್ತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಶೇಷ

ಮೈಸೂರು ಪ್ರೆಸ್ ಕ್ಲಬ್(ರಿ ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ತನ್ನ 17ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದಲ್ಲಿ ಹಲವು ಸಾಧಕರಿಗೆ ಹಲವು ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ತನ್ನ ಸುಪುತ್ರನೊಂದಿಗೆ 23 ವರ್ಷದ ಹಳೆಯ ಬಜಾಜ್ ಚೇತನ್ ಸ್ಕೂಟರ್ ನಲ್ಲಿ ಸಮಗ್ರ ಭಾರತ, ನೇಪಾಳ ಭೂತಾನ್ , ಮಯನ್ಮರ್ ದೇಶಗಳನ್ನು ಒಳಗೊಂಡಂತೆ 84, 692 ಕಿಲೋಮೀಟರ್ಗಳ ಪ್ರಯಾಣವನ್ನು ಯಶಸ್ವಿಯಾಗಿ ಮುಗಿಸಿ ಮೈಸೂರಿಗೆ ಹಿಂತಿರುಗಿರುವ ಶ್ರೀಮತಿ ಚೂಡಾರತ್ನಮ್ಮ ನವರಿಗೆ ಸ್ತ್ರೀ ರತ್ನ ಪ್ರಶಸ್ತಿಯನ್ನು ಗೌರವಪೂರ್ವಕವಾಗಿ ನೀಡಲಾಯಿತು. ಇದೇ ಸಂದರ್ಭದಲ್ಲಿ ಮಾತನಾಡಿದ ಚುಡಾರತ್ನಮ್ಮನವರು ತಂದೆ ತಾಯಿಗಳು ಮಾತನಾಡುವ ಹಾಗೂ ನಮ್ಮೊಡನೆ ವಾಸಿಸುವ ದೇವರು, ವೃದ್ಧಾಪ್ಯದಲ್ಲಿ ತಂದೆ ತಾಯಿಗಳ ಸೇವೆ ಎಲ್ಲಾಮಕ್ಕಳ ಕರ್ತವ್ಯವಾಗಬೇಕು. ದಿನದ ಕೆಲಸ ಸಮಯ ವಯಸ್ಸಾದ ಜೀವಗಳೊಂದಿಗೆ ಪ್ರೀತಿಯಿಂದ ಕಳೆಯಬೇಕು. ತಾಯಿಯಾದವಳು ತನ್ನ ಜೀವನದಲ್ಲಿ ಹಲವಾರು ಜವಾಬ್ದಾರಿಗಳನ್ನು ನಿಭಾಯಿಸಿ ತಾಯಿಯಾಗಿ ಪತ್ನಿಯಾಗಿ ಮಗಳಾಗಿ ಅತ್ತಿಗೆಯಾಗಿ ನಾದಿನಿಯಾಗಿ ಅತ್ತೆಯಾಗಿ ಹೀಗೆ ಹಲವಾರು ಪಾತ್ರಗಳನ್ನು ಏಕಕಾಲದಲ್ಲಿ ನಿಭಾಯಿಸಿ ಎಲ್ಲರಲ್ಲೂ ವಿಶ್ವಾಸ ಭಾವನೆ ಮೂಡಿಸುವ ಮೂಲಕ ಪೂಜ್ಯಳಾಗುತ್ತಾಳೆ. ಇಂತಹ ಮಾತೆಯರಿಂದಲೇ ಭಾರತದಲ್ಲಿ ನೂರಾರು ಮಹಾಪುರುಷರು ಜನಿಸಿ ತಮ್ಮ ಛಾಪನ್ನು ಮೂಡಿಸಲು ಕಾರಣವಾಗಿದೆ. ಇಂದು ನಾವೆಲ್ಲ ಸುಸ್ಥಿತಿಯಲ್ಲಿರಲು ತಂದೆ ತಾಯಿಗಳೇ ಪ್ರಥಮ ಕಾರಣರು. ತನ್ನ ಮಕ್ಕಳು ಸಮಾಜದಲ್ಲಿ ಗೌರವದಿಂದ ಬಾಳಬೇಕೆಂದು ಮಕ್ಕಳನ್ನು ತಿದ್ದಿ ತೀಡಿ ತಾನು ಉತ್ತಮವಾಗಿ ನಡೆದು ಸಂಸ್ಕಾರ ಸಂಸ್ಕೃತಿ ಕಲಿಸುತ್ತಾಳೆ. ಮಕ್ಕಳು ಒಂದು ಹಂತ ತಲುಪಿದಾಗ ಮನದಲ್ಲೇ ಹಿಗ್ಗಿ,ಹರಸುತ್ತಾಳೆ. ಹಾಗಾಗಿ ವೃದ್ಧಾಪ್ಯದಲ್ಲಿ ಎಲ್ಲಾ ಮಕ್ಕಳು ಭಾವನಾತ್ಮಕವಾಗಿ ಜೊತೆಯಾಗಿ ನಿಲ್ಲಲಿ ಎಂದು ಆಶಯ ವ್ಯಕ್ತಪಡಿಸಿದರು. ಪುರ ಭವನ (ಟೌನ್ ಹಾಲ್) ದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮೈಸೂರು ಹಾಗು ಪ್ರೆಸ್ ಕ್ಲಬ್ಬಿನ ಎಲ್ಲಾಗಣ್ಯರು, ಕಲಿಯುಗ ಶ್ರವಣಕುಮಾರ ಖ್ಯಾತಿಯ ಕೃಷ್ಣಕುಮಾರ್ ರವರು ಉಪಸ್ಥಿತರಿದ್ದರು.

# ‘ಸೇವ್ ಸಂಡೂರು ಫಾರೆಸ್ಟ್’ ಅಭಿಯಾನಕ್ಕೆ ಪ್ರಾಥಮಿಕ ಗೆಲುವು

## ಅರಣ್ಯ ಕಾಯ್ದೆ ಉಲ್ಲಘಂನೆಗಾಗಿ ಸಿಇಸಿಯು ನೀಡಿರುವ ನಿಗದಿತ ಕಾಲಮಿತಿಯಲ್ಲಿ ಸಂಪೂರ್ಣವಾಗಿ ಜಾರಿ ಮಾಡಲು ವಿಫಲ

• ಉದಯವಾಹಿನಿ, ಬಳ್ಳಾರಿ

ಸಾಮಾಜಿಕ ಜಾಲತಾಣದಲ್ಲಿ ನಡೆಯುತ್ತಿದ್ದ 'Save Sandur' ಅಭಿಯಾನಕ್ಕೆ ಪ್ರಾಥಮಿಕ ಗೆಲುವು ಸಿಕ್ಕಿದೆ. ಸಂಡೂರು ತಾಲ್ಲೂಕಿನ ಸ್ವಾಮಿ ಮಲೈ ಬ್ಲಾಕಿನ ದೇವದಾರಿ ಹಿಲ್ ಪ್ರದೇಶದಲ್ಲಿ ಗಣಿಗಾರಿಕೆಗಾಗಿ ನೀಡಲಾಗಿರುವ ಅರಣ್ಯ ತಿಳುವರಿಯನ್ನು ಅನುಷ್ಠಾನಗೊಳಿಸದಂತೆ ಕರ್ನಾಟಕ ಸರ್ಕಾರ ಟಿಪ್ಪಣಿ ಹೊರಡಿಸಿದೆ.



ಉದಯವಾಹಿನಿ ಚಿತ್ರ

ಸಂಡೂರಿನಲ್ಲಿ ಗಣಿಗಾರಿಕೆಗೆ ಒಪ್ಪಿಗೆ ಇಲ್ಲ

ಈ ಕುರಿತು ಕರ್ನಾಟಕ ಪರಿಸರ ಮತ್ತು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಟಿಪ್ಪಣಿ ಹೊರ ಡಿಸಿದ್ದಾರೆ. ಆದ್ದರಿಂದ 'ಅರಣ್ಯ ತಿರುವಳಿ ಗುತ್ತಿಗೆ ಪತ್ರ' ಮಾಡಿಕೊಳ್ಳಲಾಗುವುದಿಲ್ಲ, ಅರಣ್ಯ ಭೂಮಿಯನ್ನು ಹಸ್ತಾಂತರ ಮಾಡ ಲಾಗುವುದಿಲ್ಲ.

ಸಂಬಂಧಿಸಿದವರಿಗೆ ಈ ಕುರಿತು ಕೂಡಲೇ ಅಗತ್ಯ ಸೂಚನೆಗಳನ್ನು ನೀಡಬೇಕು ಎಂದು ಸಚಿವ ಈಶ್ವರ ಖಂಡ್ರೆ ಅವರು ಪತ್ರದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಇವರಿಗೆ ನಿರ್ದೇಶನ ನೀಡಿದ್ದಾರೆ.

**ಸಚಿವರ ಟಿಪ್ಪಣಿ ಅಂಶಗಳು:**

ಸಚಿವರ ಪತ್ರದಲ್ಲಿ ಮೇ ಕೆಐಒಸಿಎಲ್, ಬೆಂಗಳೂರು ಸಂಸ್ಥೆಯು ಬ ಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ಸ್ವಾಮಿ ಮಲೈ ಬ್ಲಾಕಿನ ದೇವದಾರಿ ಹಿಲ್ ಪ್ರದೇಶದಲ್ಲಿ 401.5761 ಹೆಕ್ಟೇರ್ ಅರಣ್ಯ ಭೂಮಿಯಲ್ಲಿ ಕಬ್ಬಿಣದ ಅದಿರು ಗಣಿಗಾರಿಕೆಗಾಗಿ ಅರಣ್ಯ ತಿರುವಳಿ ಪಡೆದಿದ್ದು, ಅರಣ್ಯ ಇಲಾಖೆ ವತಿಯಿಂದ 'ಅರಣ್ಯ ತಿರುವಳಿ ಗುತ್ತಿಗೆ ಪತ್ರ' ಸಹಿಯೂ ಸೇರಿದಂತೆ ಜಮೀನು ಹಸ್ತಾಂತರ ಬಾಕಿ ಇರುವುದನ್ನು ಗಮನಿಸಲಾಗಿದೆ.

ಸದರಿ ಸಂಸ್ಥೆಯು ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಈ ಹಿಂದೆ ನಡೆದ ಗಣಿಗಾರಿಕೆಯ ಲೋಪದೋಷ/ ಅರಣ್ಯ ಕಾಯ್ದೆ ಉಲ್ಲಘಂನೆಗಳಗಾಗಿ ಸಿಇಸಿಯು ನೀಡಿರುವ ನಿರ್ದೇಶನಗಳನ್ನು ನಿಗದಿತ ಕಾಲಮಿತಿಯಲ್ಲಿ ಸಂಪೂರ್ಣವಾಗಿ ಜಾರಿ ಮಾಡಲು ವಿಫಲವಾಗಿರುವ ಬಗ್ಗೆ ದೂರುಗಳು ಕೇಳಿ ಬಂದಿರುತ್ತವೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಕೆಐಒಸಿಎಲ್, ಬೆಂಗಳೂರು ಸಂಸ್ಥೆಯು ಸಿಇಸಿ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವವರೆಗೆ, ಸದರಿ ಸಂಸ್ಥೆಗೆ ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ಸ್ವಾಮಿ ಮಲೈ ಬ್ಲಾಕಿನ ದೇವದಾರಿ ಹಿಲ್ ಪ್ರದೇಶದಲ್ಲಿ ಗಣಿಗಾರಿಕೆಗಾಗಿ ನೀಡಲಾಗಿರುವ ಅರಣ್ಯ ತಿರುವಳಿಯನ್ನು ಅನುಷ್ಠಾನಗೊಳಸದಂತೆ, ಅಂದರೆ 'ಅರಣ್ಯ ತಿರುವಳಿ ಗುತ್ತಿಗೆ ಪತ್ರ' ಮಾಡಿಕೊಳ್ಳದಂತೆ ಹಾಗೂ ಅರಣ್ಯ ಭೂಮಿಯನ್ನು ಹಸ್ತಾಂತರಿಸದಂತೆ, ಸಂಬಂಧಿಸಿದವರಿಗೆ ಕೂಡಲೇ ಅಗತ್ಯ ಸೂಚಿಸಲು ನಿರ್ದೇಶಿಸಿದೆ ಎಂದು ಹೇಳಿದ್ದಾರೆ. ಗಣಿಗಾರಿಕೆಯನ್ನು ವಿರೋಧಿಸಿ 'ಸೇವ್ ಸಂಡೂರು ಫಾರೆಸ್ಟ್' ಎಂಬ ಅಭಿಯಾನವೂ ಸಾಮಾಜಿಕ ಜಾಲತಾಣದಲ್ಲಿ ಪ್ರಾರಂಭವಾಗಿತ್ತು. ಗಣಿಗಾರಿಕೆ ಆರಂಭವಾದರೆ ಹಂತ ಹಂತವಾಗಿ 99 ಸಾವಿರಕ್ಕೂ ಅಧಿಕ ಮರಗಳನ್ನು ಕಡಿಯಲಾಗುತ್ತದೆ ಎಂದು ಅಂದಾಜಿಸಲಾಗಿದೆ.

ಪರಿಸರ ಪ್ರೇಮಿಗಳು ಸಂಡೂರಿನಲ್ಲಿ ಗಣಿಗಾರಿಕೆ ನಡೆಸಲು ವಿರೋಧ ವ್ಯಕ್ತಪಡಿಸಿದ್ದರು. ಸಾಮಾಜಿಕ ಜಾಲತಾಣದಲ್ಲಿ ಧ್ವನಿ ಎತ್ತಿದ್ದರು. ಗಣಿಗಾರಿಕೆಯಿಂದ ಪರಿಸರ ನಾಶವಾಗಲಿದೆ. ಇದು ಜನ ಜೀವನದ ಮೇಲೆ ಪರಿಣಾಮ ಬೀರಲಿದೆ. ಸಂಡೂರಿನಲ್ಲಿ ಉಳಿದಿರುವ ಅರಣ್ಯವನ್ನಾದರೂ ಸರ್ಕಾರ ಉಳಿಸಿಕೊಳ್ಳಬೇಕು ಎಂದು ಪರಿಸರ ಪ್ರೇಮಿಗಳು ಆಗ್ರಹಿಸಿದ್ದರು.

ಸಂಡೂರಿನಲ್ಲಿ ಗಣಿಗಾರಿಕೆ ನಡೆಸುವ ವಿಚಾರ ಕೇಂದ್ರ ಮತ್ತು ರಾಜ್ಯ ಸರ್ಕಾರದ ನಡುವಿನ ಜಟಾಪಟಿಗೆ ಕಾರಣವಾಗಿದೆ. ಕೇಂದ್ರ ಬೃಹತ್ ಕೈಗಾರಿಕಾ ಹಾಗೂ ಉಕ್ಕು ಸಚಿವರಾಗಿ ಮಂಡ್ಯದ ಸಂಸದ ಎಚ್. ಡಿ. ಕುಮಾರಸ್ವಾಮಿ ಅಧಿಕಾರವಹಿಸಿಕೊಂಡ ಬಳಿಕ ಮೊದಲು ಸಹಿ ಹಾಕಿದ್ದು ಇದೇ ಕಡತಕ್ಕೆ. ಆದರೆ ಈಗ ರಾಜ್ಯ ಸರ್ಕಾರ ಗಣಿಗಾರಿಕಗೆ ಒಪ್ಪಿಗೆ ನೀಡಿಲ್ಲ.

**ಗಣಿಗಾರಿಕೆಗೆ ವಿರೋಧ ವ್ಯಕ್ತ**

**ಕುದುರೆಮುಖ ಕಬ್ಬಿಣದ ಅದಿರು ಕಂಪನಿ (ಕೆಐಒಸಿಎಲ್) ಕಡತಕ್ಕೆ ಕೇಂದ್ರ ಬೃಹತ್ ಕೈಗಾರಿಕಾ ಹಾಗೂ ಉಕ್ಕು ಸಚಿವ ಎಚ್. ಡಿ. ಕುಮಾರಸ್ವಾಮಿ ಸಹಿ ಹಾಕಿದ್ದಾರೆ ಎಂಬ ಮಾಹಿತಿ ತಿಳಿದ ಬಳಿಕ ಸಂಡೂರಿನಲ್ಲಿ ಗಣಿಗಾರಿಕೆಗೆ ವಿರೋಧ ವ್ಯಕ್ತವಾಗಿತ್ತು.**

**ಈ ಹಿಂದೆ ಕರ್ನಾಟಕದ ಅರಣ್ಯ ಇಲಾಖೆ ಜೂನ್ 2019 ಮತ್ತು ಫೆಬ್ರವರಿ 2020ರ ನಡುವೆ ಕಬ್ಬಿಣ ಮತ್ತು ಮ್ಯಾಂಗನೀಸ್ ಅದಿರು ಗಣಿಗಾರಿಕೆಯ ಪ್ರಸ್ತಾಪವನ್ನು ತಿರಸ್ಕಾರ ಮಾಡಿತ್ತು. ಬಳಿಕ ಈ ಕುರಿತು ಕರ್ನಾಟಕ ಹೈಕೋರ್ಟ್‌ಗೆ ಅರ್ಜಿಯೊಂದು ಸಲ್ಲಿಕೆಯಾಗಿದೆ. ಅರ್ಜಿ ವಿಚಾರಣೆ ಹಂತದಲ್ಲಿರುವಾಗಲೇ ಗಣಿಗಾರಿಕೆಗೆ ಒಪ್ಪಿಗೆ ನೀಡಿ ಕೇಂದ್ರ ಸಚಿವರು ಸಹಿ ಹಾಕಿದ್ದರು.**

# ಜಿಲ್ಲಾ ಯುವ ಮೋರ್ಚಾ ನೂತನ ಉಪಾಧ್ಯಕ್ಷರಾಗಿ ಸಿದ್ದು ಹೂಗಾರ ಆಯ್ಕೆ

• ಉದಯವಾಹಿನಿ, ಸಿಂಧನೂರು

ಭಾನುವಾರ ಜಿಲ್ಲೆಯ ಭಾರತೀಯ ಜನತಾ ಪಾರ್ಟಿ ಪಕ್ಷದ ಯುವ ಮೋರ್ಚಾದ ನೂತನ ಜಿಲ್ಲಾ ಉಪಾಧ್ಯಕ್ಷರಾಗಿ ಸಿದ್ದು ಹೂಗಾರ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ನಂತರ ಮಾತನಾಡಿದ ಅವರು ಬಿಜೆಪಿ ಪಕ್ಷದ ಜಿಲ್ಲಾಧ್ಯಕ್ಷರು ಹಾಗೂ ರಾಯಚೂರು ಜಿಲ್ಲೆಯ ಶಾಸಕರಾದ ಡಾ. ಶಿವರಾಜ ಪಾಟೀಲ್ ಅವರ ಸೂಚನೆ ಮೇರೆಗೆ ಪಕ್ಷದ ಸಿದ್ಧಾಂತದೊಂದಿಗೆ ನನ್ನನ್ನು ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು. ಮುಂದಿನ ದಿನಮಾನಗಳಲ್ಲಿ ಪಕ್ಷದ ತತ್ವಸಿದ್ಧಾಂತ ದೊಂದಿಗೆ ಪಕ್ಷಕ್ಕಾಗಿ ದುಡಿಯುತ್ತೇನೆ. ಪ್ರತಿಯೊಂದು ವಿವಿಧ ತಾಲ್ಲೂಕು ಹಾಗೂ ಹೋಬಳಿಗಳಿಗೆ ಭೇಟಿ ನೀಡಿ. ಪಕ್ಷದ ಕಾರ್ಯಕರ್ತರೊಂದಿಗೆ ಸಭೆ ನಡೆಸಿ ಒಗ್ಗಟ್ಟು ಮೂಲಕ ಪಕ್ಷದ ಏಳಿಗೆಗಾಗಿ ಹಗಲು ರಾತ್ರಿ ಎನ್ನದೆ ಪಕ್ಷವನ್ನು ಸಂಘಟನೆ ಕಟ್ಟಲು ಮುಂದಾಗುತ್ತಾನೆ.ಎಂದು ಹೇಳಿದರು. ಯುವ ಮೋರ್ಚಾ ಜಿಲ್ಲಾಧ್ಯಕ್ಷರಾದ ಎನ್ ವಿನಾಯಕ್ ರಾವ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಶಂಕರ್ ರೆಡ್ಡಿ. ಹೂಗಾರ್ ಸಮಾಜದ ರಾಜ್ಯಾಧ್ಯಕ್ಷರಾದ ಬಸವರಾಜ್ ಹೂಗಾರ. ಜಿಲ್ಲಾ ಉಪಾಧ್ಯಕ್ಷರಾದ ಚನ್ನಬಸವ ದೇಸಾಯಿ . ಜಿಲ್ಲಾ ಯುವ ಮೋರ್ಚಾ ಕಾರ್ಯದರ್ಶಿಯಾದ ಅಕ್ಷಯ್ ಗೌಡ. ಮಲ್ಲಿಕಾರ್ಜುನ ಹೂಗಾರ್. ವಿರುಪಾಕ್ಷಿ ಹೂಗಾರ್. ಮಲ್ಲಿಕಾರ್ಜುನ. ರವಿಕುಮಾರ್. ಶಿವರಾಜ್ ದೇಸಾಯಿ.,ಭಾರತೀಯ ಜಿಲ್ಲಾ ಮುಖಂಡರು ಲಕ್ಷ್ಮಣ ಶ್ರೀ ಪುರಂ ಜಂಕ್ಷನ್ ಸೇರಿದಂತೆ ಇತರರು ಇದ್ದರು



ಉದಯವಾಹಿನಿ ಚಿತ್ರ

**ನನ್ನನ್ನು ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡುವುದಕ್ಕೆ ಮುಂದಾದ ಪಕ್ಷದ ರಾಜ್ಯ, ಜಿಲ್ಲಾ ವರಿಷ್ಠರಿಗೂ ಸ್ಥಳೀಯ ಹಿರಿಯ ಮುಖಂಡರು ಅಧ್ಯಕ್ಷರಿಗೂ ಹಾಗೂ ಉಪಾಧ್ಯಕ್ಷರಿಗೂ ಕಾರ್ಯಕರ್ತರಿಗೂ ಮತ್ತು ಪರೋಕ್ಷವಾಗಿ ಬೆಂಬಲಿಸಿದ ನಿಮಗೇಲ್ಲಾರಿಗೂ ಪತ್ರಿಕೆ ಪ್ರಕಟಣೆ ಮೂಲಕ ಧನ್ಯವಾದಗಳ ತಿಳಿಸಿದರು.**

# ರಾಜ್ಯಕ್ಕೆ ಪ್ರಥಮ ಸ್ಥಾನ, ಸಿಎಂರಿಂದ ಪ್ರಶಸ್ತಿ ಪುರಸ್ಕಾರ

• ಉದಯವಾಹಿನಿ, ಇಂಡಿ

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಗಣ ತ ವಿಷಯದಲ್ಲಿ ಸರಾಸರಿ ಅಂಕಗಳನ್ನು ಪಡೆದ ರಾಜ್ಯದ ಒಟ್ಟು 830ವಸತಿ ಶಾಲೆಗಳಲ್ಲಿ ಕಿತ್ತೂರ್ ರಾಣಿ ಚನ್ನಮ್ಮ ಶಾಲೆಯು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದೆ ಎಂದು ಶಾಲೆಯ ಪ್ರಾಂಶುಪಾಲರು ಸಿ.ಸಿ. ಸೇಠ್ ಪತ್ರಿಕೆ ಪ್ರಕಟಣೆಗೆ ತಿಳಿಸಿದ್ದಾರೆ. ತಾಲ್ಲೂಕಿನ ಅಂಜುಟಗಿ ಗ್ರಾಮದ ಕಿತ್ತೂರ್ ರಾಣಿ ಚನ್ನಮ್ಮ ವಸತಿ ಶಾಲೆಯು ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ಸಮಾಜ ಕಲ್ಯಾಣ ಇಲಾಖೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಂಯುಕ್ತ ಅಶ್ರಯದಲ್ಲಿ ನಡೆದ 2023-2024ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಹಮ್ಮಿಕೊಳ್ಳಲಾದ ಸನ್ಮಾನ ಸಮಾರಂಭದಲ್ಲಿ ಗಣತ ಶಿಕ್ಷಕ ಶ್ರೀ ಸೈಫನ್ ಮುಲ್ಕ ಬಿಂಗೊಳಗಿ ಅವರನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಭಾ ಪುರಸ್ಕಾರ ಪ್ರಶಸ್ತಿ ಪ್ರಧಾನ ಮಾಡಿ ಪ್ರೊಸ್ತಾಹಿಸಿದರು.



ಉದಯವಾಹಿನಿ ಚಿತ್ರ

**ಗಣಿತ ಶಿಕ್ಷಕ ಶ್ರೀ ಸೈಫನ್ ಮುಲ್ಕ ಬಿಂಗೊಳಗಿ ಅವರನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಭಾ ಪುರಸ್ಕಾರ ಪ್ರಶಸ್ತಿ ಪ್ರಧಾನ ಮಾಡಿ ಪ್ರೊಸ್ತಾಹಿಸಿದರು.**

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಸಚಿವ ಎಸ್ ಸಿ ಮಹದೇವಪ್ಪ ಹಾಗೂ ಶಾಸಕರು ಮತ್ತು ಇಲಾಖೆಯ ಅಧಿಕಾರಿಗಳು ಉಸ್ಥಿತರಿದ್ದರು. ಪ್ರಾಂಶುಪಾಲರು ಸಿ ಸಿ ಸೇಠ್, ಹಾಗೂ ಎಲ್ಲಾ ಭೋದಕ ಬೋದಕೇತರ ಸಿಬ್ಬಂದಿ ವರ್ಗದವರು ಸಾಧನೆಗೈದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕ ಸೈಫನ್ ಮುಲ್ಕ ಬಿಂಗೊಳಗಿ ಅವರನ್ನು ಶುಭ ಹಾರೈಸಿದರು.

# ದಲಿತ ಸೇನೆಯ ಸಂಘಟನೆ ಬಲಪಡಿಸಲು ಸಭೆ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಚಂದಾಪೂರದ ಪ್ರವಾಸಿ ಮಂದಿರದಲ್ಲಿ ದಲಿತ ಸೇನೆ ತಾಲ್ಲೂಕು ಘಟಕದ ವತಿಯಿಂದ ದಲಿತ ಸೇನೆ ರಾಜ್ಯಾಧ್ಯಕ್ಷರಾದ ಹಣಮಂತ ಯಳಸಂಗಿರವರ ಆದೇಶದ ಮೇರೆಗೆ ಜಿಲ್ಲಾಧ್ಯಕ್ಷ ಮಜುನಾಥ ಭಂಡಾರಿಯವರ ಮಾರ್ಗದರ್ಶನದಲ್ಲಿ ಸಾಮಾನ್ಯ ಸಭೆ ಹಮ್ಮಿಕೊಂಡು ಸಂಘಟನೆಯನ್ನು ತಾಲ್ಲೂಕಿನಾದ್ಯಂತ ಬಲಪಡಿಸುವ ನಿಟ್ಟಿನಲ್ಲಿ ಸಭೆಯಲ್ಲಿ ಚರ್ಚೆ ಮಾಡಲಾಯಿತು ಎಂದು ದಲಿತ ಸೇನೆಯ ತಾಲ್ಲೂಕಾಧ್ಯಕ್ಷ ರಾಘವೇಂದ್ರ ಹೂವಿನಭಾವಿ ತಿಳಿಸಿದರು.

ಈ ಸಂದರ್ಭದಲ್ಲಿ ಯುವ ಘಟಕದ ಅಧ್ಯಕ್ಷ ಚೇತನ್ ನಿರಾಳಕರ್, ಸುನೀಲ ತ್ರಿಪಾಟಿ, ಶ್ರೀಕಾಂತ್ ಮೇತ್ರಿ, ಬಲವಂತ ಚೆನ್ನೂರ, ರಮೇಶ ಕುಡಳ್ಳಿ, ರಘು ಕೊಡಂಬಲ್, ಜಗನ್ನಾಥ ನರನಾಳ, ಬಸವರಾಜ, ಖಾತಲಪ್ಪ, ಅಭಿಜೀತ ಕೊರವಿ, ಭಾಗ್ಯವಂತ ಕನಕಪೂರ, ನಂದೂಕುಮಾರ ಬಿರಾದಾರ, ಖತಲಪ್ಪ ಬಸವನೋರ, ಸಾಗರ ಆನಂದಿ, ಸೇರಿದಂತೆ ಅನೇಕರಿದ್ದರು.



ಉದಯವಾಹಿನಿ ಚಿತ್ರ

**ದಲಿತರ ಹಿಂದುಳಿದ ಅಲ್ಪಸಂಖ್ಯಾತರ ಮತ್ತು ಬಡವರ,ರೈತರ ಮತ್ತು ಕ್ಷೇತ್ರದ ಜಲ್ವಂತ ಸಮಸ್ಯೆಗಳು ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ದಿನನಿತ್ಯ ಆಗುವ ಬಸ್ಸಿನ ತೊಂದರೆ ಶಿಕ್ಷಣದ ಸಮಸ್ಯೆ ಕುರಿತು ದಲಿತ ಸೇನೆ ಧ್ವನಿ ಎತ್ತಲು ಹಾಗೂ ಪ್ರತಿಭಟನೆ ನಡೆಸಿ ಸಂಬಂಧಿಸಿದ ಇಲಾಖೆಗೆ ಏಚ್ಚೇತ್ತುಕೊಳ್ಳುವಂತೆ ಮಾಡುವ ಕೆಲಸ ದಲಿತ ಸೇನೆ ಮಾಡಬೇಕಾಗಿದೆ**

**– ರಾಘವೇಂದ್ರ ಹೂವಿನಭಾವಿ**

# ಪೋಲಿಸ್ ಲಾಂಛನಕ್ಕೆ ಅಗೌರವ ತೋರಿದ ಆಂಗ್ಲ ಮಾಧ್ಯಮ ಶಾಲೆ

• ಉದಯವಾಹಿನಿ, ಸಿಂಧನೂರು

ತಾಲ್ಲೂಕಿನಲ್ಲಿ ಇತ್ತೀಚಿಗೆ ದಿನಮಾನಗಳಲ್ಲಿ ಸರ್ಕಾರದ ಅಧಿಕಾರಿಗಳ ವೈಫಲ್ಯದಿಂದ ಇವತ್ತು ದಿನ ನಗರದ ಗಾಂಧಿ ವೃತ್ತದಲ್ಲಿ ಮತ್ತು ವಿಶೇಷ ಪೋಲಿಸರ ಸಂಚಾರಿ ಸ್ಥಳದಲ್ಲಿ ಏನಾದರೂ ತಪ್ಪುಗಳು ನಡೆದಿರುತ್ತೇವೆ ಎಂದರೆ ಅದಕ್ಕೆ ಕಾರಣ ಅಧಿಕಾರಿಗಳು ನಿರ್ಲಕ್ಷ್ಯ ಅಲ್ಲಿ ಸಿಸಿ ಕ್ಯಾಮೆರಾಗಳ ಇದ್ದರೂ ಇಲ್ಲದಂತೆಯಾಗಿದ್ದು. ಅದಕ್ಕೆ ಇಂತಹಾ ಅನಾಹುತ ಘಟನೆಗಳು ನಡೆಯುವುದಕ್ಕೆ ಮೂಲ ಕಾರಣವೇ ತಾಲ್ಲೂಕಿನ ಅರಗಿನ ಮರ ಕ್ಯಾಂಪಿನಲ್ಲಿ ಬರುವ ವೆಂಕಟೇಶ್ವರ ಆಂಗ್ಲ ಮಾಧ್ಯಮ ಖಾಸಗಿ ಶಾಲೆಯೊಂದು ಜಾಹಿರಾತು ಪೋಸ್ಟರನ್ನು ಪೊಲೀಸ್ ಇಲಾಖೆ ಲಾಂಛನಕ್ಕೆ ಹಂಟ್ಟಿಸಿ ಅಗೌರವ ತೋರಿಸಿದ್ದು.

ಒಂದು ಕಡೆಯಾದರೆ ಅಲ್ಲಿ ಅಧಿಕಾರಿಗಳು ಇದ್ದರೂ ಇಲ್ಲದಂತಾಗಿದ್ದು ಮತ್ತೊಂದು ಕಡೆ, ಆದರೆ ಇಲ್ಲಿಯ ಪೊಲೀಸ್ ಇಲಾಖೆ ಮೇಲಾಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಯ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳುತ್ತಾರೆ. ಕಾದು ನೋಡಬೇಕಾಗಿದೆ...? ಎಂದು ರೈತ ಮುಖಂಡ ಬಸವರಾಜ ಗುಡಿಹಾಳ ಅಭಿಪ್ರಾಯ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

ಸರ್ಕಾರಿ ಜಾಗ ಮತ್ತು ಲಾಂಛನಗಳು ಮೇಲೆ ಯಾವುದೇ ರೀತಿಯ ಪೊಸ್ಟರ್ ಗಳನ್ನು ಹಂಟಿಸಬಾರದು ಸರ್ಕಾರದ ನಿಯಮಗಳನ್ನು ಇದ್ದರೂ. ಖಾಸಗಿ ಶಾಲಾ ಆಡಳಿತ ಮಂಡಳಿಯವರು ಆ ನಿಯಮಗಳನ್ನು ಗಾಳಿಗೆ ತೂರಿ ಯಾವ ಅಧಿಕಾರಿಗಳು ಲೆಕ್ಕಿಸದೇ ರಾಜಾರೋಷವಾಗಿ ಪೊಸ್ಟರ್ ಹಂಟಿಸಿ ತಮ್ಮ ತಾಕತ್ತು ತೋರಿಸಿದ್ದುಂಟು. ಇದೇ ಸ್ಥಳದಲ್ಲಿ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಟ್ರಾಫಿಕ್ ಪೊಲೀಸ್ ಇಲಾಖೆ ಅಧಿಕಾರಿಗಳು ಅ ಕಡೆಗೆ ಗಮನ ಗಮನಹರಿಸಿದೇ ಇರುವುದಕ್ಕೆ ಕಾರಣ ವೇನು ಎಂಬ ಪ್ರಶ್ನೆ.....? ಸಾರ್ವಜನಿಕರಲ್ಲಿ ಮೂಡಿದೆ. ಇದಕ್ಕೆ ಕಾರಣ ಪೊಲೀಸ್ ಇಲಾಖೆ ಅಧಿಕಾರಿಗಳು ನಿರ್ಲಕ್ಷವೇ ಎಂಬ ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ.

**ವೆಂಕಟೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಪ್ರಸ್ತುತ ಶೈಕ್ಷಣಿಕ ವರ್ಷ 2024- 25 ನೇ ಸಾಲಿನ ಪ್ರವೇಶಗಳು ಪ್ರಾರಂಭ ಎಂಬ ಜಾಹೀರಾತು ಇರುವ ಪೋಸ್ಟ್ ರನ್ನು ಹುಟ್ಟಿಸಿದ್ದು ನೋಡಿದರೆ ಇದುವರೆಗೂ ಇಲಾಖೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ ಯಾಕೆ ಎಂದು ಸಾರ್ವಜನಿಕರು ಪ್ರಶ್ನೆ...? .**

# ವಾಹನ ಸವಾರರ ಪರದಾಟ ಗಮನಿಸಿ ರಸ್ತೆಯಲ್ಲೇ ಕುಳಿತು ಹೋರಾಟ

• ಉದಯವಾಹಿನಿ, ಬೆಳ್ತಂಗಡಿ

ರಾಷ್ಟ್ರೀಯ ಹೆದ್ದಾರಿ 73ರ ಪುಂಜಾಲಕಟ್ಟೆ-ಚಾರ್ಮಾಡಿ ರಸ್ತೆ ಅಗಲೀಕರಣ ಕಾಮಗಾರಿ ಜನರನ್ನು ಮೃತ್ಯುಕೂಪಕ್ಕೆ ತಳ್ಳುತ್ತಿದೆ. ವಾಹನ ಸವಾರರು ರಸ್ತೆಯಲ್ಲಿ ಬೀಳುತ್ತಿರುವುದನ್ನು ಗಮನಿಸಿ ಉಜಿರೆಯ ಹೋಟೆಲ್ ಮಾಲಕರೋರ್ವರು ಏಕಾಂಕಿಯಾಗಿ ರಸ್ತೆ ಮಧ್ಯೆ ಕುಳಿತು ಹೋರಾಟ ನಡೆಸಿದ್ದಾರೆ.



ಉದಯವಾಹಿನಿ ಚಿತ್ರ

**ಉಜಿರೆಯಲ್ಲಿ ರವಿವಾರ ಹೆದ್ದಾರಿ ಕೆಸರುಮಯ**

ಉಜಿರೆಯಿಂದ ಮುಂಡಾಜೆ ಸಾಗುವ ರಸ್ತೆ, ಬೆಳ್ತಂಗಡಿಯಿಂದ ಮುಂದಕ್ಕೆ ಕಾಶಿಬೆಟ್ಟು ಸಮೀಪ, ಮಡಂತ್ಯಾರಿಂದ ಮುಂದಕ್ಕೆ ಬರುವ ರಸ್ತೆಯಲ್ಲಿ ದ್ವಿಚಕ್ರ ವಾಹನ ಸವಾ ರರು ಸ್ವಲ್ಪ ಏರುಪೇರಾದರೂ ಬಿದ್ದು ಅನಾಹುತ ಸಂಭವಿಸುತ್ತಿದೆ. ಉಳಿದಂತೆ ಇತರ ವಾಹನ ಸವಾರರು ಈ ರಸ್ತೆಯ ಸಹವಾಸ ಬೇಡ ಎನ್ನುವಂತಾಗಿದೆ. ಉಜಿರೆಯಲ್ಲಿ ರವಿವಾರ ಹೆದ್ದಾರಿ ಕೆಸರುಮಯವಾದ ಪರಿಣಾಮ ಎರಡು ಮೂರು ದ್ವಿಚಕ್ರ ಸವಾರರು ಅಪಾಘಾತಕ್ಕೀಡಾಗಿದ್ದಾರೆ.

ಕಳೆದ ವಾರ ದ.ಕ.ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಬಿಸಿರೋಡ್ ಬಿಂದ ಚಾರ್ಮಾಡಿ ವರೆಗೆ ರಸ್ತೆ ಸಮಸ್ಯೆ ಕುರಿತು ಪರಿಶೀಲಿಸಿ ಸಂಬಂಧಪಟ್ಟ ಗುತ್ತಿಗೆದಾರರಿಗೆ ವಾರದೊಳಗೆ ಸಮಸ್ಯೆ ಬಗೆಹರಿಸಲು ಸೂಚಿಸಿದ್ದಾರೆ. ಆದರೆ ಬೇಕಾಬಿಟ್ಟಿ ಕಾಮಗಾರಿಯಿಂದ ಜಿಲ್ಲಾಧಿಕಾರಿಗಳ ಆಜ್ಞೆಗೂ ಕವಡೆ ಕಿಮ್ಮತ್ತಿಲ್ಲ ಎಂಬಂತಾಗಿದೆ.

ಇದು ಯಾವುದೂ ಇಲ್ಲದೆ, ಮಳೆಗಾಲದಲ್ಲಿ ಚರಂಡಿ ನೀರು ರಸ್ತೆಯಲ್ಲಿ ನಿಲ್ಲುವುದರಿಂದ ದ್ವಿಚಕ್ರ ಸಹಿತ ತ್ರಿಚಕ್ರ, ಕಾರು ಚಾಲಕರಿಗೆ ಆಪತ್ತು ಎದುರಾಗಿದೆ. ತಕ್ಷಣ ಸೂಕ್ತ ಕ್ರಮ ವಹಿಸಬೇಕು. ಇಲ್ಲವೇ ನಿರಂತರ ಹೋರಾಟ ನಡೆಸುವುದಾಗಿ ಉಜಿರೆ ಹೋಟೆಲ್ ಮಾಲೀಕ ಪ್ರವೀಣ್ ಹಳ್ಳಿಮನೆ ಪ್ರತಿಭಟನೆ ನಡೆಸಿ ಆಗ್ರಹಿಸಿದ್ದಾರೆ.

**ಎರಡು ದಿನಗಳ ಹಿಂದೆ ಕಾಶಿಬೆಟ್ಟು ಹಾಗೂ ಇತರೆಡೆ ಕೆಸರುಮಯ ರಸ್ತೆಯಿಂದ ನೀರು ನಿಂತು ರಸ್ತೆಯಲ್ಲಿ ಎಲ್ಲಿ ಸಂಚರಿಸಬೇಕೆಂಬ ಹೊಂದಲದಲ್ಲಿ ವಾಹನ ಸವಾರರು ಪರದಾಡುವ ಪರಿಸ್ಥಿತಿ ಎದುರಾಗಿತ್ತು. ಪರಿಣಾಮ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಮಳೆಗಾಲದ ಮುನ್ನ ಗುತ್ತಿಗೆದಾರರು, ಕಾಮಗಾರಿ ಪೂರ್ಣಗೊಳಿಸಬೇಕಿತ್ತು. ಇಲ್ಲವೇ ತಾರ್ಕಾಲಿಕ ಡಾಮರೀಕರಣವಾದರೂ ಮಾಡಬೇಕಿತ್ತು.**

# ಆಕಾಶ್ ಕೊಲೆಯ ಸತ್ಯಾಸತ್ಯತೆ ಪೊಲೀಸರು ಹೊರತರಲಿ

• ಉದಯವಾಹಿನಿ, ಹುಬ್ಬಳ್ಳಿ



ಆಟೋ ರಿಕ್ಷಾ ಸಂಘದ ಅಧ್ಯಕ್ಷನ ಮಗನ ಕೊಲೆ ನಿನ್ನೆ ನಡೆದಿದೆ. ಆದರೆ ಪೊಲೀಸರು ಕೊಲೆಯ ಬಗ್ಗೆ ಇನ್ನೂ ಸ್ಪಷ್ಟತೆ ಪಡಿಸಿಲ್ಲ. ಆದರೆ ಶೇಖರಯ್ಯ ಮಠಪತಿ ತನ್ನ ಮಗನ ಕೊಲೆಯಾಗಿದೆ ಎಂದು ದೂರು ನೀಡಿದ್ದಾರೆ. ಈ ಕುರಿತ ಸತ್ಯಾಸತ್ಯೆಯನ್ನು ಪೊಲೀಸರು ಹೊರತರಬೇಕು ಎಂದು ಶಾಸಕ ಮಹೇಶ ಟೆಂಗಿನಕಾಯಿ ಹೇಳಿದರು. ಕಿಮ್ಸ್ ಶವಾಗಾರಕ್ಕೆ ಭೇಟಿ ಕೊಟ್ಟ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಈಗಾಗಲೇ ಪೊಲೀಸರ ಜೊತೆಗೆ ಮಾತನಾಡಿದಾಗ ತಲೆ ಭಾಗಕ್ಕೆ ಗಾಯವಾಗಿದೆ ಎಂದು ಹೇಳಿದ್ದಾರೆ. ಮರಣೋತ್ತರ ಪರೀಕ್ಷೆಯ ವರದಿ ಬಂದ ಬಳಿಕ ನಿಜಾಂಶ ಹೊರಬರಲಿದೆ.

ಕೊಲೆ ಆಗಿದ್ದರೆ ಪೊಲೀಸ್ ಇಲಾಖೆ ಸಂಪೂರ್ಣ ತನಿಖೆ ಮಾಡಬೇಕು. ಇದರಲ್ಲಿ ಯಾರು ಭಾಗಿಯಾಗಿದ್ದಾರೆ ಅವರೆಲ್ಲರನ್ನು ಬಂಧಿಸಬೇಕು. ಈ ರೀತಿಯ ಘಟನೆಗಳು ನಡೆಯಬಾರದು ಎಂದರು. ಹುಬ್ಬಳ್ಳಿ-ಧಾರವಾಡದಲ್ಲಿ ಇಂತಹ ಘಟನೆಗಳು ಮೇಲಿಂದ ಮೇಲೆ ಮರುಕಳಿಸುತ್ತಿವೆ. ಕಾನೂನು ಸುವ್ಯವಸ್ಥೆ ತಹಬದಿಗೆ ತರುವ ಕಾರ್ಯ ಪೊಲೀಸರು ಮಾಡಬೇಕು. ಅವಳಿ ನಗರದಲ್ಲಿ ಮಾದಕವಸ್ತು ಹಾವಳಿ ಹೆಚ್ಚಾಗಿದೆ. ಇದನ್ನು ತಡೆಗಟ್ಟಬೇಕೆಂದು ನಾವು ಎರಡು ತಿಂಗಳ ಹಿಂದೆಯೇ ಅಭಿಯಾನ ಆರಂಭಿಸಿದ್ದೇವೆ ಎಂದರು.

ಆಕಾಶ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಕಿಮ್ಸ್‌ನ ಶವಾಗಾರ ಮುಂಭಾಗ ಆಟೋರಿಕ್ಷಾ ಚಾಲಕರ ಸಂಘದವರು ಪ್ರತಿಭಟನೆ ನಡೆಸಲು ಮುಂದಾದರು. ಆಕಾಶನ ಸಾವಿಗೆ ನ್ಯಾಯ ಕೊಡಿಸುವಂತೆ ಶವಾಗಾರದ ಮುಂದೆ ಜಮಾಯಿಸಿದ ನೂರಾರು ಆಟೋ ಚಾಲಕರು ಘೋಷಣೆ ಕೂಗಿದರು.

ಈ ವೇಳೆ ಪ್ರತಿಭಟನೆ ಕೈಬಿಡುವಂತೆ ಪ್ರತಿಭಟನಾಕಾರರಿಗೆ ಪೊಲೀಸರು ಮನವಿ ಮಾಡಿದರು. ಆಗ ನ್ಯಾಯ ದೊರಕಿಸಿಕೊಡಿ ಎಂದು ಆಟೋರಿಕ್ಷಾ ಚಾಲಕರ ಸಂಘದ ಜಿಲ್ಲಾಧ್ಯಕ್ಷ ಹನಮಂತಪ್ಪ ಪವಾಡಿ ಪೊಲೀಸ್ ಇನ್ಸಪೆಕ್ಟರ್ ಕಾಲಿಗೆ ಬಿದ್ದು ಅಂಗಲಾಚಿದರು.

ಘಟನೆ ನಡೆದಿರುವ ಸುದ್ದಿ ತಿಳಿದ ತಕ್ಷಣವೇ ಪ್ರಕರಣ ದಾಖಲಿಸಿಕೊಂಡು ಕುಟುಂಬಸ್ಥರು ನೀಡಿದ ದೂರಿನ ಮೇರೆಗೆ ಶಂಕಿತರನ್ನು ವಶಕ್ಕೆ ಪಡೆದು ವಿಚಾರಣೆ ಮಾಡಲಾಗುತ್ತಿದೆ. ನಮ್ಮ ಮೇಲೆ ಭರವಸೆ ಇಡಿ. ಅವನು ನಮ್ಮ ಮಗನಿದ್ದಂತೆ.

ಸಾವಿಗೆ ಸೂಕ್ತ ನ್ಯಾಯ ಕೊಡಿಸುವುದಾಗಿ ಎಸಿಪಿಗಳಾದ ವಿನೋದ ಮುಕ್ತೆದಾರ ಮತ್ತು ಶಿವಪ್ರಕಾಶ ನಾಯ್ಕ ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಹಿಂಪಡೆದುಕೊಂಡರು.

# ಸಿದ್ಧವಾಗುತ್ತಿದೆ ತೇಲುವ ಜೆಟ್ಟಿ ದೇಶದಲ್ಲೇ ನಿರೀಕ್ಷಿತ ಯೋಜನೆ

## • ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ಕೆಎಫ್‌ಡಿಸಿ)ವು ಅನುಷ್ಠಾನದ ಹೊಣೆ ಹೊತ್ತಿದೆ

• ಉದಯವಾಹಿನಿ, ಮಂಗಳೂರು

ಮೀನುಗಾರಿಕೆಗಾಗಿ ತೇಲುವ ಜೆಟ್ಟಿಯು ದೇಶದಲ್ಲೇ ಮೊದಲ ಬಾರಿಗೆ ಮಂಗಳೂರಿನಲ್ಲಿ ನಿರ್ಮಿಸಲಾಗುತ್ತಿದೆ. ಮೀನುಗಾರಿಕೆ ಇಲಾಖೆ ವತಿಯಿಂದ ಮಂಗಳೂರಿನ ಮೂರನೇ ಹಂತದ ಮೀನುಗಾರಿಕೆ ಜೆಟ್ಟಿ ಇರುವ ಹೊ ಗೆ ಬಜಾರ್ ಭಾಗದಲ್ಲಿ ಕಾಮಗಾರಿ ಪ್ರಾರಂಭವಾಗಿದ್ದು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ಕೆಎಫ್‌ಡಿಸಿ)ವು ಅನುಷ್ಠಾನ ದ ಹೊಣೆ ಹೊತ್ತಿದೆ. ಉಡುಪಿಯ ಮಲ್ಪೆಯಲ್ಲೂ ಇಂಥದ್ದೇ ಜೆಟ್ಟಿ ನಿರ್ಮಿಸುವ ಉದ್ದೇಶವಿದೆ.

ಈಗಾಗಲೇ ಮಂಗಳೂರಿನಲ್ಲಿ ಒಂದು ಕಾಂಕ್ರೀಟ್ ಫಾಂಟೂನ್ಸ್ ನಿರ್ಮಿಸಿ ನಿಲುಗಡೆ (ಆಯಂಕರ್) ಮಾಡಲಾಗಿದೆ. ಇನ್ನೆರಡು ಫಾಂಟೂನ್ಸ್ ಆಗಬೇಕಿದ್ದು, ಜೆಟ್ಟಿಯು ನೀರಿನ ಮಧ್ಯಭಾಗದಲ್ಲಿರುತ್ತದೆ. ಅಲ್ಲಿಂದ ನದಿ ದಡಕ್ಕೆ ಅಗಲದ ರಸ್ತೆ ಸ್ವರೂಪದ ಸಂಪರ್ಕ (ರೋಪ್) ಕಲ್ಪಿಸಲಾಗುತ್ತದೆ. ಇದರ ಮೂಲಕ ಜೆಟ್ಟಿಗೆ ಸಣ್ಣ ಗಾತ್ರದ ವಾಹನಗಳ ಸಂಚಾರಕ್ಕೂ ಅವಕಾಶವಾಗಲಿದೆ. ಸಣ್ಣ ದೋಣಿಗಳಲ್ಲಿ ತಂದ ಮೀನನ್ನು ಈ ಜೆಟ್ಟಿಯಲ್ಲಿ ಇಳಿಸಿ ಅದನ್ನು ವಾಹನದ ಮೂಲಕ ದಡಕ್ಕೆ ತರಬಹುದು. ರೋಪ್‌ನ ಇಕ್ಕೆಲಗಳಲ್ಲಿ ದೋಣಿ ನಿಲ್ಲಿಸಬಹುದು.



ಉದಯವಾಹಿನಿ ಚಿತ್ರ

ಇಂಥದ್ದೇ ಜೆಟ್ಟಿ ನಿರ್ಮಿಸುವ ಉದ್ದೇಶ

ಸದ್ಯ ನಾಡದೋಣಿಗಳು ಬೆಂಗ್ರೆಯಲ್ಲಿ ನಿಲ್ಲುತ್ತದೆ. ಆದರೆ ಮೀನು ಇಳಿಸಲು ಅವರು ಮಂಗಳೂರಿನ ಮೀನುಗಾರಿಕೆ ಬಂದರಿಗೆ ಆಗಮಿಸಿ ಯಾಂತ್ರೀಕೃತ ಬೋಟ್‌ಗಳ ಹಿಂಬದಿಯಲ್ಲಿ ನಿಂತು ಅಲ್ಲಿಂದ ಇತರ ಬೋಟ್‌ಗಳಿಗೆ ಹತ್ತಿ ಸಾಹಸಕರ ರೀತಿಯಲ್ಲಿ ಮೀನನ್ನು ದಕ್ಕೆಗೆ ತರಬೇಕಿದೆ. ತೇಲುವ ಜೆಟ್ಟಿ ಈ ಸಮಸ್ಯೆಗೆ ಪೂರ್ಣವಿರಾಮ ಹಾಕಲಿದೆ.

**ತೇಲುವ ಜೆಟ್ಟಿ ವಿಶೇಷತೆ**

- **ಜೆಟ್ಟಿಗಾಗಿ ನಿರ್ಮಿಸಿದ ಫಾಂಟೂನ್ಸ್‌ನ ಹೊರಭಾಗ ಕಾಂಕ್ರೀಟ್ ಸ್ವರೂಪದಲ್ಲಿದೆ.**
- **ಫಾಂಟೂನ್ಸ್ ಒಳಗೆ ಇಪಿಎಸ್ (ಎಕ್ಸ್‌ಪಾಂಡೆಡ್ ಪಾಲಿಸ್ಟೈನರ್) ಬಳಕೆ.**
- **ಪ್ರತಿ ಫಾಂಟೂನ್ಸ್ 20 ಮೀ. ಉದ್ದ ಇರ ಲಿದ್ದು, 3 ಫಾಂಟೂನ್ಸ್ ಸೇರಿ 60 ಮೀ. ಉದ್ದ ಹಾಗೂ 6 ಮೀ. ಅಗಲ ಇರಲಿದೆ.**
- **30 ನಾಡದೋಣಿಗಳಿಗೆ ಅವಕಾಶ.**
- **ಒಂದು ಫಾಂಟೂನ್ಸ್ ಸುಮಾರು 180 ಟನ್ ತೂಕ**
- **360 ಟನ್ ಭಾರವನ್ನು ಸುಲಭವಾಗಿ ಹೊರುವ ಸಾಮರ್ಥ್ಯ ಇದಕ್ಕಿದೆ.**

**‘ಮೀನುಗಾರಿಕೆ ಬಂದರನ್ನು ಸ್ಮಾರ್ಟ್ ಸಿಟಿ ಸ್ವರೂಪದಲ್ಲಿ ಅಭಿವೃದ್ಧಿಪಡಿಸಿ ನಾಡದೋಣಿಗಳಿಗೆ ಅನುಕೂಲ ಕಲ್ಪಿಸಲು ಮೊದಲ ತೇಲುವ ಜೆಟ್ಟಿ ನಿರ್ಮಿಸಲಾಗುತ್ತಿದೆ. ಈ ಮೂಲಕ ಮೀನುಗಾರಿಕೆ ಕ್ಷೇತ್ರದಲ್ಲಿ ಹೊಸ ಬದಲಾವಣೆ ಕಾಣಲಾಗುತ್ತಿದೆ’**

**–ಡಿ. ವೇದವ್ಯಾಸ ಕಾಮತ್, ಶಾಸಕ**

ಹೊಸ ಜೆಟ್ಟಿಗೆ ಭೂಮಿಯ ಅಗತ್ಯ ಇದ್ದು, ಭೂಸ್ವಾಧೀನ/ಜಾಗದ ಸಮಸ್ಯೆ ಇದೆ. ಆದರೆ ನೀರಿನಲ್ಲೇ ಜೆಟ್ಟಿ ನಿರ್ಮಿಸಲು ಈ ಸಮಸ್ಯೆ ಇಲ್ಲ. ಹೊಸ ಜೆಟ್ಟಿಯಾದರೆ ನಾಡದೋಣಿ, ಸಾಂಪ್ರದಾಯಿಕ ದೋಣಿಗಳ ನಿಲುಗಡೆಗೆ ಸ್ಥಳ ಸಿಗಲಿದೆ. ಪ್ರಸ್ತುತ ಇರುವ ಮೀನುಗಾರಿಕೆ ಜೆಟ್ಟಿಯಲ್ಲಿ ನೀರಿನ ಮಟ್ಟ ಏರಿಳಿತ ಆಗುವಾಗ ಬೋಟ್‌ಗಳೂ ಎತ್ತರ/ತಗ್ಗು ಆಗಿ ಮೀನು ಇಳಿಸಲು ಸಮಸ್ಯೆಯಾಗುತ್ತದೆ. ತೇಲುವ ಜೆಟ್ಟಿಯು ನೀರಿನ ಮಟ್ಟದಲ್ಲೇ ಇರುವ ಕಾರಣ ಈ ಸಮಸ್ಯೆ ಇರದು. ಮೀನು ತರುವ ಬೋಟ್‌ಗಳಿಗೆ ಕೆಲವೊಮ್ಮೆ ಮೀನು ಇಳಿಸಲು ದಕ್ಕೆಯಲ್ಲಿ ಸ್ಥಳ ಸಿಗದೇ ಕಾಯಬೇಕು. ದೊಡ್ಡ ಬೋಟ್‌ಗಳಲ್ಲಿ ಮಂಜುಗಡ್ಡೆ ಇರುವುದರಿಂದ ಮೀನು ಹಾಳಾಗದು. ಆದರೆ ನಾಡದೋಣಿ ಸಹಿತ ಸಣ್ಣ ಬೋಟ್‌ಗಳಿಗೆ ಮಂಜುಗಡ್ಡೆ ಇರದ್ದರಿಂದ ಬೇಗನೆ ಇಳಿಸಲು ಹೊಸ ಜೆಟ್ಟಿ ಸಹಾಯಕ. ಜತೆಗೆ ಅಗತ್ಯವಿದ್ದರೆ ತೇಲುವ ಜೆಟ್ಟಿಯನ್ನು ಬಿಚ್ಚಿಕೊಂಡು ಇನ್ನೊಂದು ಕಡೆಗೆ ಸಾಗಿಸಲು ಬಹುದು.

ಕಾಮಗಾರಿ ಆರಂಭ ಮೀನುಗಾರಿಕೆ ಬಂದರಿನ ಬೋಟ್ ದಟ್ಟಣೆಯನ್ನು ಕಡಿಮೆಗೊಳಿಸಲು, ನಾಡದೋಣಿಗಳ ಅನುಕೂಲಕ್ಕೆ ಮೊದಲ ಬಾರಿಗೆ ತೇಲುವ ಜೆಟ್ಟಿಯನ್ನು ಮಂಗಳೂ ರಿನಲ್ಲಿ ನಿರ್ಮಿಸಲಾಗುತ್ತಿದೆ. ಪ್ರಥಮ ಹಂತದ ಕಾಮಗಾರಿ ನಡೆಯುತ್ತಿದೆ. ಬಂದರಿನಲ್ಲಿ ಪ್ರಸ್ತುತ ಬೋಟುಗಳ ನಿಲುಗ ಡೆಗೆ ಸ್ಥಳವಿಲ್ಲ. ಸಾಂಪ್ರದಾಯಿಕ ನಾಡದೋಣಿಗಳಿಗೆ ಇದರಿಂದ ಹೆಚ್ಚು ಸಮಸ್ಯೆ. ಇದರ ನಿವಾರಣೆಗೆ ತೇಲುವ ಜೆಟ್ಟಿ ನಿರ್ಮಾಣವನ್ನು ‘‘ಪೈಲೆಟ್ ಪ್ರಾಜೆಕ್ಟ್’ ಆಗಿ ಕೈಗೊಳ್ಳಲು 2019-20ರ ಬಜೆಟ್‌ನಲ್ಲಿ ಪ್ರಸ್ತಾವಿಸಲಾಗಿತ್ತು.

## ಮಿನಿ ನ್ಯೂಸ್

### ಭರದಿಂದ ಸಾಗಿದ ಎಡೆಕುಂಟೆ ಹೊಡೆಯುವ ಕಾರ್ಯ

• ಉದಯವಾಹಿನಿ, ಚನ್ನಗಿರಿ

ಪಟ್ಟಣ ಸೇರಿ ತಾಲ್ಲೂಕಿನಾದ್ಯಂತ ಐದಾರು ದಿನಗಳಿಂದ ಮುಂಗಾರು ಹಂಗಾಮಿನ ಬೆಳೆಗಳ ಎಡೆಕುಂಟೆ ಹೊಡೆಯುವ ಕಾರ್ಯ ಭರದಿಂದ ಸಾಗಿದೆ. ಅನಿಶ್ಚಿತತೆಯ ಮುಂಗಾರಿನ ನಡುವೆಯೇ ಈಗಾಗಲೇ ಬಿತ್ತನೆ ಮಾಡಿ ಹದಿನೈದು, ಇಪ್ಪತ್ತು ದಿನಗಳಾಗಿರುವ ಬೆಳೆಗಳ ಎಡೆಕುಂಟೆ ಹೊಡೆಯುವ ಕಾರ್ಯದಲ್ಲಿ ರೈತರು ತೊಡಗಿದ್ದಾರೆ.

ಚನ್ನಗಿರಿ ಭಾಗದಲ್ಲಿ ನಾಲ್ಕೈದು ದಿನಗಳ ಹಿಂದೆ ಉತ್ತಮ ಮಳೆಯಾಗಿತ್ತು. ನಂತರ ಎರಡು ಬಾರಿ ಹಸಿ ಮಳೆಯಾಗಿದೆ. ಹೀಗಾಗಿ, ರೈತರು ಎಡೆಕುಂಟೆ ಹೊಡೆಯವ ಕಾರ್ಯಕ್ಕೆ ಮುಂದಾಗಿದ್ದಾರೆ.

ಬೆಳೆಗಳ ಮಧ್ಯೆ ಬೆಳೆದ ಕಳೆಗಳ ನಿರ್ಮೂಲನೆಗಾಗಿ ಎಡೆಕುಂಟೆ ಹೊಡೆಯುವುದು ಸಹಜ ಕ್ರಿಯೆಯಾಗಿದೆ. ತಾಲ್ಲೂಕಿನ ಸಂತೇಬೆನ್ನೂರು, ಬಸವಾಪಟ್ಟಣ ಹಾಗೂ ಕಸಬಾ ಹೋಬಳಿಗಳಲ್ಲಿ ಮಳೆಗಾಗಿ ರೈತರು ಮುಗಿಲು ನೋಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಭಾಗಗಳಲ್ಲಿ ವಾರದಿಂದ ಹಸಿ ಮಳೆಯಾಗಿಲ್ಲ. ತಾಲ್ಲೂಕಿನಲ್ಲಿ ಪ್ರಮುಖವಾಗಿ ಮೆಕ್ಕೆಜೋಳ, ರಾಗಿ, ಹತ್ತಿ, ಈರುಳ್ಳಿ, ಅವರೆ, ಅಲಸಂದೆ, ತೊಗರಿ, ಭತ್ತ, ತರಕಾರಿ ಮುಂತಾದ ಬೆಳೆಗಳನ್ನು ಬೆಳೆಯಲಾಗುತ್ತದೆ.

### ಮಳೆ ಬರುತ್ತಿಲ್ಲವೆಂದು ಹೂತಿದ್ದ ಶವಗಳನ್ನೇ ಹೊರ ತೆಗೆದ ಜನರು

• ಉದಯವಾಹಿನಿ, ಹಾವೇರಿ

ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭಗೊಂಡ ನಂತ್ರ, ಸರಿಯಾದ ಪ್ರಮಾಣದಲ್ಲಿ ಮಳೆಯಾಗುತ್ತಿಲ್ಲ. ಈ ಹಿನ್ನಲೆಯಲ್ಲಿ ಈ ಗ್ರಾಮದ ಜನರು ತಮ್ಮ ಊರಿನಲ್ಲಿ ಮಳೆ ಬರುತ್ತಿಲ್ಲ ಅನ್ನೋ ಕಾರಣಕ್ಕೆ ಹೂತಿದ್ದಂತ ಶವಗಳನ್ನೇ ಹೊರತೆಗೆದಿರುವಂತ ಶಾಕಿಂಗ್ ಸುದ್ದಿ ತಿಳಿದು ಬಂದಿದೆ. ಹಾವೇರಿ ಜಿಲ್ಲೆಯ ಹಲವೆಡೆ ಮುಂಗಾರು ಮಳೆ ಆರಂಭಗೊಂಡ ನಂತ್ರವೂ ಸಮರ್ಪಕವಾಗಿ ಮಳೆಯಾಗಿರಲಿಲ್ಲ. ಇದಕ್ಕೆ ಕಾರಣ ಚರ್ಮ ರೋಗ(ತೊನ್ನು) ಇದ್ದಂತ ವ್ಯಕ್ತಿಯನ್ನು ಹೂತು ಹಾಕಿದ್ದೇ ಕಾರಣ ಎಂಬುದಾಗಿ ಹೇಳಲಾಗುತ್ತಿದೆ.

ಮೂಡನಂಬಿಕೆಗೆ ಜೋತು ಬಿದ್ದಂತ ಜನರು ಮಳೆ ಬರದೇ ಇರೋದಕ್ಕೆ ತೊನ್ನು ಖಾಯಿಲೆಯ ವ್ಯಕ್ತಿಯನ್ನು ಹೂತು ಹಾಕಿರೋದೇ ಕಾರಣ. ಇದೇ ಕಾರಣದಿಂದ ಮಳೆಯಾಗುತ್ತಿಲ್ಲ ಅಂತ ಜನರು ಹೂತಿದ್ದಂತ ಶವಗಳನ್ನು ಹೊರ ತೆಗೆದಿದ್ದಾರೆ. ಆ ಬಳಿಕ ಸುಟ್ಟು ಹಾಕಿದ್ದಾರೆ.ಅಂದಹಾಗೇ ಈಗಾಗಲೇ ಚರ್ಮ ಖಾಯಿಲೆಯಿಂದ ಬಳಲಿ, ಸಾವನ್ನಪ್ಪಿದ್ದಂತ 8 ರಿಂದ 10 ಶವಗಳನ್ನು ಜನರು ಜಿಲ್ಲೆಯಲ್ಲಿ ಹೊರತೆಗೆದು, ಶವಗಳನ್ನು ಸುಟ್ಟು ಹಾಕಿದ್ದಾರೆ ಎಂಬುದಾಗಿ ಹೇಳಲಾಗುತ್ತಿದೆ. ಈ ಎಲ್ಲಾ ಫೋಟೋಗಳು ಈಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದಾವೆ.

### ಸಾಂತ್ವನ ಕೇಂದ್ರದ ಕಟ್ಟಡದಿಂದ ಹಾರಿ ಯುವತಿ ಆತ್ಮಹತ್ಯೆ

• ಉದಯವಾಹಿನಿ, ರಾಯಚೂರು

ಪೊಲೀಸ್ ಠಾಣೆಯಲ್ಲಿ ಒಪ್ಪಿ ಸಾಂತ್ವನ ಕೇಂದ್ರದಲ್ಲಿ ಯುವಕ ಮದುವೆಗೆ ನಿರಾಕರಿಸಿದ ಹಿನ್ನೆಲೆಯಲ್ಲಿ ಮನನೊಂದ ಯುವತಿ ಮಹಿಳಾ ಸಾಂತ್ವನ ಕೇಂದ್ರದ ಕಟ್ಟಡದ ಮೇಲಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾವಕ ಘಟನೆ ರಾಯಚೂರಿನ ದೇವರ ಕಾಲೋನಿಯಲ್ಲಿ ನಡೆದಿದೆ. ಪ್ರೀತಿ ನಿರಾಕರಿಸಿದ ಹಿನ್ನೆಲೆಯಲ್ಲಿ ಯುವತಿ ದುಡುಕಿನ ನಿರ್ಧಾರ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. 19 ವರ್ಷದ ಅನುರಾಧ ಆತ್ಮಹತ್ಯೆ ಮಾಡಿಕೊಂಡಿರುವ ಯುವತಿ. ಕಟ್ಟಡದ ಮೇ ಲಿಂದ ಹಾರಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಕಟ್ಟಡದ ಮೇಲಿಂದ ಹಾರಿದ್ದ ಪರಿಣಾಮ ಯುವತಿಯ ತಲೆಗೆ ಬಲವಾದ ಪೆಟ್ಟು ಬಿದ್ದಿತ್ತು. ಯುವತಿಯನ್ನು ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾಳೆ.

ಯುವತಿ ಅನುರಾಧ ವಿನಯ್ ರೆಡ್ಡಿ ಎಂಬಾತನನ್ನು ಪ್ರೀತಿಸಿದ್ದಳು. ಜೂನ್ 20ರಂದು ರಕ್ಷಣೆ ಕೋರಿ ಮಾರ್ಕೆಟ್ ಯಾರ್ಡ್ ಠಾಣೆಗೆ ಯುವಕ ಯುವತಿ ಹೋಗಿದ್ದರು. ಈ ವೇಳೆ ಪೊಲೀಸ್ ಠಾಣೆಯಲ್ಲಿ ಯುವಕ ಪ್ರೀತಿ ಒಪ್ಪಿಕೊಂಡಿದ್ದ. ಹಾಗಾಗಿ ಪೋಷಕರ ಜೊತೆ ಹೋಗಲ್ಲ ಎಂದು ಯುವತಿ ಪೊಲೀಸರಿಗೆ ಹೇಳಿದ್ದಳು. ಪೋಷಕರ ಜೊತೆ ಹೋಗಲು ನಿರಾಕರಿಸಿದ್ದಕ್ಕೆ ಪೊಲೀಸರು ಯುವತಿಯನ್ನು ಮಹಿಳಾ ಸಂತ್ವನ ಕೇಂದ್ರದಲ್ಲಿ ಇರಿಸಿದ್ದರು. ಬಳಿಕ ಸಾಂತ್ವನ ಕೇಂದ್ರಕ್ಕೆ ಬಂದ ಯುವಕ ವಿನಯ್ ರೆಡ್ಡಿ, ಯುವತಿಗೆ ಮದುವೆಯಾಗಲ್ಲ ಎಂದು ಹೇಳಿ ಹೋಗಿದ್ದಾನೆ. ಪ್ರಿಯತಮ ಕೈಕೊಟ್ಟಿದ್ದರಿಂದ ತೀವ್ರವಾಗಿ ಮನನೊಂದಿದ್ದ ಯುವತಿ ಮಹಿಳಾ ಸಾಂತ್ವನ ಕೇಂದ್ರದ ಮೊದಲ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಆರೋಪಿ ವಿನಯ್ ರೆಡ್ಡಿಗಾಗಿ ಪಶ್ಚಿಮ ಠಾಣೆ ಪೊಲೀಸರು ಹುಡುಕಾಟ ನಡೆಸಿದ್ದಾರೆ.

### ನ್ಯಾಯಾಲಯ ಸಂಕೀರ್ಣದ ಮುಂದೆ ಶೌಚಾಲಯಗಳ ತ್ಯಾಜ್ಯ

• ಉದಯವಾಹಿನಿ, ಕುಷ್ಟಗಿ

ಇಲ್ಲಿಯ ನ್ಯಾಯಾಲಯ ಸಂಕೀರ್ಣದ ಮುಂದೆಯೇ ಅಲ್ಲಿಯ ಶೌಚಾಲಯಗಳ ತ್ಯಾಜ್ಯ ಮಡುಗಟ್ಟಿದ್ದು ಅದರಿಂದ ವಕೀಲರು, ಸಿಬ್ಬಂದಿ, ಕಕ್ಷಿದಾರರು ನಿತ್ಯ ತೊಂದರೆ ಅನುಭವಿಸುತ್ತಿರುವುದು ಕಂಡುಬಂದಿದೆ. ವಕೀಲರ ಸಂಘ, ಉಪಾಹಾರ ಗೃಹದ ಮತ್ತು ನ್ಯಾಯಾಲಯಗಳ ಒಳಗೆ ಪ್ರ ವೇಶಿಸುವ ಎರಡನೇ ಮುಖ್ಯದ್ವಾರದ ಬಳಿ ಇಂಥ ಅಸಹನೀಯ ದೃಶ್ಯ ಕಣ್ಣಿಗೆ ರಾಚುತ್ತಿದೆ. ಅಷ್ಟೇ ಅಲ್ಲ ಸುತ್ತಲಿನ ವಾತಾವರಣ ಮಲಿನವಾಗಿದೆ. ಬರಲು, ಹೋಗಲು ಬೇರೆ ದಾರಿ ಇಲ್ಲದ ಕಾರಣ ವಕೀಲರು, ಸಾರ್ವಜನಿಕರು ಮತ್ತು ಕಕ್ಷಿದಾರರು ಶೌಚಾಲಯದ ಕೊಳಚೆ ತುಳಿಯುತ್ತ ಮೂಗು ಮುಚ್ಚಿಕೊಂಡೇ ಸಂಚರಿಸುವ ಅನಿವಾರ್ಯತೆ ಸೃಷ್ಟಿಯಾಗಿದೆ.

'ಈ ತ್ಯಾಜ್ಯ ಸಂಗ್ರವಾಗಿರುವ ಜಾಗದಲ್ಲಿಯೇ ನ್ಯಾಯಾಲಯ ಸಂಕೀರ್ಣದ ಉಪಾಹಾರ ಗೃಹ ಇದ್ದು ಚಹಾ, ಉಪಾಹಾರ, ಊಟಕ್ಕೆ ಅಲ್ಲಿಗೆ ಹೋಗುವುದನ್ನೇ ಬಿಟ್ಟಿದ್ದೇವೆ. ನ್ಯಾಯಾಲಯಕ್ಕೆ ಬರುವವರು ಈ ಹೊಲಸನ್ನು ಮೈಗೆ ಅಂಟಿಸಿಕೊಂಡೇ ಹೋಗುವಂತಾಗಿದೆ' ಎಂದು ವಕೀಲರು ಮತ್ತು ಸಿಬ್ಬಂದಿ ಅಳಲು ತೋಡಿಕೊಂಡರು. ಕೆಲ ವರ್ಷಗಳ ಹಿಂದಷ್ಟೇ ಈ ನ್ಯಾಯಾಲಯ ಸಂಕೀರ್ಣ ಉದ್ಘಾಟನೆಗೊಂಡಿದೆ.

ಕಟ್ಟಡ ನಿರ್ಮಾಣದ ವೇಳೆ ಶೌಚಾಲಯದ ತ್ಯಾಜ್ಯ ಹರಿದುಹೋಗುವುದಕ್ಕೆ ಸೂಕ್ತ ರೀತಿಯಲ್ಲಿ ಕಾಮಗಾರಿ ನಡೆಸಿಲ್ಲ. ಚೇಂಬರ್‌ಗಳು (ಬ್ಲಾಕ್) ಕಟ್ಟಿಕೊಂಡಿವೆ. ಅನೇಕ ಬಾರಿ ಹೊರಕ್ಕೆ ತೆಗೆದುಹಾಕಲಾಗುತ್ತಿದ್ದರೂ ಚೇಂಬರ್ ದುರಸ್ತಿಯಾಗದ ಕಾರಣ ತ್ಯಾಜ್ಯ ಉಕ್ಕಿ ನ್ಯಾಯಾಲಯದ ಮುಂದೆ ಸಂಗ್ರಹವಾಗುತ್ತಿದೆ. ಇದಕ್ಕೆ ಕಳಪೆ ಕಾಮಗಾರಿಯೇ ಕಾರಣ ಎಂದು ವಕೀಲರು ದೂರಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನೀವು ಕೆಲವು ಆಘಾತಗಳನ್ನು ಎದುರಿಸುವುದರಿಂದ ನೀವು ಬಹಳ ಧೈರ್ಯ ಹಾಗೂ ಶಕ್ತಿಯನ್ನು ಪ್ರದರ್ಶಿಸುವ ಅಗತ್ಯವಿದೆ. ನೀವು ನಿಮ್ಮ ಆಶಾವಾದಿ ನಿಲುವಿನಿಂದ ಇವುಗಳಿಂದ ಸುಲಭವಾಗಿ ಹೊರಬರಬಹುದು.

**ವೃಷಭ** ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡ ಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ.

**ಮಿಥುನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು.

**ಕರ್ಕಾಟಕ** ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗ ಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲಾ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

**ಸಿಂಹ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಕನ್ಯಾ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ತುಲಾ** ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು.

**ವೃಶ್ಚಿಕ** ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂ ದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು.

**ಧನಸ್ಸು** ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ. ಮೋಸದಿಂದ ನಿಮ್ಮನ್ನು ಕಾಪಾಡಿಕೊಳ್ಳಲು ವ್ಯವಹಾರದಲ್ಲಿ ಎಚ್ಚರದಿಂದಿರಿ.

**ಮಕರ** ಉದಾರತೆ ಸ್ವಲ್ಪ ಮಟ್ಟಿಗೆ ಒಳ್ಳೆಯದಾದರೂ ಅದು ಒಂದು ಮಿತಿ ದಾಟಿದರೆ ಸಮಸ್ಯೆಗಳನ್ನು ಸೃಷ್ಟಿಸಬಹುದೆಂದು ನೀವು ನೆನಪಿನಲ್ಲಿಟ್ಟುಕೊಳ್ಳಬೇಕು. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

**ಕುಂಭ** ಒಬ್ಬ ದೂರದ ಸಂಬಂಧಿಯಿಂದ ಅನಿರೀಕ್ಷಿತ ಸುದ್ದಿ ನಿಮ್ಮ ಇಡೀ ದಿನವನ್ನು ಉಜ್ವಲಗೊಳಿಸುತ್ತದೆ. ನಿಮ್ಮ ಸಂಗಾತಿಯ ಕುಟುಂಬದ ಸದಸ್ಯರ ಅಡ್ಡಿಯ ಕಾರಣದಿಂದ ನಿಮ್ಮ ದಿನ ಸ್ವಲ್ಪ ಏರುಪೇರಾಗಬಹುದು.

**ಮೀನ** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ. ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು.

# ಈಶ್ವರಪ್ಪ ಬಿಜೆಪಿಗೆ ವಾಪಸ್, ವರಿಷ್ಠರ ಹಸಿರು ನಿಶಾನೆ ಬಾಕಿ!

## ಪಕ್ಷ ವಿರೋಧಿ ಚಟುವಟಿಕೆ ಹಿನ್ನಲೆಯಲ್ಲಿ ಅವರನ್ನು ಪಕ್ಷದಿಂದ 6 ವರ್ಷಗಳ ಕಾಲ ಉಚ್ಚಾಟನೆ ಮಾಡಲಾಗಿತ್ತು

• ಉದಯವಾಹಿನಿ ಶಿವಮೊಗ್ಗ

ಮಾಜಿ ಸಚಿವ ಕೆ. ಎಸ್. ಈಶ್ವರಪ್ಪ ಬಿಜೆಪಿಗೆ ವಾಪಸ್ ಆಗಲಿದ್ದಾರೆ ಎಂಬ ಸುದ್ದಿ ಹಬ್ಬಿದೆ. 2024 ರ ಲೋಕಸಭೆ ಚುನಾವಣೆಯಲ್ಲಿ ಶಿವಮೊಗ್ಗ ಲೋಕ ಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದು ಈಶ್ವರಪ್ಪ ಠೇವಣಿ ಕಳೆದುಕೊಂಡು, ಸೋಲು ಕಂಡಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಶಿವಮೊಗ್ಗ ಕ್ಷೇತ್ರದಲ್ಲಿ ಬಿಜೆಪಿ ಅಧಿಕೃತ ಅಭ್ಯರ್ಥಿಯಾಗಿದ್ದ ಬಿ. ವೈ. ರಾಘವೇಂದ್ರ ವಿರುದ್ಧ ಕೆ. ಎಸ್. ಈಶ್ವರಪ್ಪ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದರು. ಅದ್ದರಿಂದ ಪಕ್ಷ ವಿರೋಧಿ ಚಟುವಟಿಕೆ ಹಿನ್ನಲೆಯಲ್ಲಿ ಅವರನ್ನು ಪಕ್ಷದಿಂದ 6 ವರ್ಷಗಳ ಕಾಲ ಉಚ್ಚಾಟನೆ ಮಾಡಲಾಗಿತ್ತು. ಬಿಜೆಪಿ ಎಂದರೆ ಈಶ್ವರಪ್ಪ, ಈಶ್ವರಪ್ಪ ಎಂದರೆ ಬಿಜೆಪಿ ಎಂದು ಸದಾ ಹೇಳುವ ಕೆ. ಎಸ್. ಈಶ್ವರಪ್ಪ ಪಕ್ಷಕ್ಕೆ ವಾಪಸ್ ಆಗುವ ತಯಾರಿ ಆರಂಭಿಸಿದ್ದಾರೆ. ಆರ್‌ಎಸ್‌ಎಸ್ ಮತ್ತು ಬಿಜೆಪಿಯ ಹಿರಿಯರ ಜೊತೆ ಈ ಕುರಿತು ಮಾತುಕತೆ ನಡೆಸಿದ್ದಾರೆ. ವರಿಷ್ಠರು ಹಸಿರು ನಿಶಾನೆ ತೋರಿಸಿದರೆ ಈಶ್ವರಪ್ಪ ಕೆಲವೇ ದಿನಗಳಲ್ಲಿ ಮತ್ತೆ ಬಿಜೆಪಿಗೆ ವಾಪಸ್ ಆಗಲಿದ್ದಾರೆ.

**ಈಗ ಈಶ್ವರಪ್ಪ ಬಿಜೆಪಿಗೆ ವಾಪಸ್ ಆಗಲು ಬಯಸಿದ್ದಾರೆ. ಆದರೆ ಯಡಿಯೂರಪ್ಪ ಬಣ ಈಶ್ವರಪ್ಪ ಪಕ್ಷಕ್ಕೆ ಮರಳುವುದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದೆ. ಯಡಿಯೂರಪ್ಪ, ವಿಜಯೇಂದ್ರ, ರಾಘವೇಂದ್ರ ವಿರುದ್ಧ ಹಲವಾರು ಟೀಕೆಗಳನ್ನು ಮಾಡಿದ ಅವರನ್ನು ಪಕ್ಷಕ್ಕೆ ವಾಪಸ್ ಕರೆಸಿಕೊಳ್ಳುವುದು ಬೇಡ ಎಂದು ಅಭಿಪ್ರಾಯ ವ್ಯಕ್ತಪಡಿಸಲಾಗಿದೆ.**

**ಲೋಕಸಭೆ ಚುನಾವಣೆ ಸೋಲು:** 2018ರ ವಿಧಾನಸಭೆ ಚುನಾವಣೆಯಲ್ಲಿ ಶಿವಮೊಗ್ಗ ನಗರ ಕ್ಷೇತ್ರದಲ್ಲಿ ಗೆಲುವು ಸಾಧಿಸಿದ್ದ ಈಶ್ವರಪ್ಪಗೆ 2023ರ ವಿಧಾನಸಭೆ ಚುನಾವಣೆಯಲ್ಲಿ ಪಕ್ಷದ ಟಿಕೆಟ್ ಕೈತಪ್ಪಿತ್ತು. ಈಶ್ವರಪ್ಪ ಆಪ್ತರಾಗಿದ್ದ ಎಸ್. ಎನ್. ಚನ್ನಬಸಪ್ಪ ಪಕ್ಷದ ಅಭ್ಯರ್ಥಿಯಾಗಿದ್ದು, ಗೆಲುವು ಸಾಧಿಸಿದ್ದಾರೆ. ಶಿವಮೊಗ್ಗದ ಟಿಕೆಟ್ ಕೈತಪ್ಪಿದ ಈಶ್ವರಪ್ಪ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಪುತ್ರ ಕೆ. ಈ. ಕಾಂತೇಶ್‌ಗೆ ಸಿಗುವ ನಿರೀಕ್ಷೆಯಲ್ಲಿದ್ದರು. ಆದರೆ ಟಿಕೆಟ್ ಕಾಂತೇಶ್ ಕೈ ತಪ್ಪಿತ್ತು. ಬಸವರಾಜ ಬೊಮ್ಮಾಯಿ ಹಾವೇರಿ ಅಭ್ಯರ್ಥಿಯಾಗಿ ಕಣಕ್ಕಿಳಿದು ಗೆದ್ದಿದ್ದಾರೆ. ಕಾಂತೇಶ್‌ಗೆ ಟಿಕೆಟ್ ಕೈ ತಪ್ಪಿದ ಬಳಿಕ ಅಸಮಾಧಾನಗೊಂಡ ಈಶ್ವರಪ್ಪ ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ, ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ. ವೈ. ವಿಜಯೇಂದ್ರ ವಿರುದ್ಧ ಟೀಕೆಗಳನ್ನು ಮಾಡಿದರು.



ಉದಯವಾಹಿನಿ ಚಿತ್ರ

**ಮನವೊಲಿಸಲು ಪ್ರಯತ್ನ**

**ಶಿವಮೊಗ್ಗದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದ ಕೆ. ಎಸ್. ಈಶ್ವರಪ್ಪರನ್ನು ಮನವೊಲಿಸಲು ಬಿಜೆಪಿ ಸಾಕಷ್ಟು ಪ್ರಯತ್ನ ನಡೆಸಿತು. ಕಾಂತೇಶ್‌ಗೆ ವಿಧಾನ ಪರಿಷತ್ ಸದಸ್ಯತ್ವದ ಭರವಸೆಯನ್ನು ನೀಡಿತು. ಕರ್ನಾಟಕ ಬಿಜೆಪಿ ಚುನಾವಣಾ ಉಸ್ತುವಾರಿ ಡಾ. ರಾಧಾ ಮೋಹನ್ ದಾಸ್ ಅಗರವಾಲ್ ಅವರು ಈಶ್ವರಪ್ಪ ನಿವಾಸಕ್ಕೆ ಮನವೊಲಿಕೆ ಮಾಡಲು ಆಗಮಿಸಿದ್ದರು.**

ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಘೋಷಣೆ ಮಾಡಿದರು. ನರೇಂದ್ರ ಮೋದಿ ಪ್ರಧಾನಿಯಾಗಲು ನನ್ನ ಬೆಂಬಲ ಎಂದು ಘೋಷಿಸಿ, 'ರಾಷ್ಟ್ರ ಭಕ್ತರ ಬಳಗ' ಎಂದು ಚುನಾವಣೆಗೆ ನಾಮಪತ್ರ ಸಲ್ಲಿಕೆ ಮಾಡಿದರು. ಯಾವ ನಾಯಕರ ಮನವೊಲಿಕೆಗೂ ಬಗ್ಗದ ಅವರು ಕಣದಲ್ಲಿ ಉಳಿದರು.

**ಯಡಿಯೂರಪ್ಪ ಬಣ ಪಕ್ಷಕ್ಕೆ ಮರಳುವುದಕ್ಕೆ ತೀವ್ರ ವಿರೋಧ**

ಅದ್ದರಿಂದ ಪಕ್ಷ ವಿರೋಧಿ ಚಟುವಟಿಕೆ ಆರೋಪದ ಮೇಲೆ ಬಿಜೆಪಿ ಈಶ್ವರಪ್ಪನ್ನು 6 ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟನೆ ಮಾಡಿತು. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ 7,78,721 ಮತಗಳನ್ನು ಪಡೆದು ಜಯಗಳಿಸಿದರು. ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ್ 5,35,006 ಮತಗಳನ್ನು ಪಡೆದು 2ನೇ ಸ್ಥಾನ ಪಡೆದರು. 30,050 ಮತಗಳನ್ನು ಪಡೆದ ಈಶ್ವರಪ್ಪ ಠೇವಣಿಯನ್ನು ಕಳೆದುಕೊಂಡು ಸೋಲು ಕಂಡರು.

ಅದ್ದರಿಂದ ಈಶ್ವರಪ್ಪ ವಾಪಸ್ ಕರೆಸಿಕೊಳ್ಳುವ ವಿಚಾರವನ್ನು ಹೈಕಮಾಂಡ್ ಅಂಗಳಕ್ಕೆ ಕಳಿಸಲಾಗಿದೆ. ಬಿ. ಎಲ್. ಸಂತೋಷ್ ಮತ್ತು ಕೇಂದ್ರ ಸಚಿವ ಅಮಿತ್ ಶಾ ಈ ವಿಚಾರದಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಬೇಕಿದೆ. ವರಿಷ್ಠರು ಹಸಿರು ನಿಶಾನೆ ತೋರಿಸಲಿದ್ದಾರೆಯೇ? ಎಂದು ಕಾದು ನೋಡಬೇಕಿದೆ.

ಅಲ್ಲದೇ ಪ್ರಧಾನಿ ನರೇಂದ್ರ ಮೋದಿ ಶಿವಮೊಗ್ಗಕ್ಕೆ ಲೋಕಸಭೆ ಚುನಾವಣೆ ಪ್ರಚಾರಕ್ಕೆ ಬಂದಾಗ ಸಮಾವೇಶಕ್ಕೆ ಬರುವಂತೆ ಈಶ್ವರಪ್ಪ ಆಹ್ವಾನಿಸಲಾಯಿತು. ಆದರೆ ಚುನಾವಣೆ ಗೆದ್ದು ಸಂಸತ್‌ನಲ್ಲಿಯೇ ನರೇಂದ್ರ ಮೋದಿ ಭೇಟಿಯಾಗುತ್ತೇನೆ ಎಂದು ಈಶ್ವರಪ್ಪ ಸಮಾವೇಶಕ್ಕೆ ಗೈರಾದರು. ಈಗ ಅವರು ಬಿಜೆಪಿಗೆ ವಾಪಸ್ ಆಗಲು ಒಪ್ಪಿಗೆ ಸಿಗಲಿದೆಯೇ?.

# ಶ್ರೀಮತಿ ತುಳಸಿ ರಾಮರಾಜು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆಯಿಂದ

## 3 ದಿನಗಳ ಉಚಿತ ತಪಾಸಣೆ ಮತ್ತು ಸಲಹಾ ಶಿಬಿರ: ಡಾ. ವಿಂಧ್ಯ ಗಂಗಾಧರ ವರ್ಮ

• ಉದಯವಾಹಿನಿ ದಾವಣಗೆರೆ

ಶ್ರೀಮತಿ ತುಳಸಿ ರಾಮರಾಜು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ, ವಿದ್ಯಾನಗರ ಮುಖ್ಯರಸ್ತೆ, ದಾವಣಗೆರೆಯ ವತಿಯಿಂದ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ 3 ದಿನಗಳ ಉಚಿತ ತಪಾಸಣೆ ಮತ್ತು ಸಲಹಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ದಾವಣಗೆರೆಯ ಪುತ್ತೂರು ಶಲ್ಯ ವೈದ್ಯರು, ಯೋಗವೆನ್ನುವುದು ನಮ್ಮ ಪುರಾತನ ಚಿಕಿತ್ಸಾ ಪದ್ಧತಿಯಾಗಿದೆ. ಯೋಗವೆನ್ನುವುದು ದಾವಣಗೆರೆಯವರ ಅಚ್ಚುಮೆಚ್ಚಿನ ಚಿಕಿತ್ಸಾ ಪದ್ಧತಿಯಾಗಿದೆ ಎನ್ನುವುದು ದಿನನಿತ್ಯ ಚಿಕಿತ್ಸೆಯನ್ನು ಪಡೆಯಲು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆಗೆ ಬರುತ್ತಿರುವ ರೋಗಿಗಳನ್ನು ಗಮನಿಸಿದರೆ ತಿಳಿಯುತ್ತದೆ. ಯೋಗಕ್ಕೆ ಇಲ್ಲಿನ ಸ್ಥಳೀಯರ ಸಹಕಾರವು ಅಭಿನಂದನಾರ್ಹ ಎಂದು ತಿಳಿಸಿದರಲ್ಲದೆ ಯೋಗವು ಇಂದು ವಿಶ್ವವ್ಯಾಪ್ತಿಯಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಶ್ರೀಮತಿ ತುಳಸಿರವರು ಮಾತನಾಡಿ ಯೋಗವು ಭಾರತದ 4000 ವರ್ಷಗಳಷ್ಟು ಹಿಂದಿನ ಪುರಾತನ ತತ್ವ. ಯೋಗದ ಪ್ರಕಾರ ದೇಹವು ಪಂಚಕೋಶಗಳಿಂದ ಮಾಡಲ್ಪಟ್ಟಿದೆ. ಅವುಗಳೆಂದರೆ ಅನ್ನಮಯ ಕೋಶ, ಪ್ರಾಣಮಯ ಕೋಶ, ಮನೋಮಯ ಕೋಶ, ವಿಜ್ಞಾನಮಯ ಕೋಶ, ಆನಂದಮಯ ಕೋಶ. ಯೋಗದ ಪ್ರಕಾರ ಎಲ್ಲಾ ರೀತಿಯ ತೊಂದರೆಗಳು ಮಾನವನಿಗೆ ವಿಜ್ಞಾನಮಯಕೋಶದಲ್ಲಿ ಉದ್ಭವಿಸುತ್ತವೆ. ಆದರೆ ಇವುಗಳು ಕಾಣಿಸಿಕೊಳ್ಳುವುದು ಮನೋಮಯಕೋಶದಲ್ಲಿ. ಮಾನಸಿಕ ಉದ್ವೇಗ ಅಥವಾ ಮಾನಸಿಕ ಒತ್ತಡವು ಮನಸ್ಸಿನ ಸಮತೋಲನವನ್ನು ಏರುಪೇರು ಮಾಡುತ್ತದೆ ಎಂದು ತಿಳಿಸಿದರು.





ಉದಯವಾಹಿನಿ ಚಿತ್ರ

ಈ ಕಾರ್ಯಕ್ರಮದ ಮತ್ತೋರ್ವ ಅತಿಥಿಗಳಾದ ಡಾ. ಗಂಗಾಧರ ವರ್ಮ ಬಿ. ಆರ್ ಖ್ಯಾತ ಪ್ರಕೃತಿ ಚಿಕಿತ್ಸಾ ತಜ್ಞ ವೈದ್ಯರು ಮಾತನಾಡಿ ಮಾನಸಿಕ ಉದ್ವೇಗವು ತೀವ್ರವಾದ ಬೇಕು-ಬೇಡಗಳು, ರಾಗ-ದ್ವೇಷಗಳು, ಇಚ್ಛೆ-ನಿಚ್ಛೆಗಳಿಂದ ಕಾಣಿಸಿಕೊಳ್ಳುತ್ತವೆ. ಈ ಮನೋಮಯ ಕೋಶದ ಅಸಮತೋಲನವು ಪ್ರಾಣಮಯ ಕೋಶದ ಮೇಲೆ ಪ್ರಭಾವ ಬೀರಿ ಅಲ್ಲಿನ ಪ್ರಾಣದ ಹರಿಯುವಿಕೆಯಲ್ಲಿ ಅಡ್ಡಿ-ಅಡಚಣೆಯನ್ನುಂಟು ಮಾಡುತ್ತದೆ. ಈ ಅಡಚಣೆಯು ಅನ್ನಮಯ ಕೋಶದಲ್ಲಿ ವ್ಯಾಧಿಯಾಗಿ ಕಾಣಿಸಿಕೊಳ್ಳುತ್ತದೆ.

**ಇಂದಿನಿಂದ 3 ದಿನಗಳ ಕಾಲ ಉಚಿತ ತಪಾಸಣೆ ಮತ್ತು ಸಲಹಾ ಶಿಬಿರವನ್ನು ಆಯೋಜಿಸಲಾಗಿದ್ದು, ಇದರ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳುವಂತೆ ತಿಳಿಸಿ, ಯೋಗವು ನಮ್ಮ ಪುರಾತನ ತತ್ವಶಾಸ್ತ್ರ, ಇದು ಒಂದು ಜೀವನ ಶೈಲಿ ಹಾಗೂ ಕಲೆ. ಒಬ್ಬ ಮನುಷ್ಯನ ಸರ್ವೋನ್ನತ ಏಳಿಗೆಗೆ ಇದು ತುಂಬಾ ಸಹಕಾರಿ. ಯೋಗವು ಇಂದು ವಿಶ್ವಮಾನ್ಯವಾಗಿ ಜಾತಿ, ಮತ, ಧರ್ಮಗಳನ್ನು ಮೀರಿ ಬೆಳೆಯುತ್ತಿದೆ. ಎಲ್ಲಾ ಪಂಥದ ಜನರೂ ಒಂದಲ್ಲ ಒಂದು ಕಾರಣಕ್ಕಾಗಿ ಯೋಗದ ಮೊರೆ ಹೋಗುತ್ತಿದ್ದಾರೆ**
**-ಶ್ರೀಮತಿ ವಿಂಧ್ಯ ಗಂಗಾಧರ ವರ್ಮ, ಆಸ್ಪತ್ರೆಯ ಮೆಡಿಕಲ್ ಡೈರೆಕ್ಟರ್**

ವಿಜ್ಞಾನಮಯ ಕೋಶದಲ್ಲಿ ಉದ್ಭವಗೊಂಡು ಮನೋಮಯ ಕೋಶದಲ್ಲಿ ಅಭಿವೃದ್ಧಿಗೊಳ್ಳುವ ಇದನ್ನು ಯೋಗದ ಪರಿಭಾಷೆಯಲ್ಲಿ ಆಧಿ ಎಂದು ಕರೆಯುತ್ತಾರೆ. ಈ ಆಧಿಯನ್ನು ದೂರಮಾಡಲು ನಾವು ಯೋಗಾಭ್ಯಾಸವನ್ನು ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಮತ್ತು ಯೋಗವೆಂಬುದು ಕೇವಲ ವ್ಯಾಯಾಮವಲ್ಲ, ಇದು ಒಂದು ಜೀವನ ಶೈಲಿ. ಪತಂಜಲಿ ಮುನಿಯು ಯೋಗವನ್ನು ಅಷ್ಟಾಂಗ ಯೋಗದ ಮೂಲಕ ವಿಭಾಗಿಸಿದ್ದಾರೆ. ಅವುಗಳೆಂದರೆ ಯಮ, ನಿಯಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ, ಧಾರಣ, ಧ್ಯಾನ ಮತ್ತು ಸಮಾಧಿಗಳು ಎಂದು ತಿಳಿಸಿದರು.

ಈ ಶಿಬಿರದ ಉದ್ಘಾಟನೆಯಲ್ಲಿ ಆಸ್ಪತ್ರೆಯ ಮ್ಯಾನೇಜರ್ ಪ್ರಹ್ಲಾದ್ ಕೊಪ್ಪದ್, ಪವಿತ್ರ, ಸುಧಾ ಜಾಧವ್, ನಾಗಣ್ಣ, ಬಿಜ್ಜು ಮತ್ತು ಆಸ್ಪತ್ರೆಯ ಸಾಧಕರು ಉಪಸ್ಥಿತರಿದ್ದರು.

ಕಾರ್ಯಕ್ರಮವು ಪ್ರಾರ್ಥನೆಯೊಂದಿಗೆ ಪ್ರಾರಂಭಗೊಂಡು ಯೋಗಾಭ್ಯಾಸ ಮತ್ತು ಶಾಂತಿ ಮಂತ್ರದೊಂದಿಗೆ ಮುಕ್ತಾಯವಾಯಿತು.

# ಮಾನಸಿಕ ಸದೃಢತೆ ಹಾಗೂ ಒತ್ತಡ ಮುಕ್ತ ಜೀವನಕ್ಕೆ ಯೋಗ ಅವಶ್ಯಕ: ನ್ಯಾಯಾಧೀಶೆ ಜ್ಯೋತಿ ಎಸ್.ಕಾಳೆ

• ಉದಯವಾಹಿನಿ, ಚಿಂಚೋಳಿ

ಮಾನಸಿಕ ಸದೃಢತೆ ಹಾಗೂ ಒತ್ತಡ ಮುಕ್ತ ಜೀವನಕ್ಕೆ ಯೋಗ ಸಹಕಾರಿಯಾಗಲಿದೆ ಎಂದು ಹಿರಿಯ ಶ್ರೇಣಿ ನ್ಯಾಯಾಲಯದ ನ್ಯಾಯಾಧೀಶೆ ಜ್ಯೋತಿ ಶಾಂತಪ್ಪ ಕಾಳೆ ಅಭಿಪ್ರಾಯ ವ್ಯಕ್ತಪಡಿಸಿದ್ದರು.

ಪಟ್ಟಣದ ನ್ಯಾಯಾಲಯ ಆವರಣದಲ್ಲಿ ಹತ್ತನೇಯ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮ ಉಧ್ಘಾಟಿಸಿ ಮಾತನಾಡಿದ ಅವರು, ಯೋಗ ದೈಹಿಕವಾಗಿ ಶಕ್ತಿ ಹಾಗೂ ಚೈತನ್ಯ ತುಂಬುವುದರ ಜೋತೆಗೆ ಮಾನಸಿಕವಾಗಿ ಸಹ ಸದೃಢನಾಗಿಸುತ್ತದೆ. ಜೀವನದಲ್ಲಿ ಸಕಾರಾತ್ಮಕ ಚಿಂತನೆ ಹಾಗೂ ಸದೃಢ ಮನೋಭಾವ ಹೊಂದಲು ಜೀವನದಲ್ಲಿ ಅಳವಡಿಸಿಕೊಳ್ಳಲು ಅತ್ಯವಶ್ಯಕವಾಗಿದೆ ಎಂದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ನ್ಯಾಯಾಲಯದ ಆಡಳಿತ ಮುಖ್ಯಸ್ಥರಾದ ರವಿಕುಮಾರ ಈರಣ್ಣಾ,ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ, ಪುರಸಭೆ ಮುಖ್ಯಾಧಿಕಾರಿ ಕಾಶಿನಾಥ ಧನ್ನಿ,ವಕೀಲರಾದ ಮಲ್ಲಿಕಾರ್ಜುನ ರಾಮತೀರ್ಥ,ವೀರೇಂದ್ರ ಕೋರಿ,ಚಂದ್ರಶೇಟ್ಟಿ ಜಾಧವ,ನೀಲಕಂಠ ರಾಠೋಡ್, ಶಶಿಕಾಂತ ಅಡಕಿ,ಸಿಬ್ಬಂದಿಗಳಾದ ಭಿಮರಾವ,ರಾಜಕುಮಾರ, ಚಂದ್ರಕಾಂತ,ನಾಗರತ್ನ ಸೇರಿದಂತೆ ಅನೇಕರಿದ್ದರು.

# ನೀರಿಗೆ ಹಾಹಾಕಾರ: ನಡುರಾತ್ರಿ ಮಹಿಳೆಯರ ಸರದಿ

• ಉದಯವಾಹಿನಿ ಹಾವೇರಿ

ಹಾನಗಲ್ ತಾಲ್ಲೂಕಿನ ಸೋಮಸಾಗರ ಗ್ರಾಮದಲ್ಲಿ ಬೇಸಿಗೆಯಲ್ಲಿ ಎದುರಾದ ನೀರಿನ ಹಾಹಾಕಾರ ಮಾನ್ಸೂನ್ ಮಳೆ ಆರಂಭವಾದರೂ ಕಡಿಮೆಯಾಗಿಲ್ಲ. ಗ್ರಾಮ ಪಂಚಾಯಿತಿಯ ಬಹುತೇಕ ಕೊಳವೆಬಾವಿಗಳು ಬತ್ತಿದ್ದು, ರೈತರ ಜಮೀನಿನ ಕೊಳವೆ ಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ. ಈ ನೀರಿಗಾಗಿ ಮಹಿಳೆಯರು ನಡುರಾತ್ರಿಯಲ್ಲಿ ಕಾಯುತ್ತ ಸರದಿಯಲ್ಲಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲಾ ಕೇಂದ್ರದಿಂದ 24 ಕಿ.ಮೀ ಹಾಗೂ ತಾಲ್ಲೂಕು ಕೇಂದ್ರದಿಂದ 29 ಕಿ.ಮೀ ದೂರದಲ್ಲಿರುವ ಸೋಮಸಾಗರ ಗ್ರಾಮದಲ್ಲಿ ಮೂರು ತಿಂಗಳಿನಿಂದ ನೀರಿನ ಸಮಸ್ಯೆ ವಿಪರೀತವಾಗಿದೆ. ಬಳಸಲು ಹಾಗೂ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಪರದಾಡುತ್ತಿದ್ದಾರೆ. ಸ್ಥಳೀಯ ಗ್ರಾಮ ಪಂಚಾಯಿತಿ ವತಿಯಿಂದ ಹಲವು ತಾತ್ಕಾಲಿಕ ಕ್ರಮಗಳನ್ನು ಕೈಗೊಂಡರೂ ಜನಸಂಖ್ಯೆಗೆ ತಕ್ಕಂತೆ ನೀರು ಪೂರೈಕೆ ಸಾಧ್ಯವಾಗುತ್ತಿಲ್ಲ.



ಉದಯವಾಹಿನಿ ಚಿತ್ರ

**ಸರದಿಯಲ್ಲಿ ನಿಲ್ಲಬೇಕಾದ ಪರಿಸ್ಥಿತಿ**

**ರೈತರ ಜಮೀನು ನೀರು ಖರೀದಿ:** ನೀರಿನ ಸಮಸ್ಯೆ ಹೆಚ್ಚಾಗಿದ್ದರಿಂದ ಗ್ರಾಮ ಪಂಚಾಯಿತಿಯವರು ರೈತರ ಜಮೀನಿನಲ್ಲಿರುವ ಕೊಳವೆ ಬಾವಿಗಳನ್ನು ಬಾಡಿಗೆಗೆ ತೆಗೆದುಕೊಂಡಿದ್ದಾರೆ.

ಇವುಗಳ ಮೂಲಕ ಜನರಿಗೆ ನೀರು ಪೂರೈಕೆ ಮಾಡಲಾಗುತ್ತಿದೆ. ಆದರೆ, ಹೆಸ್ಕಾಂನವರು 3 ಫೇಸ್ ವಿದ್ಯುತ್ ನೀಡಿದ ಸಂದರ್ಭದಲ್ಲಿ ಮಾತ್ರ ನೀರು ತುಂಬಿಕೊಳ್ಳಲು ಅವಕಾಶವಿದೆ. ಹೀಗಾಗಿ, ರಾತ್ರಿ ಹಾಗೂ ಹಗಲಿನಲ್ಲಿ ಮಹಿಳೆಯರು ಕೊಡ ಹಿಡಿದು ಕೊಳವೆಬಾವಿಗಳ ಬಳಿ ಕಾಯುತ್ತ ನಿಲ್ಲುವ ದೃಶ್ಯಗಳು ಸಾಮಾನ್ಯವಾಗಿವೆ. ಗ್ರಾಮದಲ್ಲಿ ನೀರಿನ ಹಾಹಾಕಾರವಿದೆ.

# ವೈದ್ಯರು, ಸಿಬ್ಬಂದಿ ಕೊರತೆ

• ಉದಯವಾಹಿನಿ ಕನಕಗಿರಿ

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರವು ವೈದ್ಯರು, ಸಿಬ್ಬಂದಿ ಕೊರತೆಯಿಂದ ಬಳಲುತ್ತಿದ್ದು ನಿಯೋಜನೆ ಮೇಲೆ ನಡೆಯುತ್ತಿದೆ. ಕನಕಗಿರಿ ತಾಲ್ಲೂಕು ಕೇಂದ್ರ ಹಾಗೂ ವಿಧಾನಸಭಾ ಕ್ಷೇತ್ರವಾಗಿದ್ದು ನೀರಾವರಿ ಸೌಲಭ್ಯವಿಲ್ಲದೆ ಜನರು ಮಳೆ ನಂಬಿ ಕೃಷಿ ಮಾಡುತ್ತಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಬಡವರಿದ್ದು ಸೂಕ್ತ ಚಿಕಿತ್ಸೆಗಾಗಿ ಸಾಲ ಮಾಡಬೇಕಾಗಿದೆ. ಸಮುದಾಯ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಒಟ್ಟು 28 ಗ್ರಾಮಗಳು ಬರುತ್ತಿದ್ದು ನಿತ್ಯ ನೂರಾರು ರೋಗಿಗಳು ಒಳ ಹಾಗೂ ಹೊರ ರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಆಸ್ಪತ್ರೆಗೆ ಒಟ್ಟು ನಾಲ್ಕು ಜನ ತಜ್ಞ ವೈದ್ಯರು ಇರಬೇಕಾಗಿದ್ದು, ಈ ಪೈಕಿ ಪ್ರಸೂತಿ, ಮಕ್ಕಳ ತಜ್ಞ ಹಾಗೂ ಅರವಳಿಕೆ ತಜ್ಞರು ಮತ್ತು ಕರ್ತವ್ಯ ನಿರತ ವೈದ್ಯರು ಇಲ್ಲ. ಹೀಗಾಗಿ ಇಬ್ಬರು ಎಂಬಿಬಿಎಸ್ ಹಾಗೂ ಬಿಎಎಂಎಸ್ ವೈದ್ಯರು ನಿಯೋಜನೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದಾರೆ. ನಿತ್ಯ 250-300 ಜನ ಹೊರರೋಗಿಗಳು ಹಾಗೂ 50 ಜನರು ಒಳರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹಗಲು ಹೊತ್ತಿನಲ್ಲಿ ಒಬ್ಬರೇ ವೈದ್ಯರು ಆಸ್ಪತ್ರೆಯಲ್ಲಿರುವುದರಿಂದ ಜ್ವರ, ಗರ್ಭಿಣಿಯರು ಹಾಗೂ ಇತರೆ ರೋಗಿಗಳ ತಪಾಸಣೆಗೆ ಹರಸಾಹಸ ಪಡಬೇಕಾಗಿದೆ. ತುರ್ತು ಚಿಕಿತ್ಸೆ ಪಡೆಯುವವರು ಹಾಗೂ ಹೆರಿಗೆ ಮಾಡಿಸಿಕೊಳ್ಳುವವರು ಬಂದರೆ ಇತರೆ ರೋಗಿಗಳ ಪರಿಸ್ಥಿತಿ ದೇವರೆ ಬಲ್ಲ ಎನ್ನುವಂತಾಗಿದೆ. ಆರು ನರ್ಸ್ ಹುದ್ದೆಗಳಲ್ಲಿ ಮೂವರು, ಇಬ್ಬರು ಔಷಧಿ ವಿತರಕರಲ್ಲಿ ಒಬ್ಬರು, ಹದಿಮೂರು ಕಿರಿಯ ಆರೋಗ್ಯ ಸಹಾಯಕರಲ್ಲಿ ಆರು ಹುದ್ದೆಗಳು ಖಾಲಿ ಇವೆ.



ಉದಯವಾಹಿನಿ ಚಿತ್ರ

# ಜಾನುವಾರುಗಳಿಗೆ ಚರ್ಮ ಗಂಟು ರೋಗ : ಉಚಿತ ಲಸಿಕೆ

• ಉದಯವಾಹಿನಿ ಇಂಡಿ

ತಾಲ್ಲೂಕಿನಲ್ಲಿ ಜಾನುವಾರುಗಳಿಗೆ ಈಗಾಗಲೇ ಜೂನ್ 20 ರಿಂದ ಉಚಿತ ಲಸಿಕೆ ಹಾಕಲು ಪ್ರಾರಂಭಿಸಿದ್ದು ರೈತರು ಉಪಯೋಗ ಪಡೆದುಕೊಳ್ಳಬೇಕೆಂದು ಮುಖ್ಯ ಪಶು ವೈದ್ಯಾಧಿಕಾರಿ ಡಾ।। ಬಿ.ಎಚ್.ಕನ್ನೂರ ತಿಳಿಸಿದ್ದಾರೆ.

ಪಟ್ಟಣದ ಪಶು ಆಸ್ಪತ್ರೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಈ ರೋಗವು ಒಂದು ಜಾನುವಾರು ನಿಂದ ಇನ್ನೊಂದು ಜಾನುವಾರಿಗೆ ಬರುವ ಸಾಂಕ್ರಾಮಿಕ ರೋಗ. ಈ ರೋಗವು ಮುಂಗಾರು ಆರಂಭದ ಸಮಯದಲ್ಲಿ ಬರುತ್ತದೆ. ಸದರಿ ರೋಗವು ಸೊಳ್ಳೆಗಳಿಂದ ಕಚ್ಚುವ ನೊಣಗಳಿಂದ, ಹಾಗೂ ಉಣ್ಣೆಗಳಿಂದ ಹರಡುತ್ತದೆ ಎಂದರು. ಈ ರೋಗವು ರೋಗ ಗ್ರಸ್ಥ ಪ್ರಾಣ ಗಳ ನೇರ ಸಂಪರ್ಕದಿಂದಲೂ ಹಾಗು ಕೆಲವೊಮ್ಮೆ ಕಲುಷಿತ ನೀರು, ಮತ್ತು ಮೇವಿನಿಂದಲೂ ಹರಡುತ್ತದೆ ಎಂದರು. ಲಸಿಕಾ ಅವಧಿ ಒಂದು ತಿಂಗಳು ಇದೆ. ರೈತರು ತಮ್ಮ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಿಕೊಳ್ಳಲು ವಿನಂತಿಸಿದರು.



ಉದಯವಾಹಿನಿ ಚಿತ್ರ

ಪ್ರತ್ರಿಕಾಗೋಷ್ಠಿಯಲ್ಲಿ ಡಾ।। ರಾಜಕುಮಾರ ಅಡಕಿ, ಜೆ.ಎಚ್.ಬಾಗವಾನ, ರಾಮಣ್ಣ ಉಪ್ಪಾರ, ರಮೇಶ ನರಳೆ,ಜೆ.ಐ.ಕರಣ ಮತ್ತಿತರಿದ್ದರು.

# ಕೋಚಿಂಗ್ ಸೆಂಟರ್ ಮೇಲೆ ಐ.ಟಿ ದಾಳಿ

• ಉದಯವಾಹಿನಿ, ಬೀದರ್

ಬೀದರ್ ನ ಪ್ರತಿಷ್ಠಿತ ನರ್ಚರ್ ಕೋಚಿಂಗ್ ಸೆಂಟರ್ ಮೇಲೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ರವಿವಾರ ದಾಳಿ ನಡೆಸಿದ್ದಾರೆ. ಸರ್ಕಾರಕ್ಕೆ ಲಕ್ಷಾಂತರ ರೂಪಾಯಿ ತೆರಿಗೆ ಪಾವತಿಸದೆ ವಂಚನೆ ಮಾಡಿದ ಆರೋಪ ಹಿನ್ನೆಲೆಯಲ್ಲಿ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಪ್ರತಿ ವಿದ್ಯಾರ್ಥಿಗಳಿಂದ 36 ಸಾವಿರ ರೂ. ಶುಲ್ಕ ಪಡೆಯುವ ಈ ಕೇಂದ್ರ ಪುಸ್ತಕ, ಡ್ರೆಸ್ ಗಳನ್ನ ಮಾರುಕಟ್ಟೆಗಿಂತ ಎರಡು ಪಟ್ಟು ಬೆಲೆಯಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಪಾಲಕರು ದೂರು ನೀಡಿದ್ದರು.

ಆದಾಯ ತೆರಿಗೆ ಇಲಾಖೆ ಆಯುಕ್ತ ಮಹೇಶ್ ಪಾಟೀಲ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಅಧಿಕಾರಿಗಳು ದಾಖಲೆಗಳನ್ನು ವಶ ಪಡಸಿಕೊಂಡಿದ್ದಾರೆ. ವಾರದಲ್ಲಿ ತೆರಿಗೆ ಪಾವತಿಗೆ ಗಡುವು ನೀಡಲಾಗಿದೆ. ಪ್ರತಿ ಕೋಚಿಂಗ್ ಸೆಂಟರ್ ಗಳು ಕಡ್ಡಾಯವಾಗಿ ಜಿಎಸ್.ಟಿ ನೋಂದಣಿ ಮಾಡಿಸಿ ಸರ್ಕಾರಕ್ಕೆ ಸೂಕ್ತ ತೆರಿಗೆ ಪಾವತಿಸಬೇಕು. ಇಲ್ಲವಾದಲ್ಲಿ ಜಿಎಸ್.ಟಿ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ಎಚ್ಚರಿಕೆ ನೀಡಿದ್ದಾರೆ.

# ವಿದ್ಯುತ್ ಶಾಕ್‌ನಿಂದ ಕಾರ್ಮಿಕ ಸಾವು

• ಉದಯವಾಹಿನಿ ಶಿವಮೊಗ್ಗ

ಕಟ್ಟಡ ನಿರ್ಮಾಣ ಸ್ಥಳದಲ್ಲಿ ವಿದ್ಯುತ್ ಪ್ರವಹಿಸಿ ಕಾರ್ಮಿಕ ಮೃತಪಟ್ಟ ಘಟನೆ ಶಿವಮೊಗ್ಗದ ಸೋಮಯ್ಯ ಲೇಔಟ್ ನಲ್ಲಿ ನಡೆದಿದೆ. ಹರೀಶ್ ಮೃತಪಟ್ಟ ಕಾರ್ಮಿಕ ಎಂದು ಹೇಳಲಾಗಿದೆ. ಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ಸೋಮಯ್ಯ ಲೇಔಟ್ ನಲ್ಲಿ ಕಟ್ಟಡ ನಿರ್ಮಿಸುತ್ತಿದ್ದು, ಕೆಲಸಕ್ಕೆ ಕರೆದುಕೊಂಡು ಬಂದಿದ್ದ ಮೇಸ್ತ್ರಿ ಸಿಮೆಂಟ್ ಮಿಕ್ಸಿಂಗ್ ಯಂತ್ರ ಸ್ವಚ್ಛಗೊಳಿಸುವಂತೆ ತಿಳಿಸಿದ್ದಾರೆ.

ಆದರೆ ಯಾವುದೇ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದ ಕಾರಣ ವಿದ್ಯುತ್ ಪ್ರವಹಿಸಿ ಹರೀಶ್ ಮೃತಪಟ್ಟಿದ್ದಾರೆ ಎನ್ನಲಾಗಿದೆ. 10 ವರ್ಷದಿಂದ ಗಾರೆ ಕೆಲಸ ಮಾಡಿಕೊಂಡಿದ್ದ ಹರೀಶ್‌ಗೆ ಮದುವೆ ನಿಶ್ಚಯವಾಗಿತ್ತು. ಇಂಜಿನಿಯರ್ ಮತ್ತು ಮೇಸ್ತ್ರಿ ನಿರ್ಲಕ್ಷ್ಯದಿಂದ ಸಾವು ಸಂಭವಿಸಿದೆ ಎಂದು ಪೋಷಕರು ದೂರಿದ್ದಾರೆ.

# 245 ಮಂದಿಗೆ ಮೊಬೈಲ್ ಹಸ್ತಾಂತರ



ಉದಯವಾಹಿನಿ ಚಿತ್ರ

• ಉದಯವಾಹಿನಿ ಹಾವೇರಿ

ಬಸ್, ಜಾತ್ರೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮೊಬೈಲ್ ಕಳೆದುಕೊಂಡಿದ್ದ 245 ಮಂದಿಯ ಮೊಬೈಲ್ ಪತ್ತೆ ಮಾಡಿರುವ ಪೊಲೀಸರು, ದೂರುದಾರರಿಗೆ ಮೊಬೈಲ್ ವಾಪಾಸು ಕೊಟ್ಟಿದ್ದಾರೆ.ಜಿಲ್ಲೆಯ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ಜನರು ಮೊಬೈಲ್ ಕಳೆದುಕೊಂಡಿದ್ದರು. ಈ ಬಗ್ಗೆ ಇ-ಲಾಸ್ಟ್ ಹಾಗೂ ಕೇಂದ್ರ ಸರ್ಕಾರದ ಸಿಇಐಆರ್ ಜಾಲತಾಣದಲ್ಲಿ ದೂರು ದಾಖಲಿಸಿದ್ದರು.

ಕಳ್ಳತನವಾಗಿದ್ದ ಮೊಬೈಲ್‌ಗಳನ್ನು ಆರೋಪಿಗಳು, ಹಲವೆಡೆ ಮಾರಿದ್ದರು. ಅವುಗಳನ್ನು ಪತ್ತೆ ಮಾಡಿರುವ ಪೊಲೀಸರು, ಗ್ರಾಹಕರಿಂದ ಮೊಬೈಲ್ ಜಪ್ತಿ ಮಾಡಿ ದೂರುದಾರರಿಗೆ ವಾಪಸು ನೀಡಿದ್ದಾರೆ.

ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಎಸ್ಪಿ ಅಂಶುಕುಮಾರ್ ಹಾಗೂ ಹೆಚ್ಚುವರಿ ಎಸ್ಪಿ ಸಿ.ಗೋಪಾಲ್ ಅವರು ದೂರುದಾರರಿಗೆ ಮೊಬೈಲ್ ಹಸ್ತಾಂತರಿಸಿದರು. ಮೊಬೈಲ್ ಕಳ್ಳತನ ಮಾಡಿದ್ದ ಆರೋಪಿಗಳನ್ನು ಪೊಲೀಸರು ಇದುವರೆಗೂ ಬಂಧನ ಮಾಡಿಲ್ಲ. ಕೇವಲ ಮೊಬೈಲ್ ಖರೀದಿಸಿದ್ದ ಗ್ರಾಹಕರನ್ನು ಮಾತ್ರ ಪತ್ತೆ ಮಾಡಿ, ಅವರಿಂದ ಮೊಬೈಲ್ ಜಪ್ತಿ ಮಾಡಿದ್ದಾರೆ.

# ಎತ್ತುಗಳ ಸಿಂಗರಿಸಿ ಪೂಜಿಸಿ ಕರಿ ಹರಿದ ರೈತರು

## ದೇಶಕ್ಕೆ ರೈತ ಬೆನ್ನೆಲುಬಾದರೆ, ರೈತರಿಗೆ ಎತ್ತುಗಳೇ ಬೆನ್ನೆಲುಬು, ಎತ್ತುಗಳು ರೈತರ ಬೆನ್ನೆಲುಬಾಗಿ ಕೃಷಿ ಭೂಮಿಯಲ್ಲಿ ದುಡಿಯುತ್ತವೆ

• ಉದಯವಾಹಿನಿ ಮುದ್ದೇಬಿಹಾಳ

ಬೇಸಿಗೆ ಕಳೆದು ಮುಂಗಾರಿನ ಹೊಸ್ತಿಲಿನಲ್ಲಿ ರೈತರು ಕೃಷಿ ಕಾರ್ಯಕ್ಕೆ ಸಜ್ಜುಗೊಳ್ಳಲು ಹುರುಪು ತುಂಬುವ ಹಬ್ಬವೇ ಕಾರ ಹುಣ್ಣಿಮೆ ಹಬ್ಬವಾಗಿದೆ ಪ್ರತಿ ವರ್ಷದಂತೆ ಈ ಬಾರಿಯೂ ಸಹ ಮುದ್ದೇಬಿಹಾಳ ಪಟ್ಟಣ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ರೈತರು ಸಂಭ್ರಮ ಸಡಗರದಿಂದ ಕಾರ ಹುಣ್ಣಿಮೆ ಹಬ್ಬವನ್ನು ಆಚರಿಸಿದರು.

**ಒಕ್ಕಲು ಮಕ್ಕಳ ಹಬ್ಬ ಕಾರ ಹುಣ್ಣಿಮೆ**

ಮುದ್ದೇಬಿಹಾಳ ಪಟ್ಟಣದ ಕಿಲ್ಲಾ ಗಲ್ಲಿಯಲ್ಲಿ ಅಗಸಿಯಲ್ಲಿ ಕಾರ ಹುಣ್ಣಿಮೆ ಕರಿ ಹರಿಯುವ ಸಂಪ್ರದಾಯ ಪುರಾತನವಾದುದು ರಾಯನಗೌಡ ಪಾಟೀಲ್ ಪರಿವಾರದವರ ನೇತೃತ್ವದಲ್ಲಿ ಈ ಸಂಪ್ರದಾಯ ತಲೆ ತಲಾಂತದಿಂದ ಆಚರಿಸಿಕೊಂಡು ಬರಲಾಗುತ್ತಿದೆ ರಾಯನಗೌಡ ಪಾಟೀಲ್ ಪರಿವಾರದ ಬಸನಗೌಡ ಪಾಟೀಲ್ ಅವರ ಮನೆಯಿಂದ , ತಹಶಿಲ್ದಾರ ಮನೆಯಿಂದ, ಬಾಪುಗೌಡ ಪಾಟೀಲ್ ಮನೆಯಿಂದ ಹಾಗೂ ವಾಲಿಕಾರ ಪರಿವಾರದ ಸಂತೋಷ ನಾಯ್ಕೋಡಿ ಪರಿವಾರ ಸೇರಿದಂತೆ ಒಟ್ಟು ಐದು ಕುಟುಂಬಗಳ ಮನೆಯಿಂದ ಐದು ಜೋಡು ಎತ್ತುಗಳನ್ನು ಸಾಂಪ್ರದಾಯಿಕವಾಗಿ ಭಾಜಾ ಭಜಂತ್ರಿ ಮೇಳದಲ್ಲಿ ಕಿಲ್ಲಾಗಲ್ಲಿಯ ಅಗಸಿಯಲ್ಲಿ ತಂದು ವಿಶೇಷ ಪೂಜೆಯನ್ನು ಎತ್ತುಗಳಿಗೆ ಸಲ್ಲಿಸಿ ನಂತರ ಎತ್ತುಗಳನ್ನು ಅಗಸಿಯಲ್ಲಿ ಓಡಿಸಲಾಗುತ್ತದೆ ಅಂತೆಯೇ ಈ ಬಾರಿಯೂ ಸಹ ರಾಸುಗಳಿಗೆ ವಿಶೇಷ ಪೂಜೆಯನ್ನು ರಾಯನಗೌಡ ಪಾಟೀಲ್ ಪರಿವಾರದ ವಿಶ್ವನಾಥಗೌಡ ಪಾಟೀಲ್, ಉಮೇಶಗೌಡ ಪಾಟೀಲ್ ಸಹೋದರರು ನೇರವೇರಿಸಿದರು. ಪೂಜೆಯ ನಂತರ ಐದು ಜೋಡಿ ಎತ್ತುಗಳನ್ನು ಅಗಿಸಿಯ ಒಳಗೆ ಐದು ಬಾರಿ ಓಡಿಸಲಾಯಿತು ಬಿಳಿ ಎತ್ತುಗಳೇ ಮೊದಲು ಬಂದವು.



ಉದಯವಾಹಿನಿ ಚಿತ್ರ

ಸಂಪ್ರದಾಯದಂತೆ ಕರಿಯನ್ನು ಉಮೇಶಗೌಡ ಪಾಟೀಲ್ ಹರಿದರು ನಂತರ ಮುದ್ದೇಬಿಹಾಳ ಪಟ್ಟಣದ ಗೌಡರು ಹಾಗೂ ವಾಲಿಕಾರ ಮನೆತನದವರು ಕಿಲ್ಲಾಗಲ್ಲಿಯ ಕೊಳ್ಳದ ರಂಗ ಹನುಮಾನ್ ಮಂದಿರಕ್ಕೆ ತೆರಳಿ ವಿಶೇಷ ಪೂಜೆಯನ್ನು ಸಲ್ಲಿಸಿ ಕಾರ ಹುಣ್ಣಿಮೆ ಹಬ್ಬಕ್ಕೆ ತರೆ ಎಳೆದರು.

ಈ ಸಂದರ್ಭದಲ್ಲಿ ವಿಶ್ವನಾಥಗೌಡ ಪಾಟೀಲ್, ಉಮೇಶಗೌಡ ಪಾಟೀಲ್, ಅಶೋಕ ನಾಡಗೌಡ, ರಾಜು ನಾಡಗೌಡ, ಸಂತೋಷ ನಾಯ್ಕೋಡಿ , ಕಿರಣ್ ಪಾಟೀಲ್, ಚೇತನ ಮೋಟಗಿ,ಲಾಳೆಸಾಬ ನಾಯ್ಕೋಡಿ, ಲಾಲಸಾಬ ನಾಯ್ಕೋಡಿ, ರಸೂಲಸಾಬ ನಾಯ್ಕೋಡಿ, ಹುಸೇನಭಾಷಾ ನಾಯ್ಕೋಡಿ, ಬಸಪ್ಪ ಮೇಲಿನಮನಿ, ಸಂಗಣ್ಣ ಮೇಲಿಮನಿ ,ನಿಂಗಪ್ಪ ತಟ್ಟಿ,ಯಮನೂರಿ ತಟ್ಟಿ,ಈರಪ್ಪ ಪವಾಡಶೆಟ್ಟಿ, ಸೇರಿದಂತೆ ಪಟ್ಟಣದ ಹಿರಿಯರು ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು ಚಿಕ್ಕ ಮಕ್ಕಳು ಸಂಭ್ರಮದಿಂದ ಎತ್ತುಗಳ ಓಟವನ್ನು ನೋಡಿ ಖುಷಿ ಪಟ್ಟರು.

**ಅಳಿವಿನಂಚಿನಲ್ಲಿರುವ ಎತ್ತು ಆಕಳುಗಳನ್ನು ಉಳಿಸಬೇಕು**

**ದೇಶಕ್ಕೆ ರೈತ ಬೆನ್ನೆಲುಬಾದರೆ, ರೈತರಿಗೆ ಎತ್ತುಗಳೇ ಬೆನ್ನೆಲುಬು. ಎತ್ತುಗಳು ರೈತರ ಬೆನ್ನೆಲುಬಾಗಿ ಕೃಷಿ ಭೂಮಿಯಲ್ಲಿ ದುಡಿಯುತ್ತವೆ. ಯಂತ್ರಗಳು ಇರಲಿ ಇಲ್ಲದಿರಲಿ. ರೈತರ ಜಮೀನಿನಲ್ಲಿ ಅತಿ ಹೆಚ್ಚು ದುಡಿಯುವುದು ಎತ್ತುಗಳು ಆದರೆ ಆಧುನಿಕ ಯುಗದಲ್ಲಿ ಮಾನವ ಕೃಷಿಗೆ ಟ್ರ್ಯಾಕ್ಟರ್ ಸೇರಿದಂತೆ ಯಂತ್ರಕ್ಕೆ ಅವಲಂಬಿತನಾಗಿ ಎತ್ತುಗಳನ್ನು ಮರೆತ ಪರಿಣಾಮ ಕಾರ ಹುಣ್ಣಿಮೆ ಹಬ್ಬದಲ್ಲಿ ಎತ್ತು ಓಡಿಸಲು ಎತ್ತುಗಳು ಸಿಗದಂತಹ ಪರಿಸ್ಥಿತಿ ಒದಗಿದೆ. ಅಳಿವಿನಂಚಿನಲ್ಲಿರುವ ಎತ್ತು ಆಕಳುಗಳನ್ನು ಉಳಿಸಬೇಕು ಇವುಗಳ ಸಂಖ್ಯೆ ಹೆಚ್ಚಾಗಬೇಕು ಮತ್ತು ಈ ಕಾರ ಹುಣ್ಣುಮೆ ಸಂಪ್ರದಾಯ ಮುಂದಿನ ಪಿಳಿಗೆಗೆ ಉಳಿಸಿಕೊಡುವ ಜವಾಬ್ದಾರಿ ಎಲ್ಲರದಾಗಿದೆ ಎಂದು ಊರಿನ ಗೌಡರಾದ ವಿಶ್ವನಾಥಗೌಡ ಪಾಟೀಲ್ ಹಾಗೂ ಅಶೋಕ ನಾಡಗೌಡ, ಸಂತೋಷ ನಾಯ್ಕೋಡಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.**

## ನಿವೃತ್ತಿಯಾಗು ಶಕಿಬ್, ಬಾಂಗ್ಲಾ ಮಾಜಿ ನಾಯಕನ ಮೇಲೆ ಮತ್ತೆ ಗುಡುಗಿದ ಸೆಹ್ವಾಗ್



ನವದೆಹಲಿ: ಭಾರತದ ಮಾಜಿ ಆರಂಭಿಕ ಬ್ಯಾಟರ್ ಹಾಗೂ ಕಾಮೆಂಟೇಟರ್ ವೀರೇಂದ್ರ ಸೆಹ್ವಾಗ್ ಮತ್ತು ಬಾಂಗ್ಲಾದೇಶ ತಂಡದ ಮಾಜಿ ನಾಯಕ ಶಕೀಬ್ ಅಲ್ ಹಸನ್ ಅವರ ನಡುವಿ ಶೀತಲ ಸಮರ ತೀವ್ರಗೊಂಡಿದೆ. ಈ ಬಾರಿ ಸೆಹ್ವಾಗ್, ತಕ್ಷಣದಲ್ಲೇ ನಿವೃತ್ತಿಯಾಗು ಎಂದು ಶಕಿಬ್‌ಗೆ ಸಲಹೆ ಕೊಟ್ಟಿದ್ದಾರೆ. ನಿನ್ನಿಂದ ಆಡಲು ಸಾಧ್ಯವಾಗುತ್ತಿಲ್ಲ. ಆದಷ್ಟು ಬೇಗ ತಂಡ ತೊರೆಯುವುದು ಉತ್ತಮ ಎಂದು ಹೇಳಿದ್ದಾರೆ. ಭಾರತ ಹಾಗೂ ಬಾಂಗ್ಲಾದೇಶ ತಂಡಗಳ ನಡುವಿನ ಸೂಪರ್ 8 ಪಂದ್ಯದ ಬಳಿಕ ಸೆಹ್ವಾಗ್ ಈ ಮಾತುಗಳ ಮೂಲಕ ಕುಟುಕಿದ್ದಾರೆ.

ಸರ್ ವಿವಿಯನ್ ರಿಚರ್ಡ್ಸ್ ಸ್ಟೇಡಿಯಂನಲ್ಲಿ ರೋಹಿತ್ ಶರ್ಮಾ ನಾಯಕತ್ವದ ಭಾರತ ವಿರುದ್ದ ಬಾಂಗ್ಲಾದೇಶ 50 ರನ್‌ಗಳ ಹೀನಾಯ ಸೋಲಿಗೆ ಒಳಗಾಗಿದೆ. ಏಕಪಕ್ಷೀಯ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಆರಂಭಿಕ ಸೂಪರ್ 8 ಪಂದ್ಯದಲ್ಲಿ ಸೋತಿದ್ದ ಬಾಂಗ್ಲಾ ತಂಡಕ್ಕೆ ಇದು ಎರಡನೇ ಆಘಾತ.

ಪಂದ್ಯದಲ್ಲಿ ಟಾಸ್ ಸೋತ ನಂತರ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಉತ್ತಮ ಆರಂಭವನ್ನು ನೀಡಿದರು. ನಂತರ ರಿಷಭ್ ಪಂತ್, ಸೂರ್ಯಕುಮಾರ್ ಯಾದವ್, ಶಿವಂ ದುಬೆ ಮತ್ತು ಹಾರ್ದಿಕ್ ಪಾಂಡ್ಯ ಭಾರತಕ್ಕೆ 190 ಕ್ಕೂ ಹೆಚ್ಚು ರನ್ ಗಳಿಸಲು ಸಹಾಯ ಮಾಡಿದರು. ನಿರೀಕ್ಷೆಯಂತೆ, ಬಾಂಗ್ಲಾದೇಶಕ್ಕೆ ಗುರಿಯನ್ನು ಬೆನ್ನಟ್ಟಲು ಸಾಧ್ಯವಾಗಲಿಲ್ಲ. ಬ್ಯಾಟಿಂಗ್ ಕ್ರಮಾಂಕದಲ್ಲಿ ಲಿಟನ್ ದಾಸ್, ತಂಝಿಮ್ ಹಸನ್ ಮತ್ತು ನಜ್ಮುಲ್ ಹುಸೇನ್ ಶಾಂಟೊ ಮಾತ್ರ ಕೆಲವು ರನ್ ಗಳಿಸಿದರೆ, ಅನುಭವಿ ಶಕೀಬ್ ಅಲ್ ಹಸನ್ ಕಳಪೆ ಪ್ರದರ್ಶನ ನೀಡಿದರು. ಶಕೀಬ್ ಅಲ್ ಹಸನ್ ಉತ್ತಮವಾಗಿ ಇನಿಂಗ್ಸ್ ಪ್ರಾರಂಭಿಸಿದರು. ಸಿಕ್ಸರ್ ಮತ್ತು ಬೌಂಡರಿ ಗಳಿಸಿದರು. ಆದರೆ ತಮ್ಮ ಏಳನೇ ಎಸೆತವನ್ನು ಕವರ್ ಕಡೆಗೆ ಬಾರಿಸಲು ಹೋಗಿ ರೋಹಿತ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದರು. ಅವರಿಗೆ ಪಂದ್ಯವನ್ನು ಗೆಲ್ಲಿಸುವ ಅವಕಾಶ ಇದ್ದರು ಅವರು ತಾಳ್ಮೆ ತೋರಲಿಲ್ಲ. ಈ ಬಗ್ಗೆ ಶಕೀಬ್ ವಿರುದ್ಧ ವೀರೇಂದ್ರ ಸೆಹ್ವಾಗ್ ಗರಂ ಶಕೀಬ್ ಅಲ್ ಹಸನ್ ಔಟಾಗಿದ್ದನ್ನು ನೋಡಿದ ವೀರೇಂದ್ರ ಸೆಹ್ವಾಗ್, ತಮ್ಮ ವಿಕೆಟ್ ಒಪ್ಪಿಸಿದಕ್ಕಾಗಿ ವಾಗ್ದಾಳಿ ನಡೆಸಿದ್ದಾರೆ. ಕ್ರೀಸ್‌ನಲ್ಲಿ ಸೆಟ್ ಆದ ಬ್ಯಾಟರ್‌ಗೆ ಬೆಂಬಲಿಸಲು ವಿಫಲವಾಗಿದ್ದಕ್ಕೆ ಹಾಗೂ ಮಧ್ಯಮ ಕ್ರಮಾಂಕದಲ್ಲಿ ವಿಕೆಟ್ ಪಡೆಯದಿರುವ ಬಗ್ಗೆ ಸೆಹ್ವಾಗ್ ಟೀಕಿಸಿದರು. ಉತ್ತಮ ಆರಂಭ ಪಡೆದ ನಂತರ ಬಾಂಗ್ಲಾದೇಶದ ಮಾಜಿ ನಾಯಕ ಏಕೆ ಹಾಗೆ ಮಾಡಿದ್ದಾರೆ ಎಂದು ಪ್ರಶ್ನಿಸಿದ್ದಾರೆ.

''ಕ್ರೀಸ್‌ನಲ್ಲಿ ನಿಮ್ಮೊಂದಿಗೆ ಸೆಟ್ ಆಗಿರುವ ಬ್ಯಾಟರ್ ಇದ್ದಾಗ, ಕನಿಷ್ಠ ಅವರನ್ನು ಬೆಂಬಲಿಸಿ. ಕನಿಷ್ಠ ತಾಳ್ಮೆಯಿಂದ ಇರಿ, ಸ್ವಲ್ಪ ಸಮಯ ಕಳೆಯಿರಿ. ಪಂದ್ಯದಿಂದ ಏನನ್ನಾದರೂ ಪಡೆಯಲು ಪ್ರಯತ್ನಿಸಿ. ಏಳು ಎಸೆತಗಳಲ್ಲಿ ಕೇವಲ 11 ರನ್ ಗಳಿ ಹಿಂತಿರುಗಿದ್ದಾರೆ ''ಎಂದು ಸೆಹ್ವಾಗ್ ಹೇಳಿದ್ದಾರೆ.

ಶಕೀಬ್ ಅಲ್ ಹಸನ್ ಈಗ ಯುವ ಆಟಗಾರನಿಗಾಗಿ ತಮ್ಮ ಸ್ಥಾನ ಬಿಟ್ಟುಕೊಡಬೇಕು ಎಂದು ಹಿಂದಿನ ಕ್ರಿಕ್‌ಬಝ್ ಸಂದರ್ಶನದಲ್ಲಿ ಹೇಳಿದ್ದನ್ನು ವೀರೇಂದ್ರ ಸೆಹ್ವಾಗ್ ಪುನರುಚ್ಚರಿಸಿದರು. ಆಲ್‌ರೌಂಡರ್ ತನ್ನ ಹೆಸರು ಮತ್ತು ಖ್ಯಾತಿಯನ್ನು 18 ವರ್ಷಗಳ ಕ್ರಿಕೆಟ್ ವೃತ್ತಿಜೀವನದಲ್ಲಿ ಗಳಿಸಿದ ಮಟ್ಟಕ್ಕೆ ಕಾಪಾಡಿಕೊಂಡಿಲ್ಲ ಎಂದು ಅವರು ಆರೋಪಿಸಿದರು.

# ಆಫ್ರಿಕಾಗೆ ವೈಟ್ ವಾಶ್ ಮುಖಭಂಗ

## ಆಫ್ರಿಕಾ ತಂಡವನ್ನು ಮಣಿಸುವಲ್ಲಿ ಯಶಸ್ವಿ, ಟೀಂ ಇಂಡಿಯಾ 6 ವಿಕೆಟ್‌ಗಳ ಸುಲಭ ಜಯ

ಬೆಂಗಳೂರಿನಲ್ಲಿ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಭಾರತ ಮಹಿಳಾ ತಂಡ ಹಾಗೂ ದಕ್ಷಿಣ ಆಫ್ರಿಕಾ ಮಹಿಳಾ ತಂಡಗಳ ನಡುವಿನ ಮೂರನೇ ಹಾಗೂ ಕೊನೆಯ ಏಕದಿನ ಪಂದ್ಯದಲ್ಲಿ ಆತಿಥೇಯ ಟೀಂ ಇಂಡಿಯಾ 6 ವಿಕೆಟ್‌ಗಳ ಸುಲಭ ಜಯ ದಾಖಲಿಸಿದೆ.

ಇದರೊಂದಿಗೆ ಮೂರು ಪಂದ್ಯಗಳ ಏಕದಿನ ಸರಣಿಯನ್ನು 3-0 ಅಂತರದಿಂದ ವಶಪಡಿಸಿಕೊಂಡಿದೆ. ಈ ಪಂದ್ಯಕ್ಕೂ ಮುನ್ನ ನಡೆದಿದ್ದ ಮೊದಲೆರಡು ಪಂದ್ಯಗಳಲ್ಲೂ ಟೀಂ ಇಂಡಿಯಾ, ಆಫ್ರಿಕಾ ತಂಡವನ್ನು ಮಣಿಸುವಲ್ಲಿ ಯಶಸ್ವಿಯಾಗಿತ್ತು. ಇದ'ರೊಂದಿಗೆ ಇನ್ನೊಂದು ಪಂದ್ಯ ಬಾಕಿ ಇರುವಂತೆಯೇ ಸರಣಿಯನ್ನು ವಶಪಡಿಸಿಕೊಂಡಿತ್ತು.

ಶತಕದ ಜೊತೆ ಯಾಟ

ಇದೀಗ ಕೊನೆಯ ಪಂದ್ಯವನ್ನು ಗೆದ್ದಿರುವ ಹರ್ಮನ್‌ಪ್ರೀತ್ ಪಡೆ ಸರಣಿಯಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ವೈಟ್ ವಾಶ್ ಮಾಡಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ತಂಡ 50 ಓವರ್‌ಗಳಲ್ಲಿ 215 ರನ್ ಕಲೆಹಾಕಲಷ್ಟೇ ಶಕ್ತವಾಯಿತು. ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಸ್ಮೃತಿ ಮಂಧಾನ ಅವರ 90 ರನ್‌ಗಳ ನೆರವಿನಿಂದ ಇನ್ನು 56 ಎಸೆತಗಳು ಬಾಕಿ ಇರುವಂತೆಯೇ ಗೆಲುವಿನ ದಡ ಮುಟ್ಟಿತು.

**ಶತಕದ ಜೊತೆಯಾಟ:** ಮೂರನೇ ಏಕದಿನ ಪಂದ್ಯದಲ್ಲಿ ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ಅದರಂತೆ ನಿಗದಿತ 50 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 215 ರನ್ ಗಳಿಸಿತು. ಬೆಂಗಳೂರಿನ ಎಂ ಚಿನ್ನಸ್ವಾಮಿ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟೀಂ ಇಂಡಿಯಾದ ಬೌಲರ್‌ಗಳು ಅದ್ಭುತ ಪ್ರದರ್ಶನ ನೀಡಿದರು. ದಕ್ಷಿಣ ಆಫ್ರಿಕಾ ಮೊದಲ ವಿಕೆಟ್‌ಗೆ 102 ರನ್ ಸೇರಿಸಿತು.

ಆ ಬಳಿಕ ಅರುಂಧತಿ ರೆಡ್ಡಿ ಈ ಜೊತೆಯಾಟ ಮುರಿಯುವಲ್ಲಿ ಯಶಸ್ವಿಯಾದರು.

ಇಲ್ಲಿಂದ ದಕ್ಷಿಣ ಆಫ್ರಿಕಾ ತಂಡ ನಿಗದಿತ ಅಂತರದಲ್ಲಿ ವಿಕೆಟ್ ಕಳೆದುಕೊಳ್ಳಲಾರಂಭಿಸಿತು. ಹೀಗಾಗಿ ಉತ್ತಮ ಆರಂಭದ ಹೊರತಾಗಿಯೂ ಆಫ್ರಿಕಾ ತಂಡ ಅಲ್ಪ ರನ್ ಕಲೆಹಾಕಲಷ್ಟೇ ಶಕ್ತವಾಯಿತು.

ಭಾರತದ ಪರ ಅರುಂಧತಿ ರೆಡ್ಡಿ ಮತ್ತು ದೀಪ್ತಿ ಶರ್ಮಾ ತಲಾ ಎರಡು ವಿಕೆಟ್ ಪಡೆದರೆ, ಶ್ರೇಯಾಂಕಾ ಪಾಟೀಲ್ ಮತ್ತು ಪೂಜಾ ವಸ್ತ್ರಕರ್ ತಲಾ ಒಂದು ವಿಕೆಟ್ ಪಡೆದರು. ಈ ಸರಣಿಯಲ್ಲಿ ಸ್ಮೃತಿ ಮಂಧಾನಕ್ಕೆ ಮೂರನೇ ಶತಕ ಬಾರಿಸಲು ಉತ್ತಮ ಅವಕಾಶ ಸಿಕ್ಕಿತ್ತು.



### ಭಾರತಕ್ಕೆ ಸುಲಭ ಜಯ

**ಇನ್ನು ಕಡಿಮೆ ಮೊತ್ತಕ್ಕೆ ಆಫ್ರಿಕಾ ತಂಡವನ್ನು ನಿರ್ಭಂದಿಸುವ ಕೆಲಸವನ್ನು ತಂಡದ ಬೌಲರ್‌ಗಳು ಮಾಡಿದರೆ, ರನ್ ಚೇಸ್ ವೇಳೆ ಟೀಂ ಇಂಡಿಯಾದ ಬ್ಯಾಟರ್‌ಗಳು ಅಮೋಘ ಆಟವಾಡಿದರು. ಸ್ಮೃತಿ ಮಂಧಾನ ಮತ್ತು ಶೆಫಾಲಿ ವರ್ಮಾ 61 ರನ್‌ಗಳ ಜೊತೆಯಾಟ ನೀಡಿದರು. ಇದಾದ ಬಳಿಕ ಶೆಫಾಲಿ ವರ್ಮಾ 25 ರನ್ ಗಳಿಸಿ ಔಟಾದರು. ಶೆಫಾಲಿ ವರ್ಮಾ ಔಟಾದ ನಂತರ ಸ್ಮೃತಿ ಮಂಧಾನ ವೇಗದ ಬ್ಯಾಟಿಂಗ್ ಮುಂದುವರಿಸಿದರು. ಆದರೆ, 83 ಎಸೆತಗಳಲ್ಲಿ 90 ರನ್ ಗಳಿಸಿ ಶತಕ ವಂಚಿತರಾಗಿ ಔಟಾದರು.**

ಆದರೆ ಒಂದೇ ಒಂದು ತಪ್ಪು ಹೊಡೆತದಿಂದಾಗಿ ವಿಕೆಟ್ ಕೈಚೆಲ್ಲಿದರು.

ಸ್ಮೃತಿ ಮಂಧಾನ ಹೊರತಾಗಿ ಟೀಂ ಇಂಡಿಯಾ ನಾಯಕಿ ಹರ್ಮನ್‌ಪ್ರೀತ್ ಕೌರ್ ಕೂಡ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿ 48 ಎಸೆತಗಳಲ್ಲಿ 42 ರನ್ ಕಲೆಹಾಕಿದರು. ಅಂತಿಮವಾಗಿ 216 ರನ್‌ಗಳ ಗುರಿ ಬೆನ್ನತ್ತಿದ ಟೀಂ ಇಂಡಿಯಾ 40.4 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ಸುಲಭವಾಗಿ ಗೆಲುವು ಸಾಧಿಸಿತು.

## ಕೋಚ್ ಆಗಲು ಗಂಭೀರ್ ಒಡ್ಡಿದ್ದ ಷರತ್ತು ಒಪ್ಪಿದ ಬಿಸಿಸಿಐ

ಬೆಂಗಳೂರು: ಟೀಮ್ ಇಂಡಿಯಾದ ರಾಹುಲ್ ದ್ರಾವಿಡ್ ಅವರ ಕೋಚಿಂಗ್ ಅವಧಿ ಟಿ20 ವಿಶ್ವಕಪ್ ಬಳಿಕ ಮುಕ್ತಾಯಗೊಳ್ಳಲಿದೆ. ಆ ಬಳಿಕ ನೂತನ ಕೋಚ್ ಆಯ್ಕೆಯಾಗಲಿದ್ದು ಗೌತಮ್ ಗಂಭೀರ್ ಸಂಭಾವ್ಯರ ಪಟ್ಟಿಯಲ್ಲಿ ಅಗ್ರ ಸ್ಥಾನ ಪಡೆದುಕೊಂಡಿದ್ದಾರೆ. ಆದರೆ, ಅವರು ಕೋಚ್ ಆಗಲು ಬಿಸಿಸಿಐ ಆಹ್ವಾನವನ್ನು ಒಪ್ಪುವ ಮೊದಲು ಹಲವಾರು ಷರತ್ತುಗಳನ್ನು ಒಡ್ಡಿದ್ದರು. ಅದರಲ್ಲೊಂದು ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ತಂಡದಲ್ಲಿ ಇರಬಾರದು ಎಂಬುದು. ಇದೂ ಸೇರಿದಂತೆ ಹಲವಾರು ಷರತ್ತುಗಳ ಬೇಡಿಕೆ ಇಟ್ಟಿದ್ದರು. ಅವೆಲ್ಲದಕ್ಕೂ ಇದೀಗ ಬಿಸಿಸಿಐ ಒಪ್ಪಿಗೆ ನೀಡಿದೆ.

ಕೊಹ್ಲಿಯನ್ನು ತಂಡದಿಂದ ಹೊರಗಿಡಿ

ವಾರದ ಆರಂಭದಲ್ಲಿ ಗೌತಮ್ ಗಂಭೀರ್ ಈ ಹುದ್ದೆಗೆ ಕರೆಯಲಾಗಿದ್ದ ಸಂದರ್ಶನದಲ್ಲಿ ಭಾಗವಹಿಸಿದ್ದರು. ಬಿಸಿಸಿಐನ ಕ್ರಿಕೆಟ್ ಸಲಹಾ ಸಮಿತಿ (ಸಿಎಸಿ) ಯೊಂದಿಗೆ ಸಂವಹನ ನಡೆಸಿದ್ದರು. ಈ ವೇಳೆ ಅವರು ಒಂದಿಷ್ಟು ಡಿಮ್ಯಾಂಡ್‌ಗಳನ್ನು ಮುಂದಿಟ್ಟಿದ್ದರು. ಸಿಎಸಿಯಿಂದ ಸಂದರ್ಶನಕ್ಕೆ ಒಳಗಾದ ಏಕೈಕ ಅಭ್ಯರ್ಥಿ ಗಂಭೀರ್ ಅಲ್ಲ. ಭಾರತದ ಮಾಜಿ ಕ್ರಿಕೆಟಿಗ ಡಬ್ಲ್ಯು ವಿ ರಾಮನ್ ಕೂಡ ಸಂದರ್ಶನದಲ್ಲಿ ಭಾಗವಹಿಸಿದ್ದರು. ವರದಿಗಳ ಪ್ರಕಾರ, ಇಬ್ಬರೂ ಅಭ್ಯರ್ಥಿಗಳು ತಮ್ಮ ಸಂದರ್ಶನದಲ್ಲಿ ಸಿಎಸಿಯನ್ನು ಮೆಚ್ಚಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ ಗೌತಮ್ ಗಂಭೀರ್ ಗೆ ಅವಕಾಶ ಕೊಡುವ ಮೊದಲು ಬಿಸಿಸಿಐಗೂ ಸಾಕಷ್ಟು ಕೆಲಸಗಳಿವೆ. ಯಾಕೆಂದರೆ ಅವರ ಷರತ್ತುಗಳು ದೊಡ್ಡ ಮಟ್ಟಿನವು. ಟೀಕೆಗಳನ್ನು ಎದುರಿಸಬೇಕಾಗಬಹುದು. ಟೀಂ ಇಂಡಿಯಾ ಕೋಚ್ ಹುದ್ದೆಗೆ ಗೌತಮ್ ಗಂಭೀರ್ ಷರತ್ತು ಗೌತಮ್ ಗಂಭೀರ್ ಭಾರತದ ಮುಖ್ಯ ಕೋಚ್ ಹುದ್ದೆಗೆ ಸಮ್ಮತಿ ನೀಡುವ ಮೊದಲು ಹಲವಾರು ಷರತ್ತುಗಳನ್ನು ವಿಧಿಸಿದ್ದಾರೆ. ಬಿಸಿಸಿಐ ಇದೀಗ ಅವೆಲ್ಲವನ್ನೂ ಒಪ್ಪಿಕೊಂಡಿದೆ.

ಭಾರತದ ಮಾಜಿ ಆರಂಭಿಕ ಆಟಗಾರ ಹೊಸ ಮುಖ್ಯ ಕೋಚ್ ಆಗಲು ಐದು ಷರತ್ತುಗಳನ್ನು ವಿಧಿಸಿದ್ದಾರೆ ಎಂದು ನವಭಾರತ್ ಟೈಮ್ಸ್ ವರದಿ ಮಾಡಿದೆ. ಮೊದಲನೆಯ ಷರತ್ತೆಂದರೆ ಅವರು ಹೊರಗಿನಿಂದ ಯಾವುದೇ ಹಸ್ತಕ್ಷೇಪವಿಲ್ಲದೆ ತಂಡದ ಸಂಪೂರ್ಣ ನಿಯಂತ್ರಣ ಬಯಸಿರುವುದು. ತಮ್ಮದೇ ಆದ ಸಹಾಯಕ ಸಿಬ್ಬಂದಿಯನ್ನು ಆಯ್ಕೆ ಮಾಡುವ ಸ್ವಾತಂತ್ರ್ಯವನ್ನು ಹೊಂದಿರಬೇಕು ಎಂದು ಕೋರಿದ್ದಾರೆ. ಮೂರನೇ ಷರತ್ತು ಚಾಂಪಿಯನ್ಸ್ ಟ್ರೋಫಿ 2025 ಹಿರಿಯ ಆಟಗಾರರಿಗೆ ಕೊನೆಯ ಅವಕಾಶವಾಗಿರಬೇಕು.



### ಗೌತಮ್ ಗಂಭೀರ್ ವಿಧಿಸಿರುವ ಐದು ಷರತ್ತುಗಳು ಇಲ್ಲಿವೆ

- ತಂಡದ ಸಂಪೂರ್ಣ ನಿಯಂತ್ರಣ, ಬಾಹ್ಯ ಹಸ್ತಕ್ಷೇಪ ಇರಬಾರದು
- ಸಹಾಯಕ ಸಿಬ್ಬಂದಿಯನ್ನು ಆಯ್ಕೆ ಮಾಡುವ ಸ್ವಾತಂತ್ರ್ಯ ನೀಡಬೇಕು
- ಚಾಂಪಿಯನ್ಸ್ ಟ್ರೋಫಿ ಹಿರಿಯ ಆಟಗಾರರಿಗೆ ಕೊನೆಯ ಅವಕಾಶ ಪ್ರತ್ಯೇಕ ಟೆಸ್ಟ್ ತಂಡ ರಚಿಸುವುದು 2027ರ ವಿಶ್ವಕಪ್ ಗೆ ಮಾರ್ಗಸೂಚಿ ಸಿದ್ಧಪಡಿಸುವುದು
- ಕೊಹ್ಲಿ ಮತ್ತು ರೋಹಿತ್ ಮಾತ್ರ ಹಿರಿಯ ಆಟಗಾರರೆಲ್ಲರೂ ಜಾಗ ಖಾಲಿ ಮಾಡುವುದು

ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರನ್ನು ಗಂಭೀರ್ ನಿರ್ದಿಷ್ಟವಾಗಿ ಹಿರಿಯ ಆಟಗಾರರು ಎಂದು ಉಲ್ಲೇಖಿಸಿದ್ದಾರೆ. ಮುಂದಿನ ವರ್ಷ ಪಂದ್ಯಾವಳಿಯಲ್ಲಿ ತಂಡವು ವಿಫಲವಾದರೆ ಅವರು ದಾರಿ ಮಾಡಿಕೊಡಬೇಕು ಎಂದು ಕೋರಿದ್ದಾರೆ. ಗಂಭೀರ್ ಸಂಪೂರ್ಣವಾಗಿ ಪ್ರತ್ಯೇಕ ಟೆಸ್ಟ್ ತಂಡ ಬಯಸಿದ್ದಾರೆ.



## ದಕ್ಷಿಣದ ಸಿನಿಮಾಗಳ ಮುಂದೆ 'ಗೌರಿ' ಸಾಂಗ್ ಸಖತ್ ಟ್ರೆಂಡಿಂಗ್

ಇಂದ್ರಜಿತ್ ಲಂಕೇಶ್ ನಿರ್ದೇಶನದ ಸಮರ್ಜಿತ್ ಸಾನ್ಯಾ ಅಯ್ಯರ್ ಅಭಿನಯದ 'ಗೌರಿ'ಚಿತ್ರದ ಹುಬ್ಬಳ್ಳಿ ಜವಾರಿ ಶೈಲಿಯ 'ಧೂಳ್ ಎಬ್ಬಿಸಾವ..' ಹಾಡು ಬಿಡುಗಡೆ ಆಗಿದ್ದು ಈಗಾಗಲೇ ಸಾಮಾಜಿಕ ಜಾಲತಾಣದಲ್ಲಿ ಸಖತ್ ಟ್ರೆಂಡಿಂಗ್ ನಲ್ಲಿದೆಎಲ್ಲೆಲ್ಲೂ ಕೇಳಿ ಬರುತ್ತಿರೋ ಧೂಳ್ ಎಬ್ಬಿಸಾವ ಹಾಡು ಈಗ ಹೊಸ ಇತಿಹಾಸ ಬರೆದಿದೆ. ಧೂಳ್ ಎಬ್ಬಿಸಾವ ಸಾಂಗ್ ಆಲ್ ಇಂಡಿಯಾ ಲೆವೆಲನಲ್ಲಿ ಟ್ರೆಂಡ್ ಸೃಷ್ಟಿಸುವ ಮೂಲಕ ರೆಕಾರ್ಡ್ ಮಾಡಿದೆ. ಶಿವುಬೆರ್ಗಿ ಸಾಹಿತ್ಯ ಬರೆದು, ಸಂಗೀತ ಸಂಯೋಜಿಸಿರುವ ಈ ಹಾಡನ್ನು ಅನಿರುದ್ಧ್ ಶಾಸ್ತ್ರೀ ಮತ್ತು ಅನನ್ಯಾ ಭಟ್ ಅವರ ಸುಂದರ ಕಂಠದಲ್ಲಿ ಮೂಡಿಬಂದಿದೆ. 'ಗೌರಿ' ಚಿತ್ರದ ನಾಯಕ ಸಮರ್ಜಿತ್ ಲಂಕೇಶ್ ಮತ್ತು ಖ್ಯಾತ ನಟಿ ಸಂಜನಾ ಆನಂದ್ ಈ ಹಾಡಿಗೆ ಭರ್ಜರಿಯಾಗಿ ಸ್ಟೆಪ್ ಹಾಕಿದ್ದಾರೆ. ಭಜರಂಗಿ ಮೋಹನ್ ಈ ಹಾಡಿಗೆ ನೃತ್ಯ ಸಂಯೋಜಿಸಿದ್ದಾರೆ

ಇನ್ಸ್ಟಾಗ್ರಾಂ ಮತ್ತು ಯೂಟ್ಯೂಬ್ ನಲ್ಲಿ ಟಾಪ್ 5 ಟ್ರೆಂಡಿಂಗ್ ನಲ್ಲಿರುವ ಈ ಹಾಡಿಗೆ ನಾಡಿನ ಲಕ್ಷಾಂತರ ಮಂದಿ ರೀಲ್ಸ್ ಮಾಡುತ್ತಿದ್ದಾರೆ. ಒಂದೊಂದು ರೀಲ್ಸ್ ಲಕ್ಷಾಂತರ ವ್ಯೂಸ್ ಮತ್ತು ಲೈಕ್ಸ್ ಪಡೆಯುತ್ತಿವೆ. ಕರ್ನಾಟಕ ಸೇರಿದಂತೆ ಇಡೀ ದೇಶದ ಜನರು ಈ ಹಾಡಿಗೆ ಫಿದಾ ಆಗಿದ್ದಾರೆಮತ್ತೊಂದು ವಿಶೇಷ ಅಂದ್ರೆ ಆಲ್ ಇಂಡಿಯಾ ಲೆವೆಲ್ ಟ್ರೆಂಡಿಂಗ್ ನಲ್ಲಿ ಸೌತ್ ಸಾಂಗ್ ಗಳು ಸದ್ದು ಮಾಡುತ್ತಿರುವ ಲಿಸ್ಟ್ ನಲ್ಲಿ ಮೊದಲನೇ ಸ್ಥಾನ ಕಲ್ಕಿ ಚಿತ್ರದ ಹಾಡು ಪಡೆದುಕೊಂಡಿದ್ರೆ ಎರಡನೇ ಸ್ಥಾನ ಪುಷ್ಪ2 ಚಿತ್ರದ ಹಾಡು ಪಡೆದುಕೊಂಡಿದೆ.

ಇನ್ನು ಮೂರನೇ ಸ್ಥಾನದಲ್ಲಿ ಕನ್ನಡದ ಇಂದ್ರಜಿತ್ ಲಂಕೇಶ್ ನಿರ್ದೇಶನದ ಗೌರಿ ಸಿನಿಮಾದ ಧೂಳ್ ಎಬ್ಬಿಸುವ ಸಾಂಗ್ ಇದೆ ಅನ್ನೋದೆ ಖುಷಿಯ ವಿಚಾರಒಟ್ನಲ್ಲಿ ಸದ್ಯ ಆಲ್ ಇಂಡಿಯಾ ಮ್ಯೂಸಿಕ್ ಟ್ರೆಂಡಿಂಗ್ ಲೀಸ್ಟ್ ನಲ್ಲಿ ಬರೀ ಸೌತ್ ಚಿತ್ರಗಳೇ ಇದೆ ಎನ್ನುವುದು ಸೌತ್ ಸಿನಿಮಾ ಅಭಿಮಾನಿಗಳಿಗೆ ಹೆಮ್ಮೆಯ ವಿಚಾರವಾಗಿದೆ.

ಇನ್ನು ಕಮಲ್ ಹಾಸನ್ ಅವರ ಇಂಡಿಯನ್ 2 ಚಿತ್ರದ ಹಾಡನ್ನು ಹಿಂದಿಕ್ಕಿದೆ ಗೌರಿ ಸಿನಿಮಾದ ಹಾಡು..ಅದರ ಜೊತೆಗೆ ಉತ್ತರ ಕರ್ನಾಟಕದ ಮಂದಿಯಂತು ಈ ಹಾಡಿಗೆ ಕುಣಿದು ಕುಪ್ಪಳಿಸುತ್ತಿದ್ದಾರೆ.



## ರಶ್ಮಿಕಾ ಬಳಿಕ ಸಕ್ಸಸ್‌ಗಾಗಿ ಜ್ಯೋತಿಷಿ ಮೊರೆ ಹೋದ ನಿಶ್ವಿಕಾ ನಾಯ್ಡು

ಪಡ್ಡೆಹುಲಿ, ಜಂಟಲ್‌ಮ್ಯಾನ್ ಸಿನಿಮಾ ಖ್ಯಾತಿಯ ನಿಶ್ವಿಕಾ ನಾಯ್ಡು ಇದೀಗ ರಶ್ಮಿಕಾ ಮಂದಣ್ಣ ಹಾದಿಯಲ್ಲೇ ಹೆಜ್ಜೆ ಇಡುತ್ತಿದ್ದಾರೆ. ಖ್ಯಾತ ಜ್ಯೋತಿಷಿ ವೇಣು ಸ್ವಾಮಿ ಬಳಿ ಸಕ್ಸಸ್‌ಗಾಗಿ ರಶ್ಮಿಕಾ ನಂತರ ನಿಶ್ವಿಕಾ ಕೂಡ ಪೂಜೆ ಮಾಡಿಸಿದ್ದಾರೆ. ಇದರ ವಿಡಿಯೋವನ್ನು ಜ್ಯೋತಿಷಿ ಹಂಚಿಕೊಂಡಿದ್ದಾರೆ.

ಕನ್ನಡದ ಹಲವು ಸಿನಿಮಾಗಳಲ್ಲಿ ನಟಿಸಿದ ನಿಶ್ವಿಕಾ ಈಗ ವೇಣು ಸ್ವಾಮಿ ಬಳಿ ವಿಶೇಷ ಪೂಜೆ ಮಾಡಿಸಿದ್ದಾರೆ. ಪೂಜೆಯ ಕಾರ್ಯದ ಬಳಿಕ ನಟಿಯ ಕುರಿತು ಮಾತನಾಡಿರುವ ವೇಣು ಸ್ವಾಮಿ, ನಿಶ್ವಿಕಾ ಕನ್ನಡದ ನಟಿ, ಸಾಕಷ್ಟು ಖ್ಯಾತಿ ಪಡೆದುಕೊಂಡಿದ್ದಾರೆ. ಪ್ರಭುದೇವ ಅವರೊಂದಿಗೆ ಡ್ಯಾನ್ಸ್ ಮಾಡೋದು ಸುಮ್ಮನೆ ಅಲ್ಲ. ಪ್ರಭುದೇವ ಅವರಿಗೆ ಸಮವಾಗಿ ಡ್ಯಾನ್ಸ್ ಮಾಡಿದ್ದಾರೆ. ಸದ್ಯ ನಿಶ್ವಿಕಾ ತೆಲುಗಿಗೆ ಎಂಟ್ರಿ ಕೊಡಲಿದ್ದಾರೆ. ನಿಶ್ವಿಕಾಗೆ ಶುಭವಾಗಲಿ ಎಂದಿದ್ದಾರೆ. ನಿಶ್ವಿಕಾ ಜಾತಕವನ್ನು ನಾನು ನೋಡಿದ್ದೀನಿ, ಅವರು ಒಳ್ಳೆಯ ಜಾತಕವನ್ನು ಹೊಂದಿದ್ದಾರೆ. ತೆಲುಗಿನಲ್ಲೂ ಖ್ಯಾತಿ ಪಡೆದುಕೊಳ್ಳಬೇಕು. ಸ್ಟಾರ್ ಆಗಿ ಬೆಳೆಯುವಂತಹ ಜಾತಕವನ್ನು ಅವರು ಹೊಂದಿದ್ದಾರೆ. ಶೀಘ್ರವೇ ಅವರಿಗೆ ಯಶಸ್ಸು ಅಂತ ಪ್ರಾರ್ಥನೆ ಮಾಡ್ತೇನೆ ಎಂದು ವೇಣುಸ್ವಾಮಿ ಹೇಳಿದ್ದಾರೆ. ಬಳಿಕ ನಿಮ್ಮ ಹಾರೈಕೆ ಇದ್ದರೆ ಖಂಡಿತ ಯಶಸ್ವಿ ಆಗ್ತೀನಿ ಅಂತ ನಂಬಿಕೆ ಇದೆ. ಧನ್ಯವಾದ ಎಂದು ಕಾಲಿಗೆ ನಮಸ್ಕಾರ ಮಾಡಿ ಆರ್ಶೀವಾದ ಪಡೆದುಕೊಂಡಿದ್ದಾರೆ. ಕೆಲ ವರ್ಷಗಳ ಹಿಂದೆ ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಕೂಡ ವೇಣು ಸ್ವಾಮಿ ಬಳಿ ಪೂಜೆ ಮಾಡಿಸಿದರು. ಈಗ ಅವರು ನ್ಯಾಷನಲ್ ಸ್ಟಾರ್ ಆಗಿ ಬೆಳೆದಿದ್ದಾರೆ. ಬೆಂಗಳೂರಿನ ಬೆಡಗಿ ನಿಧಿ ಅಗರ್ವಾಲ್ ಕೂಡ ಪೂಜೆ ಮಾಡಿಸಿದರು. ಅವರು ತೆಲುಗಿನ ಸ್ಟಾರ್ ನಟರಿಗೆ ನಾಯಕಿಯಾಗಿ ನಟಿಸಿದ್ದಾರೆ. ಈಗ ಅದೇ ಹಾದಿಯಲ್ಲಿ ನಿಶ್ವಿಕಾ ಹೆಜ್ಜೆ ಇಟ್ಟಿದ್ದಾರೆ.



## ಸಮಂತಾ ಜೊತೆ ಶಾರುಖ್ ಖಾನ್ ರೊಮ್ಯಾನ್ಸ್



ಪಠಾಣ್, ಜವಾನ್ ಸಕ್ಸಸ್ ಬಳಿಕ ಬಾಲಿವುಡ್‌ನಲ್ಲಿ ಕಿಂಗ್ ಖಾನ್ ಶಾರುಖ್‌ಗೆ ಬೇಡಿಕೆ ಹೆಚ್ಚಾಗಿದೆ. ಇದೀಗ ನಯನತಾರಾ ಬಳಿಕ ಸಮಂತಾ ಜೊತೆ ಶಾರುಖ್ ಖಾನ್ ರೊಮ್ಯಾನ್ಸ್ ಮಾಡಲು ಸಜ್ಜಾಗಿದ್ದಾರೆ. ಡಂಕಿ ನಂತರ ಮತ್ತೊಮ್ಮೆ ಖ್ಯಾತ ನಿರ್ದೇಶಕ ರಾಜ್ ಕುಮಾರ್ ಹಿರಾನಿ ಜೊತೆ ಶಾರುಖ್ ಕೈಜೋಡಿಸಿದ್ದಾರೆ. ಈ ಸಿನಿಮಾದಲ್ಲೂ ಸೌತ್ ನಟಿಯನ್ನೇ ನಾಯಕಿಯನ್ನಾಗಿ ಮಾಡಲು ಚಿತ್ರತಂಡ ನಿರ್ಧರಿಸಿದೆ. ನಯನತಾರಾ ಜೊತೆ 'ಜವಾನ್' ಸಿನಿಮಾ ಕ್ಲಿಕ್ ಆದಂತೆ ಹೊಸ ಸಿನಿಮಾ ಕೂಡ ಗೆಲ್ಲಲಿ ಎಂದು ಸಮಂತಾರನ್ನು ರಾಜ್‌ಕುಮಾರ್ ಹಿರಾನಿ ಟೀಮ್ ಸಂಪರ್ಕಿಸಿದೆ. ಸಮಂತಾ ಕೂಡ ಕಥೆ ಕೇಳಿದ್ದಾರಂತೆ. ಆದರೆ ಎರಡು ಕಡೆ ಒಪ್ಪಿಗೆ ಆಯ್ತಾ ಎಂಬುದರ ಬಗ್ಗೆ ಖಾತ್ರಿಯಾಗಿಲ್ಲ.

ಚಿತ್ರತಂಡ ಅಧಿಕೃತವಾಗಿ ಹೇಳುವವರೆಗೂ ಕಾಯಬೇಕಿದೆ. ಬಾಲಿವುಡ್ ಸ್ಟಾರ್‌ಗೆ ಸಮಂತಾ ನಾಯಕಿಯಾಗ್ತಾರೆ ಎಂಬ ಸುದ್ದಿ ಕೇಳಿಯೇ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. 'ಖುಷಿ' ಸಿನಿಮಾದ ಬಳಿಕ ಯಾವುದೇ ಘೋಷಣೆ ಕೂಡ ಆಗಿಲ್ಲ. ಹಾಗಾಗಿ ನಟಿಯ ಕಡೆಯಿಂದ ಗುಡ್ ನ್ಯೂಸ್ ಸಿಗಲಿ ಎಂದು ಫ್ಯಾನ್ಸ್ ಕಾಯ್ತಿದ್ದಾರೆ.



## ಮಾದಕ ಲುಕ್‌ನಲ್ಲಿ ಪಡ್ಡೆಹುಡುಗರ ನಿದ್ದೆ ಕದ್ದ ಚೈತ್ರಾ ಆಚಾರ್

ಸ್ಯಾಂಡಲ್‌ವುಡ್ ನಟಿ ಚೈತ್ರಾ ಆಚಾರ್ ಮಾದಕ ಲುಕ್‌ನಲ್ಲಿ ಫೋಟೋಶೂಟ್ ಮಾಡಿಸಿದ್ದಾರೆ. ನಟಿಯ ಸೆಕ್ಸಿ ಪೋಸ್‌ಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಸದ್ಯ 'ಟೋಬಿ'ನಟಿಯ ಸ್ಟೈಲೀಶ್ ಲುಕ್ ಸೋಷಿಯಲ್ ಮೀಡಿಯಾದಲ್ಲಿ ಹಲ್ ಚಲ್ ಎಬ್ಬಿಸಿದೆ.ದಿನದಿಂದ ದಿನಕ್ಕೆ ನಟಿ ಮತ್ತಷ್ಟು ಬೋಲ್ಡ್ ಆಗಿ ಫೋಟೋಶೂಟ್ ಮಾಡಿಸುವ ಮೂಲಕ ಕೆಲವರ ಕೆಂಗಣ್ಣಿಗೆ ಗುರಿಯಾದ್ರೆ, ಇತ್ತ ಪಡ್ಡೆಹುಡುಗರ ಕನಸಿನ ಕಣ್ಮಣಿಯಾಗಿ ಗಟ್ಟಿ ಸ್ಥಾನ ಗಿಟ್ಟಿಸಿಕೊಂಡಿದ್ದಾರೆ.

ಇದೀಗ ವೈಟ್ ಮತ್ತು ಪಿಂಕ್ ಬಣ್ಣದ ಗೌನ್ ಧರಿಸಿ ಸಖತ್ ಹಾಟ್ ಆಗಿ ಪೋಸ್ ಕೊಟ್ಟಿದ್ದಾರೆ. ಹಂಚಿಕೊಂಡಿರುವ ಕೆಲ ಫೋಟೋಗಳು ಬ್ಯಾಕ್‌ಲೆಸ್ ಆಗಿದೆ. ವಿವಿಧ ಭಂಗಿಯಲ್ಲಿ ಮಾದಕ ಲುಕ್‌ನಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಟೋಬಿ' ನಟಿ ಚೈತ್ರಾ ಅದ್ಭುತ ಕಲಾವಿದೆ ಎಂಬುದನ್ನು ಇತ್ತೀಚಿನ ಸಿನಿಮಾಗಳಲ್ಲಿ ಪ್ರೂವ್ ಮಾಡಿದ್ದಾರೆ. ಇದೀಗ ತಮಿಳಿನಿಂದಲೂ ನಟಿಗೆ ಬುಲಾವ್ ಸಿಕ್ಕಿದೆ. 'ಸಪ್ತಸಾಗರದಾಚೆ ಎಲ್ಲೋ', ಟೋಬಿ ಸಿನಿಮಾದಲ್ಲಿ ನಟಿಸಿದ ಮೇಲೆ ಚೈತ್ರಾ ಆಚಾರ್‌ಗೆ ಬೇಡಿಕೆ ಜಾಸ್ತಿಯಾಗಿದೆ. ರಕ್ಷಿತ್ ಶೆಟ್ಟಿ ಮತ್ತು ರಾಜ್ ಬಿ ಶೆಟ್ಟಿಗೆ ನಾಯಕಿಯಾಗಿ ಅದ್ಭುತವಾಗಿ ನಟಿಸಿದರು. ಸದ್ಯ ಚೈತ್ರಾ ಆಚಾರ್ ಕೈಯಲ್ಲಿ ಹ್ಯಾಪಿ ಬರ್ತ್‌ಡೇ ಟು ಮಿ, ಸೇರಿದಂತೆ ಕನ್ನಡ ತಮಿಳು ಸಿನಿಮಾಗಳಿವೆ.



## ಲಾಯರ್ ಆಗಿ ಶಿವಣ್ಣ ಖಡಕ್ ಎಂಟ್ರಿ

ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ನಟನೆಯ 'ಭೈರತಿ ರಣಗಲ್' ಸಿನಿಮಾ ಮೇಕಿಂಗ್ ವಿಡಿಯೋ ರಿಲೀಸ್ ಮಾಡಿದೆ ಚಿತ್ರತಂಡ.

ಚಿತ್ರದಲ್ಲಿ ಲಾಯರ್ ಪಾತ್ರದಲ್ಲಿ ಸಖತ್ ಖಡಕ್ ಆಗಿ ಶಿವಣ್ಣ ಕಾಣಿಸಿಕೊಂಡಿದ್ದಾರೆ. ಮೇಕಿಂಗ್ ವಿಡಿಯೋಗೆ ಅಭಿಮಾನಿಗಳಿಂದ ಮೆಚ್ಚುಗೆ ವ್ಯಕ್ತವಾಗಿದೆ. ಗೀತಾ ಪಿಕ್ಚರ್ಸ್ ಬ್ಯಾನರ್‌ನ 'ಭೈರತಿ ರಣಗಲ್ ಸಿನಿಮಾ ನಿರ್ಮಾಣವಾಗುತ್ತಿದೆ.

ಗೀತಾ ಶಿವರಾಜ್‌ಕುಮಾರ್ ಹುಟ್ಟುಹಬ್ಬಕ್ಕೆ ಚಿತ್ರತಂಡ ಸ್ಪೆಷಲ್ ಮೇಕಿಂಗ್ ವೀಡಿಯೋ ರಿಲೀಸ್ ಮಾಡಿ ಶುಭಕೋರಿದೆ.

'ಮಫ್ತಿ'ಗಿಂತ ಬಹಳ ಅದ್ದೂರಿಯಾಗಿ ಪ್ರೀಕ್ವೆಲ್ ಬರಲಿದೆ. ಮಾಫಿಯಾ ಡಾನ್ ಭೈರತಿ ರಣಗಲ್ ಹಿನ್ನೆಲೆ ಏನು ಎನ್ನುವುದನ್ನು ಈ ಚಿತ್ರದಲ್ಲಿ ಕಟ್ಟಿಕೊಡುವ ಪ್ರಯತ್ನ ಮಾಡಿದ್ದಾರೆ. ವಕೀಲನಾಗಿದ್ದ ಭೈರತಿ ರಣಗಲ್ ದೊಡ್ಡ ಡಾನ್ ಆಗಿ ಬದಲಾಗಿದ್ದು ಯಾಕೆ ಎನ್ನುವ ಪ್ರಶ್ನೆಗೆ ಚಿತ್ರಮಂದಿರದಲ್ಲೇ ಉತ್ತರ ಸಿಗಲಿದೆ.

ನೂರಾರು ಜನ ಕಲಾವಿದರು, ತಂತ್ರಜ್ಞರು ಚಿತ್ರಕ್ಕಾಗಿ ಹಗಳಿರುಲು ಕೆಲಸ ಮಾಡುತ್ತಿದ್ದಾರೆ. ಇಲ್ಲೂ ಗಣಿ ಪ್ರದೇಶ, ಹೆಲಿಕ್ಯಾಪ್ಟರ್ ಶಾಟ್ಸ್ ಇದೆ. ಇನ್ನೂ ಪೊಲೀಸ್ ಠಾಣೆಯನ್ನೇ ರಣಗಲ್ ಸುಟ್ಟು ಬಿಡುವ ಸನ್ನಿವೇಶ ಕೂಡ ಚಿತ್ರದಲ್ಲಿರುವಂತೆ ಕಾಣುತ್ತಿದೆ. ಒಟ್ನಲ್ಲಿ ಈ ವಿಡಿಯೋ ನೋಡಿ ಫ್ಯಾನ್ಸ್ ಚಿಂದಿ ಆಗಿದೆ ಎಂದು ಹಾಡಿಹೊಗಳಿದ್ದಾರೆ.

ಶಿವರಾಜ್‌ಕುಮಾರ್‌ಗೆ ಜೋಡಿಯಾಗಿ ರುಕ್ಮಿಣಿ ವಸಂತ್ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ರಾಹುಲ್ ಬೋಸ್, ದೇವರಾಜ್, ಛಾಯಾ ಸಿಂಗ್, ಮಧು ಗುರುಸ್ವಾಮಿ, ವಸಿಷ್ಠ ಸಿಂಹ ಚಿತ್ರದ ಮುಖ್ಯ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ನವೀನ್ ಕುಮಾರ್ ಛಾಯಾಗ್ರಹಣ, ರವಿ ಬಸ್ರೂರು ಸಂಗೀತ ಚಿತ್ರಕ್ಕಿದೆ. ಅಂದಹಾಗೆ, ಆಗಸ್ಟ್ 15ರಂದು ಸಿನಿಮಾ ರಿಲೀಸ್ ಆಗಲಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966